ಸಂಪುಟ: 13 Volume | ಸಂಚಿಕೆ: 278 Issue | ಪುಟಗಳು 08 Pages | ಮಂಗಳವಾರ 23 ಡಿಸೆಂಬರ್ 2025 | ₹6 | PRGINO.120927 (RNINO: KARKAN/2011/48371) | BDR/054/2026-2027 | mallammanudi@gmail.com | www.mallammanudi.in | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

ಸಂಪಾದಕರು: ರಮೇಶ ರೆಡ್ಡಿ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

**ಬೆಳಗು**

ಮಾನವನೆದೆಯಲಿ ಆರದೆ ಉರಿಯಲಿ ದೇವರು ಹಚ್ಚಿದ ದೀಪ, ರೇಗುವ ದನಿಗೂ ರಾಗವು ಒಲಿಯಲಿ ಮೂಡಲ ಮಧುರಾಲಾಪ.

–ಲಕ್ಷ್ಮೀನಾರಾಯಣ ಭಟ್

ಗ್ಯಾರಂಟಿ: ಜಾರಿಯಿಂದ ತಲಾದಾಯ ಹೆಚ್ಚಳ 6

ಮತದಾನದಿಂದ ಪ್ರಜಾಪ್ರಭುತ್ವದ ಬಲವರ್ಧನೆ 7

ದೇವಸ್ಥಾನ ಮೂಲ ಸ್ವರೂಪಕ್ಕೆ ತರುವ ಕೆಲಸ 8

## ಆಹಾರ ನಿರೀಕ್ಷರಾಗಿ ಶೇಖರ್



**ಚಿಟಗುಪ್ಪ:** ತಾಲೂಕ ಆಹಾರ ನಿರೀಕ್ಷರಾದ ಶೇಖರ್ ರವರು ಸುಮಾರು 2 ವರ್ಷಗಳಿಂದ ಅತ್ಯುತ್ತಮವಾಗಿ ಸೇವೆ ಸಲ್ಲಿಸುತ್ತಿದ ಇವರನ್ನು ಬೆಂಗಳೂರಿಗೆ ವರ್ಗಾಯಿಸಲಾಯಿತ್ತು. ಮತ್ತೆ ಇವರನ್ನು ಚಿಟಗುಪ್ಪ ತಾಲೂಕ ಆಹಾರ ನಿರೀಕ್ಷಕರಾಗಿ ಶನಿವಾರ ಅಧಿಕಾರ ವಹಿಸಿಕೊಂಡ ಪ್ರಯುಕ್ತ ಕನ್ನಡ ಸೇನೆ ಕರ್ನಾಟಕ ಸಂಘಟನೆಯ ರಾಜ್ಯ ಉಪಾಧ್ಯಕ್ಷ ಡಾ. ರವಿ ಸ್ವಾಮಿ ನಿರ್ಣಾ ರವರ ತಂಡ ಸೋಮವಾರ ಆಹಾರ ನಿರೀಕ್ಷಕ ಶೇಖರ್ ಇವರನ್ನು ಸನ್ಮಾನಿಸಿ ಸ್ವಾಗತಿಸಿದರು.

## ವಿಡಿಯೊ ಲೈವ್‌ನಲ್ಲೇ ಆತ್ಮಹತ್ಯೆ

**ಬಳ್ಳಾರಿ:** ಇಲ್ಲಿನ ಹುಸೇನ್ ನಗರದಲ್ಲಿ ಮಹಿಳೆಯೊಬ್ಬರು ವಿಡಿಯೋ ಕಾಲ್ ಲೈವ್ ನಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮೃತಳನ್ನು 23 ವರ್ಷದ ಮುನ್ನಿ ಎಂದು ಗುರುತಿಸಲಾಗಿದೆ. ಈಕೆ ಮನೆಯಲ್ಲಿ ಲೈವ್ ವಿಡಿಯೋದಲ್ಲಿ ಮಾತನಾಡುತ್ತಿದ್ದಾಗಲೇ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಎರಡು ಮಕ್ಕಳ ತಾಯಿ ಮುನ್ನಿ ಗಂಡನ ಬಿಟ್ಟು 6 ತಿಂಗಳಿನಿಂದ ಒಬ್ಬರೇ ವಾಸಿಸುತ್ತಿದ್ದರು. ಈ ಮಧ್ಯೆ ಮೊಹಮ್ಮದ್ ಶೇಖ್ ಎಂಬಾತನ ಪರಿಚಯವಾಗಿದೆ. ಇಬ್ಬರು ಆತ್ಮೀಯವಾಗಿದ್ದರು. ಆದರೆ ಕೆಲ ದಿನಗಳಿಂದ ಇಬ್ಬರ ನಡುವೆ ಜಗಳ ಶುರುವಾಗಿದ್ದು ಇದರಿಂದ ನೊಂದು ಈ ಕೃತ್ಯ ಎಸಗಿದ್ದಾಳೆ ಎಂದು ಸಂಬಂಧಿಕರು ಆರೋಪಿಸಿದ್ದಾರೆ.

## ಹುಲಿ ಪ್ರತ್ಯಕ್ಷ: ನಿಷೇಧಾಜ್ಞೆ ಜಾರಿ

**ಚಾಮರಾಜನಗರ:** ನಂಜೇದೇವನಪುರ ಗ್ರಾಮದ ಬಳಿ 5 ಹುಲಿ ಪ್ರತ್ಯಕ್ಷವಾದ ಹಿನ್ನೆಲೆಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಜಿಲ್ಲೆಯ ನಂಜೇದೇವನಪುರ, ವೀರನಪುರ ಹಾಗೂ ಉಡಿಗಾಲ ಗ್ರಾಮದ ಜಮೀನುಗಳಲ್ಲಿ ಹುಲಿಗಳು ಓಡಾಟ ಹೆಚ್ಚಿದೆ. ಹೀಗಾಗಿ ಈ ಪ್ರದೇಶಗಳಲ್ಲಿ 144 ಸೆಕ್ಷನ್ ಅನ್ವಯ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ನಂಜೆದೇವಪುರ ಗ್ರಾಮದ ಬಳಿ ಬರೋಬ್ಬರಿ ಐದು ಹುಲಿಗಳು ಒಟ್ಟಿಗೆ ಪ್ರತ್ಯಕ್ಷವಾಗಿದ್ದು, ಸದ್ಯ ಜನರ ಆತಂಕಕ್ಕೆ ಕಾರಣವಾಗಿದೆ. ಹೀಗಾಗಿ ನಂಜೆದೇವಪುರ ಸೇರಿ ಮೂರು ಗ್ರಾಮಗಳಲ್ಲಿ ಇಂದಿನಿಂದ ನಾಳೆ ಸಂಜೆ 6ರವರೆಗೂ 144 ಸೆಕ್ಷನ್ ಜಾರಿ ಮಾಡಿ ಚಾಮರಾಜನಗರ ತಹಶೀಲ್ದಾರ್ ಗಿರಿಜಾ ಆದೇಶ ಹೊರಡಿಸಿದ್ದಾರೆ.

## ಸೋನಿಯಾರಿಂದ ಕ್ರಿಸ್‌ಮಸ್: ರೇವಂತರೆಡ್ಡಿ

**ತೆಲಂಗಾಣ:** ದೇಶದೆಲ್ಲೆಡೆ ಕ್ರಿಸ್ಮಸ್ ಹಬ್ಬವನ್ನು ಸಂಭ್ರಮದಿಂದ ಆಚರಿಸಲು ತಯಾರಿ ನಡೆಯುತ್ತಿದೆ. ಈ ಮಧ್ಯೆ ಇತ್ತೀಚಿನ ದಿನಗಳಲ್ಲಿ ಧರ್ಮದ ಬಗ್ಗೆ ಮಾತನಾಡಿ ಸುದ್ದಿಯಲ್ಲಿರುವ ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ ಮತ್ತೊಂದು ಯಡವಟ್ಟು ಮಾಡಿಕೊಂಡಿದ್ದಾರೆ.



ದಕ್ಷಿಣ ಭಾರತದಲ್ಲಿ ಪ್ರಮುಖವಾಗಿ ತೆಲಂಗಾಣದಲ್ಲಿ ಕ್ರಿಸ್ಮಸ್ ಆಚರಣೆಯನ್ನು ಸಾಧ್ಯವಾಗಿರಿಸಿರುವುದು ಸೋನಿಯಾ ಗಾಂಧಿ ಅವರ ತ್ಯಾಗ ಎಂದು ಹೇಳಿದ್ದಾರೆ. ಸೋನಿಯಾ ಗಾಂಧಿ ತ್ಯಾಗದಿಂದ ನಾವೆಲ್ಲಾ ಇಂದು ಸಂಭ್ರಮದಿಂದ ಕ್ರಿಸ್ಮಸ್ ಆಚರಿಸುತ್ತಿದ್ದೇವೆ ಎಂದು ರೇವಂತ್ ರೆಡ್ಡಿ ಹೇಳಿರುವುದು ಈಗ ವಿವಾದಕ್ಕೆ ದಾರಿ ಮಾಡಿಕೊಟ್ಟಿದೆ.

## ಕ್ವಿಂಟಾಲ್ ತೊಗರಿಗೆ 8,000 ರೂ..!

**ಬಳ್ಳಾರಿ:** ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ ಗುಣಮಟ್ಟದ ತೊಗರಿ ಖರೀದಿ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗಿದೆ ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಕೆ. ಅವರು ಹೇಳಿದ್ದಾರೆ.

ನಗರದ ನೂತನ ಜಿಲ್ಲಾಡಳಿತ ಭವನದ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಪ್ರಸಕ್ತ 2025–26ನೇ ಸಾಲಿನ ಮುಂಗಾರು ಹಂಗಾಮಿನ ತೊಗರಿ ಉತ್ಪನ್ನವನ್ನು ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಖರೀದಿಸಲು ರಾಜ್ಯ ಸರ್ಕಾರ ಆದೇಶಿಸಿರುವ ಹಿನ್ನೆಲೆಯಲ್ಲಿ, ಜಿಲ್ಲೆಯಲ್ಲಿ ರೈತರಿಂದ ತೊಗರಿ ಖರೀದಿ ನಡೆಸಲಾಗುವುದು ಎಂದು



ಹೇಳಿದರು. ಪ್ರತಿ ಕ್ವಿಂಟಾಲ್ 8,000 ರೂ. ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ಪ್ರತಿ ಎಕರೆಗೆ ಗರಿಷ್ಠ 4 ಕ್ವಿಂಟಾಲ್‌ಗಳಂತೆ ಫ್ರೂಟ್ಸ್ ತಂತ್ರಾಂಶದಲ್ಲಿ ಲಭ್ಯವಾಗುವ ಮಾಹಿತಿಯ ಆಧಾರದ ಮೇಲೆ ರೈತರಿಂದ ತೊಗರಿ ಖರೀದಿಸಲಾಗುತ್ತದೆ ಎಂದಿದ್ದಾರೆ.

## ಯಾತ್ರಿ ನಿವಾಸಕ್ಕೆ ಸಚಿವ ಈಶ್ವರ್ ಚಾಲನೆ

**ಭಾಲ್ಕಿ:** ಪರಮ ಪೂಜ್ಯ, ನಮ್ಮೆಲ್ಲರ ಆರಾಧ್ಯ ಗುರುಗಳಾದ ಲಿಂಗೈಕ್ಯ ಡಾ. ಚನ್ನಬಸವ ಪಟ್ಟದೇವರ್ ಅವರ 136ನೇ ಜಯಂತೋತ್ಸವದ ಪವಿತ್ರ ಸಂದರ್ಭದಲ್ಲಿ, ಭಕ್ತರ ಸೇವೆ ಹಾಗೂ ಧಾರ್ಮಿಕ ಸಾಂಸ್ಕೃತಿಕ ಪರಂಪರೆಯ ಸಂರಕ್ಷಣೆಯ ಉದ್ದೇಶದಿಂದ, ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಒದಗಿಸಿದ 1 ಕೋಟಿ ರೂ. ಅನುದಾನದಡಿ, ಭಾಲ್ಕಿಯ ಹಿರೇಮಠದಲ್ಲಿ ನಿರ್ಮಿಸಲಾದ ಪ್ರಸಾದ ನಿಲಯ ಹಾಗೂ ಯಾತ್ರಿ ನಿವಾಸ ಭವನವನ್ನು ಇಂದು ಉದ್ಘಾಟಿಸಲಾಯಿತು.

ನಾಡೋಜ ಪರಮ ಪೂಜ್ಯ ಡಾ. ಬಸವಲಿಂಗ ಪಟ್ಟದೇವರ್ ಅವರ ದಿವ್ಯ ಉಪಸ್ಥಿತಿಯಲ್ಲಿ ನಡೆಯಿತು. ದೂರದೂರಿನಿಂದ ಆಗಮಿಸುವ ಭಕ್ತರು ಹಾಗೂ ಯಾತ್ರಿಕರಿಗೆ ಸುಸಜ್ಜಿತ ವಾಸ್ತವ್ಯ ಮತ್ತು ಅನ್ನಸಂತರ್ಪಣೆಯ



ಸೌಲಭ್ಯ ಒದಗಿಸುವ ಮೂಲಕ, ಪೂಜ್ಯ ಗುರುಗಳ ಸೇವೆ, ತ್ಯಾಗ ಮತ್ತು ಮಾನವೀಯ ಮೌಲ್ಯಗಳ ಸಂದೇಶವನ್ನು ಕಾರ್ಯರೂಪಕ್ಕೆ ತರಲು ಇದು ಸಹಕಾರಿಯಾಗಲಿದೆ.

# ಪವರ್ ಶೇರಿಂಗ್ ಫೈಟ್..!

## ಎಐಸಿಸಿ ಅಧ್ಯಕ್ಷರನ್ನು ಭೇಟಿ ಮಾಡಿದ ಗೃಹ ಸಚಿವ | ಚುರುಕಾದ ಮುಖ್ಯಮಂತ್ರಿ ಬಣ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯ ಕಾಂಗ್ರೆಸ್‌ನಲ್ಲಿ ಕುರ್ಚಿಯ ಫೈಟ್ ಜೋರಾಗುತ್ತಿದೆ. ಪಕ್ಷದ ಆಂತರಿಕ ಕಿತ್ತಾಟಕ್ಕೆ ಬ್ರೇಕ್ ಹಾಕಲು ಹೈಕಮಾಂಡ್ ನಾಯಕರು ವಿಫಲವಾಗಿದ್ದಾರೆ ಎಂಬ ಟೀಕೆ ವ್ಯಾಪಕವಾಗಿದೆ. ಸಮಸ್ಯೆ ಬಗೆಹರಿಸುವ ಮಾತಿನ ಬದಲಾಗಿ ಕೈಚೆಲ್ಲುವ ಹೇಳಿಕೆಯೇ ಕುತೂಹಲ ಚರ್ಚೆಗೆ ಗ್ರಾಸವಾಗಿಸಿದೆ. ಏತನ್ಮಧ್ಯೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಗೃಹ ಸಚಿವ ಡಾ. ಜಿ ಪರಮೇಶ್ವರ್ ಅವರು ಭೇಟಿ ಮಾಡಿ ಮಾತುಕತೆ ನಡೆಸಿಸಿದ್ದು ಚರ್ಚೆಗೆ ಗ್ರಾಸವಾಗಿರುವ ಪವರ್ ಶೇರಿಂಗ್ ಫೈಟ್ ಮಹತ್ವ ಪಡೆದಿದೆ. ಬೆಂಗಳೂರಿನಲ್ಲಿ ಮಲ್ಲಿಕಾರ್ಜುನ ಖರ್ಗೆ, ಪರಮೇಶ್ವರ್ ಭೇಟಿ ನಾನಾ ವ್ಯಾಖ್ಯಾನಗಳಿಗೆ ಕಾರಣವಾಗಿದೆ.

**ಸಿಎಂ ಬಣದ ಆಟ ಶುರು:** ಹೈಕಮಾಂಡ್ ಸ್ಪಷ್ಟ ನಿರ್ಧಾರದ ಮೇಲೆ ಸಿಎಂ ಬಣದ ಆಟ ಶುರುವಾಗಿದೆ. ಹೈಕಮಾಂಡ್ ಸಿಎಂ ಸ್ಥಾನದಲ್ಲಿ ಸಿದ್ದರಾಮಯ್ಯ ಅವರನ್ನು ಮುಂದುವರೆಸಿದರೆ ಸಿದ್ದರಾಮಯ್ಯ ಬಣ ಶಾಂತವಾಗಿರಲಿದೆ. ಆದರೆ ಬದಲಾವಣೆಗೆ ಮುಂದಾದರಲ್ಲಿ ದಲಿತ ಸಿಎಂ ದಾಳ ಉರುಳಿಸಲು ಸಜ್ಜಾಗಿದೆ.

**ದಲಿತ ಸಿಎಂ ಕಾರ್ಡ್:** ನಾಯಕತ್ವ ಬದಲಾವಣೆಯ ಬಗ್ಗೆ ಸದ್ಯ ಹೈಕಮಾಂಡ್ ಯಾವುದೇ ನಿಲುವು ತೆಗೆದುಕೊಂಡಿಲ್ಲ. ಹೀಗಾಗಿ ಎರಡು ಬಣಗಳಲ್ಲಿ ಗೊಂದಲ ಮುಂದುವರಿದಿದೆ. ಒಂದೊಮ್ಮೆ ಬದಲಾವಣೆ ಅನಿವಾರ್ಯ ಎಂದರೆ ದಲಿತ ಸಿಎಂ ದಾಳ ಹೂಡುವುದು ತಂತ್ರಗಾರಿಕೆಯಾಗಿದೆ.



### ಗೃಹ ಸಚಿವರ ಹೆಸರು ಪ್ರಸ್ತಾಪ

ಪವರ್‌ಶೇರಿಂಗ್ ವಿಚಾರದಲ್ಲಿ ಡಾ.ಜಿ ಪರಮೇಶ್ವರ್ ಹೆಸರು ಪ್ರಸ್ತಾಪ ಮಾಡಲು ಸಿದ್ದರಾಮಯ್ಯ ಬಣ ಚಿಂತನೆ ನಡೆಸುತ್ತಿದೆ. ಪರಮೇಶ್ವರ್ ಕಾಂಗ್ರೆಸ್‌ನಲ್ಲಿ ಪ್ರಭಾವಿ ನಾಯಕ. ಹಿರಿತನ, ಅನುಭವವೂ ಅವರಿಗಿದೆ. ಕೆಪಿಸಿಸಿ ಅಧ್ಯಕ್ಷರಾಗಿ ಎಂಟು ವರ್ಷ ಪಕ್ಷವನ್ನು ಮುನ್ನಡೆಸಿದ್ದಾರೆ. ಪರಮೇಶ್ವರ್ ನೇತೃತ್ವದಲ್ಲಿ ಪಕ್ಷ ಅಧಿಕಾರಕ್ಕೂ ಬಂದಿದೆ. ಆದರೆ, ಅಧಿಕಾರಕ್ಕೆ ಬಂದರೂ ಸಿಎಂ ಆಗುವ ಅವಕಾಶ ಸಿಕ್ಕಿಲ್ಲ ಎನ್ನುವುದು ವಿಶೇಷವಾಗಿದೆ.

### ನಾನು ಮುಖ್ಯಮಂತ್ರಿ ಪರ: ರಾಜಣ್ಣ

ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಎಷ್ಟೇ ಯತ್ನಿಸಿದರೂ ನಾನು ಮುಖ್ಯಮಂತ್ರಿ ಸಿದ್ದರಾಮಯ್ಯ ಪರ ಎಂದು ಮಾಜಿ ಸಚಿವ ಕೆ.ಎನ್. ರಾಜಣ್ಣ ಹೇಳಿದ್ದಾರೆ. ಡಿಸಿಎಂ ಡಿ.ಕೆ.ಶಿ ಭೇಟಿ ವಿಚಾರಕ್ಕೆ ಪ್ರತಿಕ್ರಿಯಿಸಿರುವ ಅವರು, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಏನೇ ಪ್ರಯತ್ನ ಮಾಡಿದರೂ ನನ್ನ ನಿಲುವು ಬದಲಾಗಲ್ಲ ಎಂದು ನುಡಿದಿದ್ದಾರೆ.

### ಭೇಟಿಯಲ್ಲಿ ರಾಜಕೀಯ ಬೇಡ

ಎಐಸಿಸಿ ಅಧ್ಯಕ್ಷರ ಭೇಟಿ ಕುರಿತು ಪರಮೇಶ್ವರ್ ಪ್ರತಿಕ್ರಿಯೆ ನೀಡಿ, ಈ ಭೇಟಿಯ ಹಿಂದೆ ಯಾವುದೇ ರಾಜಕೀಯ ಮಾತುಕತೆ ಇಲ್ಲ. ನಾನು ಖರ್ಗೆಯವ ಜೊತೆಗೆ ರಾಜಕೀಯ ಮಾತಾಡಿಲ್ಲ. ನನ್ನ ಅವರ ಸಂಬಂಧವೇ ಬೇರೆ. ನಮ್ಮ ಮನೆಯ ವಿಷಯ ಮಾತಾಡಿದ್ದೇವೆ ಹೊರತು ರಾಜಕೀಯ ಮಾತಾಡಿಲ್ಲ. ಇಲ್ಲಿ ಈಗ ರಾಜಕೀಯ ಚರ್ಚೆ ಬೇಡ ಎಂದಿದ್ದಾರೆ.

### ಸಿಎಂ–ಡಿಕೆಶಿ ಬಣಕ್ಕೂ ಸಹಮತ..?

ಜಿ. ಪರಮೇಶ್ವರ್ ಅವರು ಇತ್ತೀಚೆಗೆ ಸಿದ್ದರಾಮಯ್ಯ ಅವರ ಜೊತೆಗೆ ಗುರುತಿಸಿಕೊಂಡಿದ್ದಾರೆ. ಆದರೆ ಅವರು ಎರಡು ಬಣಕ್ಕೂ ಒಮ್ಮತದ ಅಭ್ಯರ್ಥಿ. ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಜೊತೆಗೆ ಉತ್ತಮವಾದ ನಂಟು ಇಟ್ಟುಕೊಂಡಿದ್ದಾರೆ. ಹೈಕಮಾಂಡ್ ಮಟ್ಟದಲ್ಲಿ ಸಂಪರ್ಕ ಇದೆ. ಪರಮೇಶ್ವರ್ ಆದರೆ ಸಿಎಂಗೂ ಯಾವುದೇ ಭಿನ್ನಾಭಿಪ್ರಾಯ ಇಲ್ಲ ಎಂದು ಮೂಲ ತಿಳಿಸಿದೆ.

## ಕಾಂಗ್ರೆಸ್‌ನಿಂದ ತಂದೆಯ ರಾಜಕೀಯ ನಾಶ

**ಹಾಸನ:** ಕಾಂಗ್ರೆಸ್ ಸರ್ಕಾರದ ಕಠಿಣ ನಿರ್ಧಾರಗಳು ಜೆಡಿಎಸ್ ವರಿಷ್ಠ ಎಚ್.ಡಿ.ದೇವೇಗೌಡರ ರಾಜಕೀಯ ಜೀವನವನ್ನು ನಾಶಪಡಿಸಿತು ಎಂದು ಕೇಂದ್ರ ಸಚಿವ ಹಾಗೂ ಜೆಡಿಎಸ್ ರಾಜ್ಯಾಧ್ಯಕ್ಷ ಎಚ್.ಡಿ.ಕುಮಾರಸ್ವಾಮಿಯ ಹೇಳಿದ್ದಾರೆ.



ಚಿಕ್ಕಮಗಳೂರು ಜಿಲ್ಲೆಯ ಬಾಳೆಹೊನ್ನೂರಿಗೆ ಹೋಗುವ ಮಾರ್ಗ ಮಧ್ಯೆ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿ, ನನ್ನ ತಂದೆ ಪ್ರಧಾನಿ, ಮುಖ್ಯಮಂತ್ರಿ ಮತ್ತು ಕೇಂದ್ರ ಸಚಿವರಾಗಿ ರಾಜ್ಯ ಮತ್ತು ರಾಷ್ಟ್ರ ಎರಡಕ್ಕೂ ಸೇವೆ ಸಲ್ಲಿಸಿದ್ದಾರೆ. ಆದರೆ, ಕಾಂಗ್ರೆಸ್ ಕೈಗೊಂಡ ತುರ್ತು ಮತ್ತು ಕಠಿಣ ನಿರ್ಧಾರಗಳ ಕಾರಣ ಅವರು ಈ ಸ್ಥಾನಗಳಲ್ಲಿ ದೀರ್ಘಕಾಲ ಸೇವೆ ಮಾಡಲು ಸಾಧ್ಯವಾಗಲಿಲ್ಲ ಎಂದು ತಿಳಿಸಿದ್ದಾರೆ. ಕಾಂಗ್ರೆಸ್ ನಾಯಕರು ವಿವಿಧ ಹುದ್ದೆಗಳಲ್ಲಿ ದೇವೇಗೌಡರಿಗೆ ರಾಜ್ಯವನ್ನಾಗಲಿ, ದೇಶವನ್ನಾಗಲಿ ಸಂಪೂರ್ಣವಾಗಿ ಆಡಳಿತ ನಡೆಸಲು ಅವಕಾಶ ನೀಡಲಿಲ್ಲ. ಇದೇವೇಳೆ ಸಿದ್ದರಾಮಯ್ಯ ಕೇಂದ್ರ ಸರ್ಕಾರ ವಿರುದ್ಧ ನಿರಂತರವಾಗಿ ಟೀಕೆ ಮಾಡುತ್ತಿರುವುದಕ್ಕೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

## ಬೆಂಗಳೂರಲ್ಲೇ ಐಪಿಎಲ್ ಪಂದ್ಯ?

**ಬೆಂಗಳೂರು:** ಐಪಿಎಲ್ ಮತ್ತು ವಿಜಯ್ ಹಜಾರೆ ಕ್ರಿಕೆಟ್ ಪಂದ್ಯಗಳನ್ನು ಬೆಂಗಳೂರಿನಲ್ಲೇ ನಡೆಸಲು ಪೂರಕವಾಗಿ ಗೃಹ ಸಚಿವ ಡಾ. ಜಿ ಪರಮೇಶ್ವರ್ ಹಿರಿಯ ಅಧಿಕಾರಿಗಳ ಜೊತೆ ಮಹತ್ವದ ಸಭೆ ನಡೆಸಿದ್ದಾರೆ. ಆರ್‌ಸಿಬಿ ಐಪಿಎಲ್ ಕಪ್ ಗೆದ್ದ ಸಂದರ್ಭದಲ್ಲಿ ವಿಜಯೋತ್ಸವ ಆಚರಿಸುವಾಗ ಜೂನ್ 4ರಂದು ಬೆಂಗಳೂರಿನಲ್ಲಿ ಕಾಲ್ತುಳಿತವಾಗಿ ಹಲವರ ಜೀವ ಹಾನಿಯಾಗಿತ್ತು. ಅದರ ನಂತರ ಐಪಿಎಲ್ ಪಂದ್ಯಾವಳಿಗಳನ್ನು ಬೆಂಗಳೂರಿನಲ್ಲಿ ನಡೆಸಲು ಅನುಮತಿ ನಿರಾಕರಿಸಲಾಗಿತ್ತು. ಆ ಆಟದ ಪಂದ್ಯಗಳನ್ನು ಪ್ರೇಕ್ಷಕರ ರಹಿತವಾಗಿ ಬೆಂಗಳೂರಿನಲ್ಲೂ ನಡೆಸಲು ಅನುಮತಿ ನೀಡುವಂತೆ ಕರ್ನಾಟಕ ಕ್ರಿಕೆಟ್ ಸಂಸ್ಥೆ ಮನವಿ ಮಾಡಿದೆ. ಇದನ್ನು ಪರಿಶೀಲಿಸಲು ಬೆಂಗಳೂರು ನಗರ ಪೊಲೀಸ್ ಆಯುಕ್ತ ಶ್ರೀಮಂತ ಕುಮಾರ್ ಸಿಂಗ್ ನೇತೃತ್ವದಲ್ಲಿ ಸಮಿತಿ ರಚಿಸಲಾಗಿದೆ.

## ಹಿಂದೂಗೆ ಸಂವಿಧಾನಿಕ ಅಗತ್ಯವಿಲ್ಲ..!

• ಮಲ್ಲಮ್ಮ ನುಡಿ ವಾರ್ತೆ ಕೋಲ್ಕತ್ತ

ಭಾರತ ಹಿಂದೂ ರಾಷ್ಟ್ರ ಎಂದು ಒತ್ತಿ ಹೇಳಿದ ರಾಷ್ಟ್ರೀಯ ಸ್ವಯಂಸೇವಕ ಸಂಘದ (ಆರ್‌ಎಸ್‌ಎಸ್) ಮುಖ್ಯಸ್ಥ ಮೋಹನ್ ಭಾಗವತ್ ಅವರು, ಅದು ಸತ್ಯ ಆಗಿರುವುದರಿಂದ ಯಾವುದೇ



ಸಾಂವಿಧಾನಿಕ ಅನುಮೋದನೆ ಅಗತ್ಯವಿಲ್ಲ ಎಂದು ತಿಳಿಸಿದ್ದಾರೆ. ಆರ್‌ಎಸ್‌ಎಸ್‌ನ 100 ವರ್ಷಗಳನ್ನು ಗುರುತಿಸುವ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಭಾಗವತ್, ಭಾರತೀಯ ಸಂಸ್ಕೃತಿಯನ್ನು ದೇಶದಲ್ಲಿ ಪ್ರಶಂಸಿಸುವವರೆಗೆ ಭಾರತ ಹಿಂದೂ ರಾಷ್ಟ್ರವಾಗಿದೆ. ಹಿಂದೂ ರಾಷ್ಟ್ರವಾಗಿ ಉಳಿಯುತ್ತದೆ ಎಂದಿದ್ದಾರೆ. ನಾವು ಹಿಂದೂಗಳು ಮತ್ತು ನಮ್ಮ ರಾಷ್ಟ್ರ ಹಿಂದೂ ರಾಷ್ಟ್ರವಾಗಿರುವುದರಿಂದ ನಮಗೆ ಸಂಸತ್ ನ ಅನುಮೋದನೆ ಬಗ್ಗೆ ಕಾಳಜಿ ಇಲ್ಲ. ಅದು ಸತ್ಯ. ಹುಟ್ಟಿನ ಆಧಾರದ ಮೇಲೆ ಜಾತಿ ವ್ಯವಸ್ಥೆಯು ಹಿಂದುತ್ವದ ಲಕ್ಷಣವಲ್ಲ ಎಂದು ವ್ಯಾಖ್ಯಾನಿಸಿದ್ದಾರೆ. ಸಂಘಟನೆಯು ಮುಸ್ಲಿಂ ವಿರೋಧಿ ಎಂಬ ತಪ್ಪು ಗ್ರಹಿಕೆಯನ್ನು ಹೋಗಲಾಡಿಸಬಹುದು. ಸಂಘಟನೆಯು ಹಿಂದೂಗಳ ರಕ್ಷಣೆಗಾಗಿ ಪ್ರತಿಪಾದಿಸುತ್ತದೆ ಮತ್ತು ಕಠಿಣ ರಾಷ್ಟ್ರೀಯವಾದಿಗಳು ಆದರೆ ಮುಸ್ಲಿಂ ವಿರೋಧಿಗಳಲ್ಲ ಎಂದು ಜನರು ಅರ್ಥಮಾಡಿಕೊಂಡಿದ್ದಾರೆ ಎಂದು ವಿವರಿಸಿದ್ದಾರೆ.

## ಜಿಲ್ಲಾ ಕೇಂದ್ರಕ್ಕಾಗಿ ಬಾದರ್ಲಿ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ಸಿಂಧನೂರನ್ನು ಜಿಲ್ಲಾ ಕೇಂದ್ರವಾಗಿ ರಚಿಸಲು ಎಂಎಲ್‌ಸಿ ಬಸನಗೌಡ ಬಾದರ್ಲಿ ಅವರು ಆಗ್ರಹಿಸಿದ್ದಾರೆ.

ಈ ಕುರಿತು ಸರ್ಕಾರಕ್ಕೆ ವಿವರವಾದ ವರಧಿ ಸಲ್ಲಿಸಲು ಸೂಚನೆ ನೀಡಲು ಬೆಳಗಾವಿ ಚಳಿಗಾಲ ಅಧಿವೇಶನದಲ್ಲಿ ಒತ್ತಾಯಿಸಿದ್ದಾರೆ.

ಇದಕ್ಕೆ ಕಂದಾಯ ಸಚಿವ ಉತ್ತರಿಸಿ, ಈ ಪ್ರಸ್ತಾವನೆಗೆ ಅವಶ್ಯಕವಿರುವ ವಿವರವಾದ ವರದಿ ಸಲ್ಲಿಸುವಂತೆ ಪ್ರಾದೇಶಿಕ ಆಯುಕ್ತರಿಗೆ ಸೂಚಿಸಿದ್ದಾರೆ. ಮುಂದುವರೆದು ಸದರಿ ಪ್ರಸ್ತಾವನೆಯ ಸಂಪೂರ್ಣ ವರದಿಯನ್ನು ವೈಜ್ಞಾನಿಕವಾಗಿ ತಯಾರಿಸಿ ಕಂದಾಯ ಸಚಿವರಿಗೆ ಹಾಗೂ ಬಸನಗೌಡ ಬಾದರ್ಲಿ ಎಂಎಲ್ ಸಿ ಇವರಿಗೆ ಸಲ್ಲಿಸಲು ಸೂಚಿಸಿದ್ದಾರೆ.

**ಸಂವಾದ ಕಾರ್ಯಕ್ರಮ**

ಈ ವಿಷಯದ ಕುರಿತು ಈಗಾಗಲೇ ಬಸನಗೌಡ ಬಾದರ್ಲಿ ಅವರು ನೇತೃತ್ವದಲ್ಲಿ ಸಿಂಧನೂರು ಜಿಲ್ಲೆಯಾಕೆ ಆಗಬೇಕು ಎನ್ನುವ



ಸುದೀರ್ಘ ಚರ್ಚೆಯನ್ನು ವಿನಯ್ ರೆಸಿಡೆನ್ಸಿಯಲ್ಲಿ ಎಲ್ಲಾ ಪತ್ರಕರ್ತರೊಂದಿಗೆ ಚರ್ಚಿಸಿ, ಒಂದು ಸಂವಾದ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಸಮಾಲೋಚನೆಯಲ್ಲಿ ಸಿಂಧನೂರಿನ ಎಲ್ಲಾ ಪತ್ರಕರ್ತರು ಭಾಗವಹಿಸಿ ಸಿಂಧನೂರು ಜಿಲ್ಲೆಯಾಗಿಸಲು ಇರಬೇಕಾಗಿರುವ ಅರ್ಹತೆಗಳ ಬಗ್ಗೆ ಚರ್ಚಿಸಿ ವರಧಿಯನ್ನು ತಯಾರಿಸಿ ಸರ್ಕಾರಕ್ಕೆ ಸಲ್ಲಿಸಲಾಗಿತ್ತು. ಸಿಂಧನೂರನ್ನು ಜಿಲ್ಲೆಯಾಗಿಸುವುದು ಸುಮಾರು 2 ವರ್ಷಗಳ ಸುದೀರ್ಘ ಪ್ರಯತ್ನವಾಗಿರುತ್ತದೆ ಎಂದು ಬಸನಗೌಡ ಬಾದರ್ಲಿ ಅವರು ತಿಳಿಸಿದ್ದಾರೆ.

### ಸೇತುವೆ ಕಾಮಗಾರಿ ಕಳಪೆ

**ಬೆಳಗಾವಿಯ ಚಳಿಗಾಲದ ಅಧಿವೇಶನದಲ್ಲಿ ಲೋಕೋಪಯೋಗಿ ಸಚಿವರಾದ ಸತೀಶ್ ಜಾರಕಿಹೊಳಿ ಅವರನ್ನು ಎಂಎಲ್.ಸಿ ಬಸನಗೌಡ ಬಾದರ್ಲಿ ಅವರು ರಾಷ್ಟ್ರೀಯ ಹೆದ್ದಾರಿ 150 ಎ ಸಿಂಧನೂರು ಹಳ್ಳಕ್ಕೆ ಅಡ್ಡಲಾಗಿ ನಿರ್ಮಿಸಲಾಗಿರುವ ಸೇತುವೆ ಕಾಮಗಾರಿ ಕಳಪೆಯಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ? ಬಂದಿದ್ದಲ್ಲಿ ಈ ಸಂಬಂಧ ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ ಎಂದು ಅಧಿವೇಶನದಲ್ಲಿ ಪ್ರಶ್ನಿಸಿದ್ದಾರೆ. ಇದಕ್ಕೆ ಸಚಿವರು ಉತ್ತರಿಸಿ, ಶೀಘ್ರವೇ ಸೇತುವೆ ಕಾಮಗಾರಿಯ ಬಾಕಿ ಉಳಿದ ಕೆಲಸವನ್ನು ಪೂರ್ಣಗೊಳಿಸಲು ತಿಳಿಸಿದ್ದಾರೆ.**

## ಮತ್ತೊಂದು ಮರ್ಯಾದೆ ಹತ್ಯೆ

• ಮಲ್ಲಮ್ಮ ನುಡಿ ವಾರ್ತೆ ಹುಬ್ಬಳ್ಳಿ

ಹುಬ್ಬಳ್ಳಿ ತಾಲ್ಲೂಕಿನ ಇನಾಂ ವಿರಾಪುರದಲ್ಲಿ ನೀರವ ಮೌನ ಆವರಿಸಿದೆ. ಜಾತಿಯ ವಿಷ ತುಂಬಿಕೊಂಡಿದ್ದ ಒಬ್ಬ ವ್ಯಕ್ತಿ, ಅನ್ಯ ಜಾತಿಯವನಾದ ಹುಡುಗನನ್ನು ಪ್ರೀತಿಸಿ ಮನೆಬಿಟ್ಟು ಹೋಗಿ ಮದುವೆಯಾಗಿದ್ದಕ್ಕೆ ಸಿಟ್ಟಿಗೆದ್ದು ಆಕೆಯನ್ನು ಕತ್ತರಿಸಿ ಕೊಂದಿದ್ದಾನೆ. ಮದುವೆ ಆಗಿದ್ದು ಮೇ ತಿಂಗಳಲ್ಲಿ, ಡಿಸೆಂಬರ್ ನಲ್ಲಿ




ಆತನ ಕಿಚ್ಚು ಆಕೆಯ ಪ್ರಾಣವನ್ನು ತೆಗೆದಿದೆ. ಸಾಯುವಾಗ ಆಕೆ ಗರ್ಭಿಣಿಯಾಗಿದ್ದಳು. ಇದು ಅತಿಯಾಗಿ ಮನವನ್ನು ಕಲಕುತ್ತಿರುವ ವಿಚಾರ. ಘಟನೆಯನ್ನು ಕಂಡು ಸ್ತಂಭೀಭೂತವಾಗಿರುವ ಇಡೀ ಹಳ್ಳಿಯು ಈಗ ನೀರವ ಮೌನಕ್ಕೆ ಜಾರಿದೆ. ಇನಾಂ ವೀರಾಪುರದಲ್ಲಿ ನಡೆದಿದ್ದು, ಹುಡುಗನ ಮನೆ ಮುಂದೆ ರಕ್ತದೋಕುಳಿ ಆಗಿರುವುದು ಕಾಣುತ್ತಿದೆ. ಅನ್ಯ ಜಾತಿಯ ಮಾನ್ಯಾ ಪಾಟೀಲ್ ದಲಿತ ಹುಡುಗ ವಿವೇಕಾನಂದ ದೊಡ್ಡಮನಿ ಎಂಬ ಹುಡುಗನನ್ನು ಪ್ರೀತಿಸಿ ಮದುವೆಯಾಗಿದ್ದೇ ಅವಳ ಸಾವಿಗೆ ಕಾರಣ. ಇದೇ ವರ್ಷದ ಮೇ ತಿಂಗಳಲ್ಲಿ ಅವರ ವಿವಾಹವಾಗಿತ್ತು. ಅಷ್ಟೇ ಅಲ್ದೆ ಏಳು ತಿಂಗಳು ಗರ್ಭಿಣಿ ಕೂಡ ಆಗಿದ್ದಳು. ಆರೋಪಿಗಳನ್ನು ಪೊಲಿಸರು ಬಂಧಿಸಿದ್ದಾರೆ.

**ಉಪಮುಖ್ಯಂಮತ್ರಿ ಡಿ.ಕೆ.ಶಿವಕುಮಾರ್ ಅವರು 27ರಂದು ದೆಹಲಿಗೆ ಭೇಟಿ ನೀಡಲಿದ್ದಾರೆ.**

## ವೈದ್ಯಕೀಯ ಶಿಕ್ಷಣ ಸಚಿವರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: ರಾಜ್ಯದ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ. ಶರಣಪ್ರಕಾಶ ಆರ್. ಪಾಟೀಲ್ ಅವರು ಇದೇ ಡಿಸೆಂಬರ್ 23 ರಂದು ಬೆಳಿಗ್ಗೆ 10.30 ಗಂಟೆಗೆ ಸೇಡಂ ಲಕ್ಷ್ಮೀ ವೆಂಕಟೇಶ್ವರ ಕಲ್ಯಾಣ ಮಂಟಪದಲ್ಲಿ ತಾಲೂಕು ಸೇಡಂ ಆಡಳಿತ ವತಿಯಿಂದ ಹಮ್ಮಿಕೊಳ್ಳಲಾದ ತಾಲೂಕು ಮಟ್ಟದ ಶಿಕ್ಷಕರ ದಿನಾಚರಣೆ ಹಾಗೂ ಉತ್ತಮ ಶಿಕ್ಷಕರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಭಾಗವಹಿಸಿ, ನಂತರ ಕಲಬುರಗಿಗೆ ಆಗಮಿಸಿ ವಾಸ್ತವ್ಯ ಮಾಡುವರು.

ಡಿಸೆಂಬರ್ 24 ರಂದು ಕಲಬುರಗಿ ಸ್ಥಳೀಯ ಕಾರ್ಯಕ್ರಮ, ಡಿಸೆಂಬರ್ 25ರಂದು ಕಲಬುರಗಿ ಮತ್ತು ಸೇಡಂ ಸ್ಥಳೀಯ, ಡಿಸೆಂಬರ್ 26 ರಂದು ಕಲಬುರಗಿ ಸ್ಥಳೀಯ ಹಾಗೂ ಡಿಸೆಂಬರ್ 27 ರಂದು ಸೇಡಂ ಮತ್ತು ಕಲಬುರಗಿ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಕಲಬುರಗಿಯಲ್ಲಿ ವಾಸ್ತವ್ಯ ಮಾಡುವರು.

## ಅಧ್ಯಕ್ಷರಾಗಿ ನಜಮ ಉಲ್ ಇಸ್ಲಾಂ (ಅಹಮರ್) ಅಧಿಕಾರ ಸ್ವೀಕಾರ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: ಕರ್ನಾಟಕ ರಾಜ್ಯ ಸರ್ಕಾರವು ಜಾರಿಗೊಳಿಸಿದ 5 ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಕಲಬುರಗಿ ತಾಲೂಕು ಅಧ್ಯಕ್ಷರಾಗಿ ನಜಮ ಉಲ್ ಇಸ್ಲಾಂ (ಅಹಮರ್) ಅವರು ಇದೇ ಡಿಸೆಂಬರ್ 23 ರಂದು ಬೆಳಿಗ್ಗೆ 11 ಗಂಟೆಗೆ ಕಲಬುರಗಿ ತಾಲೂಕು ಪಂಚಾಯತ್ ಕಚೇರಿಯಲ್ಲಿ ಅಧಿಕಾರ ಸ್ವೀಕರಿಸಲಿದ್ದಾರೆ ಎಂದು ಕಲಬುರಗಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫೆ28 ರವರೆಗೆ ಅನುಮತಿ

ಕಲಬುರಗಿ: ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಿಂದ 2026ನೇ ಸಾಲಿನಲ್ಲಿ ವಿಕಲಚೇತನರ ರಿಯಾಯಿತಿ ದರದ ಬಸ್‌ಪಾಸ್‌ಗಳನ್ನು ವಿತರಣೆ/ನವೀಕರಣ ಮಾಡಬೇಕಿದ್ದು, ವಿಕಲಚೇತನ ಫಲಾನುಭವಿಗಳಿಗೆ ನವೀಕರಿಸಿಕೊಳ್ಳಲು ಆಗಬಹುದಾದ ತೊಂದರೆಯನ್ನು ಗಮನದಲ್ಲಿಟ್ಟುಕೊಂಡು ಹಾಲಿ 2025ನೇ ಸಾಲಿನಲ್ಲಿ ವಿತರಿಸಿರುವ ವಿಕಲಚೇತನರ ಬಸ್‌ಪಾಸ್‌ಗಳನ್ನು ಉಪಯೋಗಿಸಿ ಪ್ರಯಾಣಿಸಲು 2026ರ ಫೆಬ್ರವರಿ 28 ರವರೆಗೆ ಅನುಮತಿ ನೀಡಲಾಗಿದೆ ಎಂದು ಕಲಬುರಗಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವಿಭಾಗ-1ರ ವಿಭಾಗೀಯ ನಿಯಂತ್ರಣಾಧಿಕಾರಿಗಳು ತಿಳಿಸಿದ್ದಾರೆ.

ವಿಕಲಚೇತನರ ಫಲಾನುಭವಿಗಳು 2026ರ ಫೆಬ್ರವರಿ 28 ರೊಳಗಾಗಿ ಸೇವಾ ಸಿಂಧು ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸಿ ತಮ್ಮ ಪಾಸ್‌ಗಳನ್ನು ಆಯಾ ತಾಲೂಕು ವ್ಯಾಪ್ತಿಗೆ ಬರುವ ಘಟಕಗಳ/ಬಸ್‌ನಿಲ್ದಾಣ/ಪಾಸ್ ವಿತರಣಾ ಕೇಂದ್ರಗಳಲ್ಲಿ ವಿಕಲಚೇತನರ ಹಳೆಯ ಪಾಸ್‌ಗಳನ್ನು ನವೀಕರಿಸಿಕೊಳ್ಳಬೇಕು. ಈ ಸಂಬಂಧ ಅರ್ಹ ಫಲಾನುಭವಿಗಳು ಸಂಬಂಧಪಟ್ಟ ಎಲ್ಲಾ ಅವಶ್ಯಕ ದಾಖಲಾತಿಗಳೊಂದಿಗೆ 660 ರೂ. ಗಳನ್ನು ನಗದು ರೂಪದಲ್ಲಿ ಪಾವತಿಸಿ ಸದರಿ ಬಸ್ ನಿಲ್ದಾಣಗಳಲ್ಲಿ 2026 ನೇ ಸಾಲಿಗೆ ಬಸ್‌ಪಾಸ್‌ನ್ನು ಪಡೆಯಬೇಕೆಂದು ಅವರು ತಿಳಿಸಿದ್ದಾರೆ.



ಕಮಲನಗರ: ಸೋಮವಾರ ಭಾಲ್ಕಿಯಲ್ಲಿ ಪೂಜ್ಯ ಶ್ರೀ. ಮ.ಘ.ಚ. ಡಾ.ಚನ್ನಬಸವ ಪಟ್ಟದ್ದೇವರ 136 ನೇ ಜಯಂತೋತ್ಸವ ಕಾರ್ಯಕ್ರಮದಲ್ಲಿ ಕಮಲನಗರ ಪಟ್ಟಣದ ಶಾಂತಿ ವರ್ಧಕ ಪ್ರೌಢಶಾಲೆ ಮಕ್ಕಳು ನೃತ್ಯ ಮಾಡಿ ಗಮನ ಸೆಳೆದರು.

## ಪಲ್ಸ್ ಪೋಲಿಯೊ ಲಸಿಕೆ ಅಭಿಯಾನ



ಮಲ್ಲಮ್ಮ ನುಡಿ ವಾರ್ತೆಕಮಲನಗರ: 5 ವರ್ಷದೊಳಗಿನ ಎಲ್ಲ ಮಕ್ಕಳಿಗೆ ತಪ್ಪದೇ ಪಲ್ಸ್ ಪೋಲಿಯೊ ಲಸಿಕೆ ಹಾಕಿಸಬೇಕು ಎಂದು ವೈದ್ಯ ಡಾ. ನಿತೀನ ಪಾಟೀಲ್ ಹೇಳಿದರು.ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಪಲ್ಸ್ ಪೋಲಿಯೊ ಲಸಿಕೆ ಕಾರ್ಯಕ್ರಮದಲ್ಲಿ ಮಕ್ಕಳಿಗೆ ಪಲ್ಸ್ ಪೋಲೀಯೊ ಲಸಿಕೆ ಹಾಕಿ ಅವರು ಮಾತನಾಡಿದರು.

ಡಿ. 21 ರಿಂದ 24 ರ ವರೆಗೆ ಹಮ್ಮಿಕೊಂಡಿರುವ ರಾಷ್ಟ್ರೀಯ ಪಲ್ಸ್ ಪೋಲಿಯೊ ಕಾರ್ಯಕ್ರಮದಲ್ಲಿ ಹೆಚ್ಚಿನ ಕಾಳಜಿ ವಹಿಸಿ ಕಡ್ಡಾಯವಾಗಿ ಲಸಿಕೆ ಹಾಕಿಸಲು ಉತ್ತೇಜನ ನೀಡಬೇಕಿದೆ. ಮಕ್ಕಳಿಗೆ ಪೋಲಿಯೊ ಲಸಿಕೆ ಹಾಕುವುದರಿಂದ ಅಂಗವೈಕಲ್ಯ ತಡೆಯಬಹುದು. ಆದುದರಿಂದ ಪೋಷಕರು ತಮ್ಮ ಮಕ್ಕಳಿಗೆ ಕಡ್ಡಾಯವಾಗಿ ಲಸಿಕೆ ಹಾಕಿಸುವ ಮೂಲಕ ಮಕ್ಕಳ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದರು.

ಪಾಲಕರಾದ ಮಹಾದೇವ ಬಿರಾದಾರ ತಮ್ಮ ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕಿ ಮಾತನಾಡಿದರು, ಪೋಲಿಯೋ ರೋಗ ಮುಂಜಾಗ್ರತವಾಗಿ ಲಸಿಕೆಹಾಕಿ ಮಕ್ಕಳು ಅರೋಗ್ಯ ಕಾಪಾಡಿಕೊಳ್ಳಬೇಕು. 4 ದಿನದ ಅಭಿಯಾನದಲ್ಲಿ

ಎಲ್ಲರೂ ತಪ್ಪದೇ ಪೋಲಿಯೋ ಲಸಿಕೆ ಹಾಕುವಂತೆ ಹೇಳಿದರು.ಈ ಸಂದರ್ಭದಲ್ಲಿ ಪಿಎಚ್‌ಸಿಒ ವಂದನಾ, ಸ್ಟಾಫ್ ನರ್ಸ ಲಖನ, ಅಂಗನವಾಡಿ ಕಾರ್ಯಕರ್ತೆ ಸಂಗೀತಾ ಗಾಯಕವಾಡ,ಆಶಾ ಕಾರ್ಯಕರ್ತೆ ಸು-ರೇಖಾ ಹಾಗೂ ಸಿಬ್ಬಂದಿ ಇದ್ದರು.

## ಡಿ.24 ರಂದು ಶಿವಯೋಗಿಗಳ ರಥೋತ್ಸವ

ಮಲ್ಮನ ನುಡಿ ವಾರ್ತೆ ಮಸ್ಕಿ : ತಾಲ್ಲೂಕಿನ ಸಂತೆಕೆಲ್ಲೂರು ಗ್ರಾಮದಲ್ಲಿ ಕೃಷಿ ಋಷಿ ಘನಮಠ ನಾಗಭೂಷಣ ಶಿವಯೋಗಿಗಳ 146ನೇ ಪುಣ್ಯಸ್ಮರಣೋತ್ಸವದ ಅಂಗವಾಗಿ ಡಿ.24 ರಂದು ಮಹಾರಥೋತ್ಸವ, ಸಾಮೂಹಿಕ ವಿವಾಹ ಹಾಗೂ ವಿವಿಧ ಧಾರ್ಮಿಕ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಘನಮಠೇಶ್ವರ ಮಠದ ಪೀಠಾಧ್ಯಕ್ಷ ಗುರುಬಸವ ಸ್ವಾಮೀಜಿ ತಿಳಿಸಿದ್ದಾರೆ. ಕಾರ್ಯಕ್ರಮದ ಅಂಗವಾಗಿ ಡಿ.24ರಂದು ಬೆಳಿಗ್ಗೆ 5 ಗಂಟೆಯ ಸುಮಾರಿಗೆ ಘನಮಠ ಶಿವಯೋಗಿಗಳ ಕರ್ತೃ ಗದ್ದುಗೆಗೆ ಅಭಿಷೇಕ ಸೇರಿದಂತೆ ವಿಶೇಷ ಧಾರ್ಮಿಕ ಪೂಜೆಗಳು ನೆರವೇರಲಿವೆ.

ನಂತರ ವಚನಕಟ್ಟಿನ ಹಾಗೂ ಘನಮಠ ಶಿವಯೋಗಿಗಳ ಭಾವಚಿತ್ರದ ಮೆರವಣಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ನಡೆಯಲಿದ್ದು, ಪೂರ್ಣಕುಂಭಕಳಸಗಳೊಂದಿಗೆ ಮಹಿಳೆಯರು ಭಾಗವಹಿಸಲಿದ್ದಾರೆ. ವಿವಿಧ ಜಾನಪದ ಕಲಾ ತಂಡಗಳು ಮೆರವಣಿಗೆಗೆ ಶೋಭೆ ನೀಡಲಿವೆ ಎಂದು ಹೇಳಿದರು.

ಈ ವೇಳೆ ಸಾಮೂಹಿಕ ವಿವಾಹ ಸಮಾರಂಭ ನಡೆಯಲಿದ್ದು, ಅನೇಕ ಮಠಾಧೀಶರು, ಚುನಾಯಿತ ಜನಪ್ರತಿನಿಧಿಗಳು ಹಾಗೂ ಗಣ್ಯರು ಪಾಲ್ಗೊಳ್ಳಲಿದ್ದಾರೆ. ಸಂಜೆ 5 ಗಂಟೆಗೆ ಘನಮಠಶಿವಯೋಗಿಗಳ



ಮಹಾರಥೋತ್ಸವ ಜರುಗಲಿದೆ. ರಾತ್ರಿ ಧರ್ಮಜಾಗೃತಿ ಸಭೆ ಆಯೋಜಿಸಲಾಗಿದೆ. ಜಾತ್ರೆಯ ಅಂಗವಾಗಿ ಕೃಷಿ ವಿಚಾರ ಸಂಕಿರಣ, ಕೃಷಿ ವಸ್ತು ಪ್ರದರ್ಶನ ಸೇರಿದಂತೆ ಹಲವು ಉಪಯುಕ್ತ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಆಗಮಿಸಲಿದ್ದಾರೆ ಎಂದು ಸ್ವಾಮೀಜಿ ತಿಳಿಸಿದರು.

## ಪೋಲಿಯೋ ಲಸಿಕೆ ಹಾಕಿಸುವು ವಿಶೇಷ ಅಭಿಯಾನ



ಮಲ್ಮನ ನುಡಿ ವಾರ್ತೆ : ಮಸ್ಕಿ : ಪೋಲಿಯೋ ಘೋಷ ವಾಕ್ಯ 2025: "ಎರಡು ಹನಿ ಜೀವ ಜಲ" ವಿಶ್ವ ಪೋಲಿಯೋ ದಿನದ 2025ರ ಘೋಷ ವಾಕ್ಯವಾಗಿದ್ದು, ಪ್ರತಿಯೊಂದು ಮಗುವಿಗೂ ಲಸಿಕೆ ತಲುಪುವ ಮೂಲಕ ಪೋಲಿಯೋ ನಿರ್ಮೂಲನೆಯನ್ನು ಖಚಿತಪಡಿಸಿಕೊಳ್ಳಲು ಜಾಗತಿಕ ಸಹಕಾರ ಮತ್ತು ಸಮಾನ ಪ್ರವೇಶದ ಅಗತ್ಯವನ್ನು ಒತ್ತಿ ಹೇಳುತ್ತದೆ, 5 ವರ್ಷದೊಳಗಿನ ಎಲ್ಲ ಮಕ್ಕಳಿಗೂ ಪೋಲಿಯೋ ಲಸಿಕೆ ಹಾಕಿಸಿ,

ಅಪಾಯ ಸಂಪೂರ್ಣವಾಗಿ ನಿಂತಿಲ್ಲ, ಲಸಿಕೆ ಹಾಕಿಸುವುದು ಮುಖ್ಯ, ಸರ್ಕಾರದಿಂದ ವಿಶೇಷ ಅಭಿಯಾನ!ಡಿಸೆಂಬರ್ 21ರಿಂದ 24ರವರೆಗೆ ವಿಶೇಷ ಅಭಿಯಾನ ನಡೆಯಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಮೈಸೂರಿನ ತಮ್ಮ ಕಚೇರಿಯಲ್ಲಿ ಅಭಿಯಾನಕ್ಕೆ ಚಾಲನೆ ನೀಡಲಿದ್ದಾರೆ. ಭಾರತವು 14 ವರ್ಷಗಳ ಹಿಂದೆ ಪೋಲಿಯೋ ಮುಕ್ತ ದೇಶ ಎಂದು ಘೋಷಣೆ ಮಾಡಲಾಗಿದೆ. ಆದರೂ ನಾವು ಎಚ್ಚರಿಕೆ ವಹಿಸಬೇಕು.

ಪಕ್ಕದ ರಾಷ್ಟ್ರಗಳಲ್ಲಿ ಪೋಲಿಯೋ ಪೀಡಿತರು ಇರುವುದರಿಂದ ರೋಗ ಹರಡುವ ಅಪಾಯವಿದೆ. ಪೋಲಿಯೋ ರೋಗವು ಮಕ್ಕಳಲ್ಲಿ ಶಾಶ್ವತ ಅಂಗವೈಕಲ್ಯಕ್ಕೆ ಕಾರಣವಾಗುತ್ತದೆ. ಭಾರತದಲ್ಲಿ 2011ರ ನಂತರ ಯಾವುದೇ ಪೋಲಿಯೋ ಪ್ರಕರಣ ದಾಖಲಾಗಿಲ್ಲವಾದರೂ, ಪಕ್ಕದ ಇತರೆ ದೇಶಗಳಲ್ಲಿ ರೋಗ ಪೀಡಿತರು ಇರುವುದು ಆತಂಕಕಾರಿ. ಆದ್ದರಿಂದ ರಾಷ್ಟ್ರೀಯ ಪೋಲಿಯೋ ಲಸಿಕಾ ಅಭಿಯಾನವನ್ನು ಪ್ರತಿ ವರ್ಷ ನಡೆಸಲಾಗುತ್ತಿದೆ. ಈ ಅಭಿಯಾನದಲ್ಲಿ ಆಶಾ ಕಾರ್ಯಕರ್ತರು, ಅಂಗನವಾಡಿ ಸಿಬ್ಬಂದಿ ಮತ್ತು ಆರೋಗ್ಯ ಸಿಬ್ಬಂದಿ ತೊಡಗಿಸಿಕೊಳ್ಳಲಿದ್ದಾರೆ. ಹೊಸ ಬಸ್ ನಿಲ್ದಾಣದಲ್ಲಿ ಟ್ರಾನ್ಸಿಟ್ ಬೂತ್ ಮಾಡಿ ಬಸ್ಸಿನಲ್ಲಿ ಪ್ರಯಾಣಿಸುವ 5 ವರ್ಷದ ಮಕ್ಕಳಿಗೆ ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿಗಳಾಗ ಹರಿಶಕುಮಾರ ಜಿ ಮತ್ತು ಯಮನೂರ ಎಚ್ ಜಿ ಹೊಸ ಬಸ್ ಪೋಲಿಯೋ ಲಸಿಕೆ ಹಾಕಿದರು.

## ಕಣವಿ, ಪಾಟೀಲರ ಸಂಪುಟಗಳ ಲೋಕಾರ್ಪಣೆ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: ನಾಡಿನ ಹಿರಿಯ ಸಾಹಿತಿಗಳಾದ ಚೆನ್ನವೀರ ಕಣವಿ ಹಾಗೂ ಪ್ರೊ. ಚಂದ್ರಶೇಖರ ಪಾಟೀಲ ಅವರ ಸಂಪುಟಗಳ ಲೋಕಾರ್ಪಣೆ ಹಾಗೂ ಉಚಿತ ಪುಸ್ತಕ ವಿತರಣಾ ಸಮಾರಂಭ ಹಾಗೂ ಮನೆಗೊಂದು ಗ್ರಂಥಾಲಯ ಕಲಬುರಗಿ ಜಿಲ್ಲಾ ಜಾಗೃತ ಸಮಿತಿ ಸದಸ್ಯರಿಗೆ ಅರ್ಹತಾ ಪತ್ರ ವಿತರಣಾ ಸಮಾರಂಭ ಇದೇ ಡಿಸೆಂಬರ್ 23 ರಂದು ಬೆಳಿಗ್ಗೆ 11 ಗಂಟೆಗೆ ಗುಲಬರ್ಗಾ ವಿಶ್ವವಿದ್ಯಾಲಯದ ಮಹಾತ್ಮ ಗಾಂಧಿ ಸಭಾಂಗಣದಲ್ಲಿ ಆಯೋಜಿಸಿದೆ.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಪುಸ್ತಕ ಪ್ರಾಧಿಕಾರ ಹಾಗೂ ಗುಲಬರ್ಗಾ ವಿಶ್ವವಿದ್ಯಾಲಯದ ಸಂಯುಕ್ತಾಶ್ರಯದಲ್ಲಿ ನಡೆಯುವ

ಈ ಕಾರ್ಯಕ್ರಮವನ್ನು ಗುಲಬರ್ಗಾ ವಿಶ್ವವಿದ್ಯಾಲಯದ ಕುಲಪತಿವಪ್ರೊ. ಶಶಿಕಾಂತ ಎಸ್. ಉಡಿಕೇರಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿ ಕೃತಿಗಳನ್ನು ಲೋಕಾರ್ಪಣೆ ಮಾಡಲಿದ್ದಾರೆ.

ಖ್ಯಾತ ಸಾಹಿತಿ ಮತ್ತು ಪ್ರೊ.ಚಂದ್ರಶೇಖರ ಪಾಟೀಲ ಸಮಗ್ರ ಸಾಹಿತ್ಯ ಸಂಪುಟದ ಸಂಪಾದಕ ಪ್ರೊ. ಎಸ್.ಜಿ. ಸಿದ್ಧರಾಮಯ್ಯ ಅವರು ಉಚಿತ ಪುಸ್ತಕಗಳನ್ನು ಮತ್ತು ಚೆನ್ನವೀರ ಕಣವಿ ಸಮಗ್ರ ಸಾಹಿತ್ಯ ಸಂಪುಟದ ಸಂಪಾದಕ ಡಾ. ಜಿ.ಎಂ. ಹೆಗಡೆ ಅವರು ಕಲಬುರಗಿ ಜಿಲ್ಲಾ ಜಾಗೃತ ಸಮಿತಿ ಸದಸ್ಯರಿಗೆ ಅರ್ಹತಾ ಪತ್ರ ವಿತರಣೆ ಮಾಡಲಿದ್ದಾರೆ.

ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಡಾ. ಮಾನಸ ಅವರ ಅಧ್ಯಕ್ಷತೆಯಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಹಿರಿಯ ಸಾಹಿತಿ ಡಾ. ಬಸವರಾಜ ಸಬರದ ಅವರು ಸಂಪುಟಗಳ ಕುರಿತು ಮಾತನಾಡಲಿದ್ದಾರೆ.

ಗುಲಬರ್ಗಾ ವಿಶ್ವವಿದ್ಯಾಲಯ ಪ್ರಸಾರಾಂಗದ ನಿರ್ದೇಶಕ ಪ್ರೊ. ಎಚ್.ಟಿ. ಪೋತೆ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಪ್ರೊ. ಚಂದ್ರಶೇಖರ ಪಾಟೀಲ ಹಾಗೂ ಚೆನ್ನವೀರ ಕಣವಿ ಅವರ ಕುಟುಂಬ ಸದಸ್ಯರುಗಳಾದ ನೀಲಾ ಪಾಟೀಲ್, ಪ್ರಿಯದರ್ಶಿ ಕಣವಿ, ಪ್ರೊ. ಚಂದ್ರಶೇಖರ ಪಾಟೀಲ ಸಮಗ್ರ ಸಾಹಿತ್ಯ ಸಂಪುಟಗಳ ಸಹ ಸಂಪಾದಕ

ಡಾ. ಮಂಜುನಾಥ ಟಿ., ಗುಲಬರ್ಗಾ ವಿಶ್ವವಿದ್ಯಾಲಯದ ವಿದ್ಯಾ ವಿಷಯಕ ಪರಿಷತ್ ಸದಸ್ಯ ಡಾ. ಸುರೇಶ ಜಂಗೆ, ಸಿಂಡಿಕೇಟ್ ಸದಸ್ಯ ಉದಯ ಬಿ. ಪಾಟೀಲ್ ಅವರು ಉಪಸ್ಥಿತರಿರಲಿದ್ದಾರೆ.

## ಅಧಿಕಾರಿಗಳು ಜವಾಬ್ದಾರಿಯಿಂದ ಕರ್ತವ್ಯ ನಿರ್ವಹಿಸಿ: ಎಸ್ಪಿ ಅರಸಿದ್ದಿ

ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ : 2026ರ ಜನವರಿ 1 ರಿಂದ 8 ರವರೆಗೆ ನಡೆಯಲಿರುವ ಶ್ರೀ ಗವಿಸಿದ್ದೇಶ್ವರ ಜಾತ್ರೆಯಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಅಧಿಕಾರಿಗಳು ತಮಗೆ ನೀಡಿದ ಕೆಲಸಗಳನ್ನು ಜವಾಬ್ದಾರಿಯಿಂದ ನಿರ್ವಹಿಸಬೇಕೆಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ ಹೇಳಿದರು.

ಕೊಪ್ಪಳ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಛೇರಿ ಸಭಾಂಗಣದಲ್ಲಿ 2026 ರ ಜನವರಿ 1 ರಿಂದ 8 ರವರೆಗೆ ನಡೆಯಲಿರುವ ಶ್ರೀ ಗವಿಸಿದ್ದೇಶ್ವರ ಜಾತ್ರೆಯ ಹಿನ್ನೆಲೆ ಸಂಚಾರ ದಟ್ಟಣೆ ಮತ್ತು ಜನ ಜಂಗುಳಿ ನಿಯಂತ್ರಣ ಕುರಿತು ಮುಂಜಾಗ್ರತೆವಹಿಸಲು ವಿವಿಧ ಇಲಾಖೆಯ ಅಧಿಕಾರಿಗಳಿಗೆ ಕರೆದ ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆವಹಿಸಿ ಮಾತನಾಡಿದರು.

ವಿವಿಧ ಕಮಿಟಿಯವರಿಗೆ ನೀಡಿದ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು



ಮತ್ತು ಕಾನೂನು ಸುವ್ಯವಸ್ಥೆಗೆ ಯಾವುದೇ ರೀತಿಯಲ್ಲಿ ಧಕ್ಕೆಯಾಗದಂತೆ ನೋಡಿಕೊಳ್ಳಬೇಕು. ವಿಶೇಷವಾಗಿ ಜೆಸ್ಕಾಂ, ಆರೋಗ್ಯ ಮತ್ತು ಸಾರಿಗೆ ಇಲಾಖೆ ಹಾಗೂ ಅಗ್ನಿಶಾಮಕ ದಳದ ಸಿಬ್ಬಂದಿಗಳ ಜವಾಬ್ದಾರಿ ಬಹಳ ಇದೆ. ಜಾತ್ರೆಯಲ್ಲಿ ಜನರಿಗೆ ಯಾವುದೇ ರೀತಿಯಲ್ಲಿ ಆರೋಗ್ಯ ಸಮಸ್ಯೆಗಳಾದರೆ ತಕ್ಷಣ ಅವರಿಗೆ ಚಿಕಿತ್ಸೆ ನೀಡಲು ಮೆಡಿಕಲ್ ಟೀಂನವರು ರೆಡಿಯಾಗಿರಬೇಕು. ಊಟ ಮತ್ತು ತೇರು ಹಾಗೂ ಇತರೆ ನಿಗದಿಪಡಿಸಿದ ಸ್ಥಳಗಳಲ್ಲಿ ಅಗ್ನಿಶಾಮಕ ವಾಹನಗಳನ್ನು ಮುಂಜಾಗ್ರತೆಯಾಗಿ ನಿಲ್ಲಿಸಬೇಕು ಎಂದರು.

ನಗರಸಭೆ ವತಿಯಿಂದ ಎಲ್ಲಾ ಕಡೆ ಸ್ವಚ್ಛತೆ ಮಾಡಬೇಕು. ಜೆಸ್ಕಾಂನವರು ವಿದ್ಯುತ್ ಸಮಸ್ಯೆಗಳಾಗದಂತೆ ನೋಡಿಕೊಳ್ಳಬೇಕು. ಆಹಾರ ಸುರಕ್ಷಿತೆಯ ಅಧಿಕಾರಿಗಳು ಫುಡ್ ಸೇಫ್ಟಿಕಡೆಗೆ ನಿಗಾವಹಿಸಬೇಕು. ಟ್ರಾಫಿಕ್ ಸಮಸ್ಯೆಗಳಾಗದಂತೆ ವಾಹನಗಳನ್ನು ಎಲ್ಲಿ ನಿಲ್ಲಿಸಬೇಕು ಮತ್ತು ಎಲ್ಲಿಂದ ಹೋಗಬೇಕು ಎನ್ನುವ ಕುರಿತು ಮುಂಚಿತವಾಗಿ ಈಗಲೇ ಸ್ಥಳ ಪರಿಶೀಲನೆ ಮಾಡಬೇಕು ಮತ್ತು ಇದರ ಮಾಹಿತಿಯನ್ನು ವಾಹನಗಳು ಯಾವ ಮಾರ್ಗದಲ್ಲಿ ಸಂಚರಿಸುತ್ತವೆ ಎನ್ನುವ ಕುರಿತು ಸಾರ್ವಜನಿಕರಿಗೆ ಮಾಧ್ಯಮಗಳ ಮೂಲಕ ಮಾಹಿತಿ ನೀಡಬೇಕೆಂದರು.

ಅಧಿಕಾರಿಗಳು ಯಾವುದೇ ಲ್ಯಾಪ್ಸಗಳಾಗದಂತೆ ನೋಡಿಕೊಳ್ಳಬೇಕು. ಎಲ್ಲಾ ಕಡೆ ಸಿಸಿಟಿವಿ ಅಳವಡಿಸುವುದರ ಜೊತೆಗೆ ಹೆಚ್ಚಿನ ಸಂಖ್ಯೆಯಲ್ಲಿ ವಾಚ ಟವರಗಳನ್ನು ಮಾಡಲಾಗುತ್ತಿದೆ. ಪ್ರತಿವರ್ಷ ಜನರು ಹೆಚ್ಚಿನ ಸಂಖ್ಯೆಯಲ್ಲಿ ಜಾತ್ರೆಗೆ ಬರುವುದರಿಂದ ಅವರಿಗೆ ಯಾವುದೇ ಸಮಸ್ಯೆಗಳಾಗದಂತೆ ಮುಂಜಾಗ್ರತೆಯಾಗಿ ಸೂಕ್ತ ಪೊಲೀಸ್ ಬಂದೋಬಸ್ತ ನೀಡಲಾಗುತ್ತಿದೆ. ನಮ್ಮಿಂದ ತಮಗೆ ಏನಾದರೂ ಸಹಾಯ ಬೇಕಾದರೂ ನಮಗೆ ತಿಳಿಸಿ ಎಲ್ಲರೂ ಸೇರಿ ಶ್ರೀ ಗವಿಸಿದ್ದೇಶ್ವರ ಜಾತ್ರೆಯನ್ನು ಒಳ್ಳೆಯ ರೀತಿಯಲ್ಲಿ ಆಚರಣೆ ಮಾಡೋಣ ಎಂದು ಹೇಳಿದರು.

ಈ ಸಭೆಯಲ್ಲಿ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಮಂಜುನಾಥ ಗುಂಡೂರ್, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯ ಜಿಲ್ಲಾ ಅಂಕಿತ ಅಧಿಕಾರಿ ಡಾ. ಅಲಕಾನಂದ ಮಳಗಿ, ಅಬಕಾರಿ ಉಪ ಆಯುಕ್ತರಾದ ಕೆ.ಪ್ರಶಾಂತ ಕುಮಾರ, ಕೊಪ್ಪಳ ನಗರಸಭೆ ಪೌರಾಯುಕ್ತರಾದ ವೆಂಕಟೇಶ ನಾಗನೂರ, ಕಲ್ಯಾಣ ಕರ್ನಾಟಕ ಸಾರಿಗೆ ನಿಮಗದ ವಿಭಾಗೀಯ ಅಧಿಕಾರಿ ಪಿ.ಪರಮೇಶ್ವರಪ್ಪ, ಆಹಾರ ಸುರಕ್ಷಿತೆ ಅಧಿಕಾರಿ ಕೃಷ್ಣ ರಾಠೋಡ ಸೇರಿದಂತೆ ಇತರೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಕುಮಾರೇಶ್ವರ ಔಷಧ ಮಹಾವಿದ್ಯಾಲಯ ರಾಷ್ಟ್ರೀಯ ಔಷಧ ವಿಜ್ಞಾನ ಸಮ್ಮೇಳನ

ಮಲ್ಲಮ್ಮನುಡಿವಾರ್ತೆಬಾಗಲಕೋಟೆ: ನಗರದ ಬಿ.ವ್ಹಿ.ವ್ಹಿ. ಸಂಘದ ಹಾನಗಲ್ಲ ಶ್ರೀ ಕುಮಾರೇಶ್ವರ ಔಷಧ ಮಹಾವಿದ್ಯಾಲಯದ ಆಶ್ರಯದಲ್ಲಿ ಒಂದು ದಿನದ ರಾಷ್ಟ್ರೀಯ ಔಷಧ ವಿಜ್ಞಾನ ಸಮ್ಮೇಳನ ಇಂದು ಜರುಗಲಿದೆ. ಔಷಧ ವಿಜ್ಞಾನದಲ್ಲಿ ಎ.ಆಯ್. ಚಾಲಿತ ಸಂಶೋಧನೆಗಳು ವಿಷಯದ ಮೇಲೆ ಒಂದು ದಿನದ ರಾಷ್ಟ್ರಿಯ ಸಮ್ಮೇಳನ ಮಂಗಳವಾರ ಇಂದು ಬವಿವ ಸಂಘದ ನೂತನ ಸಭಾಭವನದಲ್ಲಿ ಆಯೋಜಿಸಲಾಗಿದೆ. ಮುಖ್ಯ ಅತಿಥಿಗಳಾಗಿ ಅಮೇರಿಕದ ಮಿಚಿಗಾನ ಫೈಜರ್ ಯುನಿರ್ವಸಿಟಿ ನಿರ್ದೇಶಕರಾದ ಡಾ.ಪ್ರವೀಣ ಹಿರೇಮಠ ಹಾಗೂ ಅತಿಥಿಗಳಾಗಿ ಡಾ.ಪ್ರಕಾಶಗೌಡನವರ ಪ್ರಾಚಾರ್ಯರು ಆದಿಚುಂಚನಗಿರಿ ವಿಶ್ವವಿದ್ಯಾಲಯ, ಸತೀಶ ಕುಲಕರ್ಣಿ ವ್ಯವಸ್ಥಾಪಕ ನಿರ್ದೇಶಕರು ಟೀಮ ಎ.ಎಮ್. ಎಸ್.ಎಡ್ಜ ಮೆಡಿಕಲ್ ಬೆಂಗಳೂರು ಆಗಮಿಸಲಿದ್ದಾರೆ.

ಈ ಸಮ್ಮೇಳನ ಔಷಧ ವಿಜ್ಞಾನ ವಿಭಾಗದಲ್ಲಿ ಮೈಲಿಗಲ್ಲಾಗಲಿದೆ, ಇದು ಹೈಬ್ರಿಡ್ ರೂಪದಲ್ಲಿ ಆಯೋಜಿಸಲಾಗಿದೆ ಆನ್ ಲೈನ್ ಹಾಗೂ ಆಫ್ ಲೈನ ನಲ್ಲಿ ನಡೆಯಲಿದೆ. ಪ್ರಪಂಚದ ನಾನಾ ದೇಶಗಳ ಪ್ರತಿನಿಧಿಗಳೊಂದಿಗೆ ಸುಮಾರು 1200 ಜನ ಹೆಸರನ್ನು ನೋಂದಾಯಿಸಿಕೊಂಡಿದ್ದಾರೆ.

ಬವಿವ ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ ಸಮಾರಂಭದ ಅಧ್ಯಕ್ಷತೆ ವಹಿಸುವರು. ವೇದಿಕೆ ಮೇಲೆ ಗೌರವ ಕಾರ್ಯದರ್ಶಿ ಮಹೇಶ ಅಥಣಿ. ಕುಮಾರೇಶ್ವರ ಔಷಧ ಮಹಾವಿದ್ಯಾಲಯ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ಸಾಸನೂರ ಉಪಸ್ಥಿತರಿರುವರೆಂದು ಪ್ರಾಚಾರ್ಯ ಡಾ.ವಾಯ್.ಶ್ರೀನಿವಾಸ ಸಂಘಟನಾ ಕಾರ್ಯದರ್ಶಿಗಳಾದ ಡಾ.ಅನಿತಾ ದೇಸಾಯಿ.ಡಾ.ಜಯದೇವ ಹಿರೇಮಠ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪೋಲಿಯೋ ಲಸಿಕೆ ಹಾಕಿಸಿ, ಸಂಪೂರ್ಣ ರಕ್ಷಣೆಯನ್ನು ಖಚಿತಪಡಿಸಿಕೊಳ್ಳಿ: ಸಿದ್ದಾಪುರ



ಮಲ್ಲಮ್ಮ ನುಡಿ ವಾರ್ತೆ ಕಾರಟಗಿ: ತಾಲೂಕಿನ ಸಿಂಗನಾಳ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆರೋಗ್ಯ ಇಲಾಖೆ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕೊಪ್ಪಳ ಇವರ ಸಂಯುಕ್ತ ಆಶ್ರಯ ಯೋಜನೆಯಲ್ಲಿ ಪೋಲಿಯೋ ಲಸಿಕೆ ಕಾರ್ಯಕ್ರಮವನ್ನು ಗ್ರಾಮದಲ್ಲಿ ಜರುಗಿಸಲಾಯಿತು. ಆರೋಗ್ಯ ಇಲಾಖೆ ಅಧಿಕಾರಿಗಳಾದ ಶರಣಪ್ಪ ಮಾತನಾಡಿ ಭಾರತವು ಪೋಲಿಯೋ ಮುಕ್ತ ದೇಶವಾಗಿದೆ. ಆದರೆ ಕೆಲವು ದೇಶಗಳಲ್ಲಿ ಪೋಲಿಯೋ ಇನ್ನೂ ಭೀತಿಯನ್ನುಂಟುಮಾಡುತ್ತಿದ್ದು, ನಮ್ಮ ದೇಶದಲ್ಲೂ ಮರುಕಳಿಸುವ ಸಾಧ್ಯತೆಯಿದೆ. ನಿಮ್ಮ ಮಗುವಿಗೆ ಪ್ರತಿ ಬಾರಿಯೂ 2 ಹನಿ ಪೋಲಿಯೋ ಲಸಿಕೆ ಹಾಕಿಸಿ, ಸಂಪೂರ್ಣ ರಕ್ಷಣೆಯನ್ನು ಖಚಿತಪಡಿಸಿಕೊಳ್ಳಿ ಪೋಲಿಯೋ

ವಿರುದ್ಧ ಭಾರತ ಸಾಧಿಸಿರುವ ಗೆಲುವನ್ನು ಮುಂದುವರಿಸಲು ನಮ್ಮ ಜೊತೆ ಕೈ ಜೋಡಿಸಿ ಎಂದು ಪೋಷಕರಿಗೆ ತಿಳಿಪಡಿಸಿದರು. ಈ ಸಂದರ್ಭದಲ್ಲಿ ಆರೋಗ್ಯ ಇಲಾಖೆಯ ಅಧಿಕಾರಿಗಳಾದ ಶರಣಪ್ಪ ಸಿದ್ದಾಪುರ, ಆಶಾ ಕಾರ್ಯಕರ್ತರಾದ ಹಂಪಮ್ಮ, ರೇಣುಕಾ, ಅಂಗನವಾಡಿ ಕಾರ್ಯಕರ್ತೆಯರಾದ ಶ್ರೀಮತಿ ಶರಣಮ್ಮಕೆ, ಹಾಗೂ ಇತರರು ಇದ್ದರು.

ಗ್ರಾಮ ಪಂಚಾಯಿತಿ ಆಡಳಿತಅಧಿಕಾರಿಗಳನಿರ್ಲಕ್ಷ್ಯ, ಆಶಾ ಕಾರ್ಯಕರ್ತರಿಗೆ ಹಾಗೂ ಅಂಗನವಾಡಿ ಕಾರ್ಯಕರ್ತರಿಗೆ, ಗ್ರಾಮ ಪಂಚಾಯಿತಿಯವರು ನಿರ್ಲಕ್ಷಿತೆಯನ್ನು ತೋರಿಸಿದ್ದಾರೆ, ಬೆಳಗ್ಗೆ ಉಪಹಾರ ಇಲ್ಲದೆ ಹಾಗೂ ಮಧ್ಯಾಹ್ನದ ಊಟ ಇಲ್ಲದೆ ತಮ್ಮ ಕೆಲಸದಲ್ಲಿ ನಿರತರವಾಗಿ ಸೇವೆಯನ್ನು ಸಲ್ಲಿಸಿದರು. ಉಪಹಾರ ವಾಗಲಿ, ಊಟದ ವ್ಯವಸ್ಥೆಯಲ್ಲಿ ಗ್ರಾಮ ಪಂಚಾಯತ್ ಅಧಿಕಾರಿಗಳು ಸಂಪೂರ್ಣವಾಗಿ ನಿರ್ಲಕ್ಷಿಸಿದ್ದಾರೆ.

ಯಮನೂರ ಸಿಂಗನಾಳ

ಸ್ಥಳೀಯ ನಿವಾಸಿ.

## ಪಟ್ಟದ್ದೇವರ ವಿಚಾರಧಾರೆ ಮಠಾಧೀಶರಿಗೆ ಮಾದರಿ: ಈಶ್ವರ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ: ಶತಾಯಷಿ ಡಾ.ಚನ್ನಬಸವ ಪಟ್ಟದ್ದೇವರು ತಮ್ಮ ಜೀವಿತಾವಧಿಯಲ್ಲಿ ಮಾಡಿರುವ ಜೀವಪರ, ಸಮಾಜಪರ ಕಾರ್ಯಗಳಿಗೆ ಮಠಾಧೀಶರಿಗೆ ಮಾದರಿಯಾಗಿವೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು. ಪಟ್ಟಣದ ಭೀಮಣ್ಣ ಖಂಡ್ರೆ ತಾಂತ್ರಿಕ ಮಹಾವಿದ್ಯಾಲಯ (ಬಿಕೆಐಟಿ) ಆವರಣದಲ್ಲಿ ಶಾಂತಿವರ್ಧಕ ಶಿಕ್ಷಣ ಸಂಸ್ಥೆ ವತಿಯಿಂದ ಸೋಮವಾರ ಆಯೋಜಿಸಿದ್ದ ಶತಾಯಷಿ ಡಾ.ಚನ್ನಬಸವ ಪಟ್ಟದ್ದೇವರ 136ನೆಯ ಜಯಂತ್ಯುತ್ಸವ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪಟ್ಟದ್ದೇವರು ಶೈಕ್ಷಣಿಕ, ಸಾಮಾಜಿಕ, ಧಾರ್ಮಿಕ ಕ್ಷೇತ್ರಗಲ್ಲಿ ಸಲ್ಲಿಸಿದ ಸೇವೆ ಅನುಪಮ. ಪಟ್ಟದ್ದೇವರು, ಡಾ.ಭೀಮಣ್ಣ ಖಂಡ್ರೆ ಸೇರಿ ಕಲ್ಲು ಮಣ್ಣು ಹೊತ್ತು ಮರೆಯಾಗಿದ್ದ ಅನುಭವ ಮಂಟಪವನ್ನು ಪೂರ್ನ ನಿರ್ಮಾಣ ಮಾಡಿದರು. ಶಾಂತಿವರ್ಧಕ ಶಿಕ್ಷಣ ಸಂಸ್ಥೆಯಡಿ ಮಹಿಳಾ ಶಾಲಾ-ಕಾಲೇಜು ತೆರೆದು ಎಲ್ಲ ಮಹಿಳೆಯರಿಗೂ ಶಿಕ್ಷಣ ಸಿಗುವಂತೆ ಮಾಡಿದ್ದರು. ನಂತರ ಶಿಕ್ಷಣ ಸಂಸ್ಥೆ ಜವಾಬ್ದಾರಿ ವಹಿಸಿದ ಡಾ.ಭೀಮಣ್ಣ ಖಂಡ್ರೆ ಅವರು 1982ರಲ್ಲಿ ಗ್ರಾಮೀಣ ಭಾಗದಲ್ಲಿ ಎಂಜನೀಯರಿಂಗ್ ಕಾಲೇಜು ತೆ-ರೆದು ಈ ಭಾಗದ ವಿದ್ಯಾರ್ಥಿಗಳ ತಾಂತ್ರಿಕ ಶಿಕ್ಷಣದ ಕನಸು ನನಸು ಮಾಡಿದ್ದರು. ಈ ಸಂಸ್ಥೆಯಡಿ ಅಧ್ಯಯನ ಮಾಡಿದ ಸಾವಿರಾರೂ ವಿದ್ಯಾರ್ಥಿಗಳು ದೇಶ ವಿದೇಶಗಳಲ್ಲಿ ಸೇವೆ ಸಲ್ಲಿಸುತ್ತ ನಾಡುನ್ನು ಕಟ್ಟುವ ಕೆಲಸ ಮಾಡುತ್ತಿದ್ದಾರೆ ಎಂದು ಮೆಚ್ಚುಗೆ ವ್ಯಕ್ತ ಪಡಿಸಿದರು. ಮೇಹಕರ್-ತಡೋಳಾ ಮಠದ ರಾಜೇಶ್ವರ ಶಿವಾಚಾರ್ಯ, ಹಿರೇಮಠ ಸಂಸ್ಥಾನ ಗುರುಬಸವ ಪಟ್ಟದ್ದೇವರು, ಬೆಲ್ದಾಳ ಸಿದ್ಧರಾಮ ಶರಣರು, ಡಾ.ರಾಜಶೇಖರ ಶಿವಾಚಾರ್ಯ, ಡಾಕುಳಗಿ ಪೂಜ್ಯರು ಮಾತನಾಡಿದರು. ಈ ಸಂದರ್ಭದಲ್ಲಿ ಸಂಸದ ಸಾಗರ ಖಂಡ್ರೆ, ಸಂಸ್ಥೆಯ ಆಡಳಿತಾಧಿಕಾರಿ ಅಂಕುಶ ಢೋಲೆ, ಬಿಕೆಐಟಿ ಪ್ರಾಚಾರ್ಯ ಡಾ.ಉದಯಕುಮಾರ ಕಲ್ಯಾಣೆ ಸೇರಿದಂತೆ ಹಲವರು ಇದ್ದರು.

ಮೇಘನಾ ವಚನ ಗಾಯನ ನಡೆಸಿ ಕೊಟ್ಟರು. ಬಸವರಾಜ ಕಾವಡಿ ನಿರೂಪಿಸಿದರು. ದಿವ್ಯಸಾನ್ನಿಧ್ಯ ವಹಿಸಿದ್ದ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಮಾತನಾಡಿ, ಶತಾಯಷಿ ಡಾ.ಚನ್ನಬಸವ ಪಟ್ಟದ್ದೇವರ ಎಲ್ಲ ಕಾರ್ಯಗಳಿಗೆ ಡಾ.ಭೀಮಣ್ಣ ಖಂಡ್ರೆ ಅವರು ಬಲಗೈಯಾಗಿ ಕೆಲಸ ಮಾಡಿದ್ದರು. ಅನುಭವ ಮಂಟಪ ಪೂರ್ನನಿರ್ಮಾಣ, ಶಿಕ್ಷಣ, ಕನ್ನಡ ಸೇವೆ ಸೇರಿ ಮುಂತಾದ ವಿಧಾಯಕ ಕಾರ್ಯಗಳಲ್ಲಿ ಈ ಇಬ್ಬರ ಕೊಡುಗೆ ದೊಡ್ಡದಿದೆ. ಬಸವಣ್ಣನವರ ಎಲ್ಲ ಕಾರ್ಯಗಳು ಡಾ.ಚನ್ನಬಸವ ಪಟ್ಟದ್ದೇವರು ಪೂರ್ಣಗೊಳಿಸುವ ಪ್ರಯತ್ನ ಮಾಡಿದ್ದರು. ಶಾಂತಿವರ್ಧಕ ಶಿಕ್ಷಣ ಸಂಸ್ಥೆಯಡಿ ತೆರೆದ ಎಲ್ಲ ಶಾಲಾ-ಕಾಲೇಜುಗಳಿಗೆ ಬಸವಾದಿ ಶರಣರ ಹೆಸರಿಟ್ಟು ಮಹಾತ್ಮರ ಕೊಡುಗೆ ಸಾರಿದ್ದರು ಎಂದು ತಿಳಿಸಿದರು. ಹುಲಸೂರು ಗುರುಬಸವೇಶ್ವರ ಸಂಸ್ಥಾನ ಮಠದ ಶಿವಾನಂದ ಸ್ವಾಮೀಜಿ ಮಾತನಾಡಿ, ರಾಜ್ಯದಲ್ಲಿ ಅರಣ್ಯ ಇಲಾಖೆ ಸಚಿವರಾಗಿ ಉತ್ತಮ ಸೇವೆ ಸಲ್ಲಿಸುತ್ತಿರುವ ಈಶ್ವರ ಖಂಡ್ರೆ ಅವರು ಮುಂದೆ ಮುಖ್ಯಮಂತ್ರಿ ಆಗಲಿ ಎಂದು ಹಾರೈಸಿದರು. ಅರಣ್ಯ ಇಲಾಖೆಯಲ್ಲಿ ಏನೆಲ್ಲ ಕೆಲಸ ಮಾಡಬಹುದು ಎನ್ನುವುದನ್ನು ಸಚಿವ ಈಶ್ವರ ಖಂಡ್ರೆ ಅವರು ತೋರಿಸಿ ಕೊಟ್ಟಿದ್ದಾರೆ. ಹಗಲಿರುಳು ಸೇವೆ ಸಲ್ಲಿಸುತ್ತಿರುವ ಅವರಿಗೆ ಭವಿಷ್ಯದಲ್ಲಿ ಉನ್ನತ ಸ್ಥಾನಕ್ಕೆ ಎಲ್ಲರೂ ಶಕ್ತಿಯಾಗಿ ನಿಲ್ಲಬೇಕು ಎಂದರು.

## ಅರ್ಜಿ ಆಹ್ವಾನ

ಮಲ್ಲಮ್ಮನುಡಿವಾರ್ತೆಕಲಬುರಗಿಡಿ.: ಮಹಾನಗರಪಾಲಿಕೆಯ 2025-26ನೇ ಸಾಲಿನಲ್ಲಿ ಎಸ್.ಎಫ್.ಸಿ. (ಮುಕ್ತ ನಿಧಿ) ಜಿಲ್ಲಾಧಿಕಾರಿಗಳಿಂದ ಅನುಮೋದನೆಗೊಂಡಿರುವ ಶೇ. 7.25 ಮತ್ತು ಶೇ. 5ರ ಯೋಜನೆಯ ಕ್ರೀಯಾ ಯೋಜನೆಗಳಡಿ ಅಲ್ಪಸಂಖ್ಯಾತರು ಮತ್ತು ಹಿಂದುಳಿದ ವರ್ಗ ಹಾಗೂ ವಿಕಲಚೇತನರ ಕಲ್ಯಾಣ ಕಾರ್ಯಕ್ರಮ ಯೋಜನೆಗಳಡಿ ಸೌಲಭ್ಯಗಳನ್ನು ಪಡೆದುಕೊಳ್ಳಲು ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಮಹಾನಗರ ಪಾಲಿಕೆಯ ಉಪ ಆಯುಕ್ತರು (ಆಡಳಿತ) ಅವರು ತಿಳಿಸಿದ್ದಾರೆ. 2025-26ನೇ ಸಾಲಿನ ಮಹಾನಗರಪಾಲಿಕೆಯ ಶೇ. 7.25 ಉನ್ನತ ವ್ಯಾಸ್ಯಂಗಕ್ಕಾಗಿ ಅಲ್ಪಸಂಖ್ಯಾತರು ಮತ್ತು ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ಉನ್ನತ ವ್ಯಾಸಂಗಕ್ಕಾಗಿ ಪಿ.ಹೆಚ್.ಡಿ /ಪೋಸ್ಟ್ ಡಾಕ್ಟರೇಟ್ ವಿದ್ಯಾರ್ಥಿಗಳಿಗೆ ಮಾತ್ರ 30,000 ರೂ ಮೀರದಂತೆ (11 ವಿದ್ಯಾರ್ಥಿಗಳಿಗೆ) ಮಾತ್ರ ಸಹಾಯಧನ ನೀಡಲಾಗುತ್ತದೆ ಎಂದರು.

## ಗ್ಯಾರಂಟಿ ಅನುಷ್ಠಾನ ಸಮಿತಿ ವತಿಯಿಂದ ಜಾಗೃತಿ ಅಭಿಯಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ್ ಡಿ 22:–ರಾಜ್ಯಸರ್ಕಾರದ ಜನಪರ ಕಾರ್ಯಕ್ರಮಗಳಾದ ಗ್ಯಾರಂಟಿ ಯೋಜನೆಗಳನ್ನು ಪ್ರತಿ ಮನೆಗೂ ತಲುಪಿಸುವ ನಿಟ್ಟಿನಲ್ಲಿ ಮಾನ್ಯ ಮಾಜಿ ಶಾಸಕರಾದ ಅಶೋಕ ಖೇಣಿ ಸರ್ ರವರ ಮಾರ್ಗದರ್ಶನದಲ್ಲಿ ಬೀದರ ದಕ್ಷಿಣ ಕ್ಷೇತ್ರದ ತಾಲ್ಲೂಕ ಪಂಚ ಗ್ಯಾರಂಟಿ ಉಪಾಧ್ಯಕ್ಷರಾದ ಶ್ರೀ ರಾಜಕುಮಾರ ಮಡಕಿ ಹಾಗೂ ಸದಸ್ಯರ ನೇತೃತ್ವದಲ್ಲಿ ನಮ್ಮ ನಡೆ ಹಳ್ಳಿಕಡೆ ಕಾರ್ಯಕ್ರಮವನ್ನು ಬೀದರ ದಕ್ಷಿಣ ವಿಧಾನಸಭಾ ಕ್ಷೇತ್ರದ ಬಗದಲ ಗ್ರಾಮದ ವಾರ್ಡ್ 06–07 ರಲ್ಲಿ ಕರ್ನಾಟಕ ಸರ್ಕಾರದ ಪಂಚ್ ಗ್ಯಾರಂಟಿ ಯೋಜನೆಗಳಾದ,

ಅನ್ನಭಾಗ್ಯ ಯೋಜನೆ ಪಡಿತರ ಚೀಟಿ ತಿದ್ದುಪಡಿಗೆ ಸಂಬಂಧಿಸಿದಂತೆ ಗ್ರಾಮ ಒನ್ ಕೇಂದ್ರಗಳಲ್ಲಿ ಎದುರಾಗುತ್ತಿದ್ದ ತೊಂದರೆಗಳನ್ನು ನಿವಾರಿಸುವಲ್ಲಿ ತಂಡವು ಸಕ್ರಿಯವಾಗಿ ಕೆಲಸ ಮಾಡಿದೆ. ಅಲ್ಲದೆ, ಕಳ್ಳ ಸಾಗಣಿಕೆಯಂತಹ ಪ್ರಕರಣಗಳ ಬಗ್ಗೆಯೂ ನಿಗಾ ವಹಿಸಿ, ಅಧಿಕಾರಿಗಳ ಗಮನಕ್ಕೆ ತರುತ್ತಿದೆ.

ಯುವನಿಧಿ ಈ ಯೋಜನೆ ಪದವೀಧರರು ಮತ್ತು ಡಿಪ್ಲೋಮಾ ಮುಗಿಸಿದ ಯುವಕರಿಗೆ ಯೋಜನೆಯ ಕುರಿತು ಪೂರ್ಣ ಮಾಹಿತಿ ಇಲ್ಲದಿರುವ ಕಾರಣ, ಸಮಿತಿಯು ಕಾಲೇಜುಗಳಲ್ಲಿ ಮತ್ತು ಗ್ರಾಮ ಮಟ್ಟದಲ್ಲಿ ವಿಶೇಷ ಪ್ರಚಾರ ಆಂದೋಲನಗಳನ್ನು ನಡೆಸುತ್ತಿದೆ. ನೋಂದಣಿ ಪ್ರಕ್ರಿಯೆಯಲ್ಲಿ ಸಹಾಯ ಮಾಡುತ್ತಿದೆ. ಮತ್ತು ಗೃಹ ಲಕ್ಷ್ಮಿ, ಶಕ್ತಿ ಯೋಜನೆ, ಗೃಹ ಜ್ಯೋತಿ, ಯೋಜನಗಳ ಮಹತ್ವದ ಬಗ್ಗೆ ಮನೆ ಮನೆಗೆ ತೆರಳಿ ಜನರಲ್ಲಿ ತಿಳಿಸಲಾಯಿತು...

ಈ ಸಂದರ್ಭದಲ್ಲಿ ಕಮಿಟಿಯ ಸದಸ್ಯರಾದ ಉದಯಕುಮಾರ ಚಟನಳ್ಳಿ, ಶಿವಕುಮಾರ ಕುತ್ತಾಬಬಾದ್, ಮೊಹಮ್ಮದ್ ಖುದುಸ್, ಕಿಸಾನ್ ಸೇಲ್ ಘಟಕದ ಅಧ್ಯಕ್ಷರಾದ ಸಂತೋಷ ಪಾಟೀಲ್ ಹೊನ್ನಡಿ, ಮುಖಂಡರಾದ ಬಾಬುರಾವ ಗಂಗಾ, ಬ್ಲಾಕ್ ಕಾಂಗ್ರೆಸ್ ಕಮಿಟಿಯ ಖಜಾಂಚಿಯಾದ ಶಿವರಾಜ ಹೌಶೆಟ್ಟಿ, ಕಾಂಗ್ರೆಸ್ ಯುವ ಮುಖಂಡರಾದ ಕೈಲಾಸ ಮರಾಠ, ಓಬಿಸಿ ತಾಲ್ಲೂಕ ಅಧ್ಯಕ್ಷರಾದ ಕಾರ್ತಿಕ್ ದೇಸಾಯಿ, ಮುಖಂಡರಾದ ಪ್ರಕಾಶ್ ಹಾಲಹಳ್ಳಿ, ಸಂಜುಕುಮಾರ ಮೇತ್ರೆ, ಡೇವಿಡ್, ಜೀವನ, ಮನೋಜ ದಾರ್ಕೆ, ಸಿದ್ದರೆಡ್ಡಿ ಸೇರಿ ಅನೇಕ ಗ್ರಾಮಸ್ಥರು ಪಾಲ್ಗೊಂಡಿದರು.....

## ಗಿರಿಜಿಲ್ಲೆ ಪೋಲಿಯೋ ಮುಕ್ತವನ್ನಾಗಿಸಿ : ಶಾಸಕ ಚನ್ನಾರೆಡ್ಡಿ ಪಾಟೀಲ್ ಕರೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಪೋಲಿಯೋ ಮುಕ್ತ ಭಾರತ ಆಗಬೇಕು. ಯಾವ ಮಗು ಕೂಡಾ ಅಂಗವಿಕಲತೆ ಹೊಂದಬಾರದು. ಈ ನಿಟ್ಟಿನಲ್ಲಿ ಜಿಲ್ಲೆಯಲ್ಲಿರುವ ಐದು ವರ್ಷರೊಳಗಿನ ಎಲ್ಲ ಮಕ್ಕಳಿಗೂ ಪಲ್ಸ್ ಪೋಲಿಯೋ ಲಸಿಕೆ ಹಾಕುವ ಮೂಲಕ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ್ ಹೇಳಿದರು.

ನಗರದ ಲಾಡೆಸ್ ಗಲ್ಲಿಯ ಶ್ರೀ ಭವಾನಿ ದೇವಸ್ಥಾನದ ಆವರಣದಲ್ಲಿ ಭಾನುವಾರ ಬೆಳಿಗ್ಗೆ ರಾಷ್ಟ್ರೀಯ ಪಲ್ಸ್ ಪೋಲಿಯೊ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿರುವ 1,66,693 ಐದು ವರ್ಷದೊಳಗಿನ ಎಲ್ಲ ಮಕ್ಕಳಿಗೆ ತಪ್ಪದೇ ಪಲ್ಸ್ ಪೋಲಿಯೋ ಲಸಿಕೆ ಹಾಕಬೇಕು. ನಿಗದಿತ ಕಾರ್ಯಕ್ರಮದಂತೆಯೇ ಆರೋಗ್ಯ ಇಲಾಖೆ ಸಿಬ್ಬಂದಿ ಜಿಲ್ಲೆಯ ಪ್ರತಿ ಮನೆ, ವಿವಿಧ ಸಾರ್ವಜನಿಕ ಸ್ಥಳಗಳಲ್ಲಿ ಇರುವ ಮಕ್ಕಳನ್ನು ಗುರುತಿಸಿ, ತಿಳಿಹೇಳಿ ಲಸಿಕೆ ಹಾಕುವ



ಕೆಲಸ ಚಾಚು ತಪ್ಪದೇ ಮಾಡಬೇಕೆಂದರು.

ಜನರಲ್ಲಿ ಈ ಕುರಿತು ತಪ್ಪು ತಿಳುವಳಿಕೆ ಇದ್ದರೇ ಅದನ್ನು ಹೊಗಲಾಡಿಸಬೇಕೆಂದ ಅವರು ಒಟ್ಟಾರೆ ಪೋಲಿಯೋ ಮುಕ್ತ ಭಾರತ ಮಾಡಬೇಕೆಂದು ಶಾಸಕರು ಹೇಳಿದರು.

ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಮಾತನಾಡಿ, ಇದೊಂದು ರಾಷ್ಟ್ರೀಯ ಕಾರ್ಯಕ್ರಮವಾಗಿದ್ದು, ಜನರ ಸಹಕಾರ ಅಗತ್ಯವಿದೆ. ಆರೋಗ್ಯ ಸಿಬ್ಬಂದಿ ಬಂದಾಗ ಐದು ವರ್ಷದೊಳಗಿನ ಪ್ರತಿ ಮಕ್ಕಳಿಗೆ ಕಡ್ಡಾಯವಾಗಿ ಲಸಿಕೆ ಹಾಕಿಸಲು ಅನುವು ಮಾಡಿಕೊಡಬೇಕೆಂದು ಹೇಳಿದರು.

ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಲವೀಶ ಒರಡಿಯಾ ಮಾತನಾಡಿ, ಇದೇ ಡಿಸೆಂಬರ್ 21ರಿಂದ 24ರವರೆಗೆ ನಾಲ್ಕು ದಿನಗಳ ಕಾರ್ಯಕ್ರಮದ ಯಶಸ್ಸಿಗೆ ಜಿಪಂನ ಸಿಬ್ಬಂದಿ ಸೇರಿದಂತೆಯೇ ವಿವಿಧ ಇಲಾಖೆಗಳು ಸಹಕರಿಸಬೇಕೆಂದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಮಹೇಶ ಬಿರಾದಾರ ಮಾತನಾಡಿ, ಕೇಂದ್ರ ಸರ್ಕಾರದ ಆರೋಗ್ಯ ಇಲಾಖೆಯ ಮಹತ್ವದ ಕೆಲಸಕ್ಕೆ ಸಾರ್ವಜನಿಕರ ಸಹಕಾರ ಅಗತ್ಯವಿದೆ. ಗಿರಿಜಿಲ್ಲೆಯನ್ನು ಪೋಲಿಯೋ ಮುಕ್ತ ಜಿಲ್ಲೆಯನ್ನಾಗಿ ಮಾಡಲು ಸರ್ವ ರೀತಿಯಲ್ಲೂ ಪ್ರಯತ್ನ ಮಾಡಲಾಗುವುದೆಂದರು.

ಕಾರ್ಯಕ್ರಮದಲ್ಲಿ ಆರ್.ಸಿ.ಎಚ್ ಅಧಿಕಾರಿ ಡಾ. ಮಲ್ಲಪ್ಪ, ತಾಲೂಕು ಆರೋಗ್ಯ ಅಧಿಕಾರಿ ಹಣಮಂತರೆಡ್ಡಿ ಹಾಗೂ ತುಳಸಿರಾಮ ಚವ್ಹಾಣ, ಸುರೇಶ ಮಡ್ಡಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣಾಧಿಕಾರಿ ತಿಪ್ಪಣ್ಣ, ಬಿಇಓ ವೀರಪ್ಪ ಕನ್ನಳ್ಳಿ, ಸಿಡಿಪಿಓ ದೀಪಿಕಾ ಬಿ.ವಿ. ತಾಲೂಕಾ ಆರೋಗ್ಯ ಶಿಕ್ಷಣ ಅಧಿಕಾರಿ ತುಳಸಿರಾಮ ಚವ್ಹಾಣ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಲಕ್ಷ್ಮಿ ಮುಂಡಾಸ್, ಜಗನಾಥ ಸೇರಿದಂತೆ ಆಶಾ ಮತ್ತು ಅಂಗನವಾಡಿ ಕಾರ್ಯಕರ್ತರು ಉಪಸ್ಥಿತರಿದ್ದರು.

## ಯೋಗ–ಧ್ಯಾನ ಪ್ರತಿಯೊಬ್ಬರ ಜೀವನದ ಭಾಗವಾಗಬೇಕು – ಗೋರಖನಾಥ ಗೂರುಜಿ



ಮಲ್ಲಮ್ಮ ನುಡಿ ವಾರ್ತೆ ಬೀದರ್: ಮನಸ್ಸು ಬಲವಾಗಿದ್ದರೆ ದುರ್ಬಲ ದೇಹವನ್ನೂ ಸಹ ಅದು ನೋಡಿಕೊಳ್ಳುತ್ತದೆ ಜೀವನದ ಬಗ್ಗೆ ನಿಮಗಿರುವ ದೃಷ್ಟಿಕೋನವನ್ನು ವಿಸ್ತರಿಸಿಕೊಳ್ಳಿ ನಿಮ್ಮ ಆತ್ಮಶಕ್ತಿಯಲ್ಲಿ ವಿಶ್ವಾಸವನ್ನು ಇಡಿ ಇದಕ್ಕಾಗಿ ಪ್ರತಿದಿನ ಯೋಗ ಹಾಗೂ ಧ್ಯಾನದ ಅಭ್ಯಾಸ ಮಾಡಿ ಎಂದು ಐ.ಎನ್.ಓ ಜಿಲ್ಲಾದ್ಯಕ್ಷ ಗೋರಖನಾಥ ಗೂರುಜಿ ಹೇಳಿದರು. ಹುಮನಬಾದ ತಾಲ್ಲೂಕಿನ ಹಳ್ಳಿಖೇಡ ಗ್ರಾಮದ ಜ್ಞಾನ ಭಾರತಿ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ವಿಶ್ವ ಧ್ಯಾನ ದಿವಸದ ಪ್ರಯುಕ್ತ ಪತಂಜಲಿ ಯೋಗ ಸಮಿತಿಯ ಯುವ ಘಟಕ, ಇಂಟರ್ನ್ಯಾಷನಲ್ ನ್ಯಾಚುರೋಪತಿ ಆರ್ಗನೈಜೇಶನ್ ಬೀದರ ಹಾಗೂ ಮಾತೋಶ್ರೀ ಕಸ್ತೂರ ಬಾಯಿ ತಾಳಂಪಳ್ಳಿ ಪ್ರೌಢ ಶಾಲೆಯ ಹಳ್ಳಿಖೇಡ (ಬಿ) ಇವರ ಸಂಯುಕ್ತಶ್ರಯದಲ್ಲಿ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ನಮ್ಮ ಜೀವನವು ಹೃದಯದ ಸ್ಫೂರ್ತಿಗಳಿಂದ ಮಾರ್ಗದರ್ಶಿಸುತ್ತದೆ ಹೃದಯಕ್ಕೆ ಆಲಿಸುವುದು ಮತ್ತು ಅದರ ಆಂತರಿಕ ಮಾರ್ಗದರ್ಶನವನ್ನು ಗ್ರಹಿಸುವುದರ ಜೊತೆಗೆ ಜೀವನವನ್ನು ಕರಗತ ಮಾಡಿಕೊಳ್ಳಲು ಧ್ಯಾನವು ನಮಗೆ ಪ್ರೇರೆಪಿಸುತ್ತದೆ, ಧ್ಯಾನವು ಹೃದಯ ಮತ್ತು ಮನಸ್ಸನ್ನು ಸೂಕ್ಷ್ಮವಾಗಿ ಹೊಂದಿಸುತ್ತಾ ಜೀವನದ ಸಮತೋಲನ ಮತ್ತು ಸ್ಪಷ್ಟತೆಯನ್ನು ಸೃಷ್ಟಿಸುತ್ತದೆ ಎಂದರು.

ಐ.ಎನ್.ಓ ರಾಜ್ಯ ಸಂಚಾಲಕ ಗುರುನಾಥ ರಾಜಗೀರಾ ಮಾತನಾಡಿ ಜೀವನದ ದೈನಂದಿನ ಕಾರ್ಯಗಳ ಒತ್ತಡ ಮತ್ತು ಆತಂಕದ ಮಟ್ಟವನ್ನು ಕಡಿಮೆ ಮಾಡಿ ಮತ್ತು ಮಾನಸಿಕ ನೆಮ್ಮದಿ ನೀಡುತ್ತದೆ ಈ ಯೋಗ ಮತ್ತು ಧ್ಯಾನ ಈ ನಿಟ್ಟಿನಲ್ಲಿ ಪ್ರತಿಯೊಬ್ಬರು ಯೋಗ ಹಾಗೂ ಧ್ಯಾನವನ್ನ ಮಾಡುತ್ತಾ ಆರೋಗ್ಯ ಹಾಗೂ ನೆಮ್ಮದಿಯ ಜೀವನ ಮಾಡಬೇಕು ಎಂದರು.

ಶಾಲೆಯ ಮುಖ್ಯಗುರುಗಳಾದ ಮಂಜುಳಾ ಸುಭಾಷ ಗಂಗಾ ಅವರು ಮಾತನಾಡಿ ನಮ್ಮ ಶಾಲೆಯಲ್ಲಿ ಮಕ್ಕಳಿಗೆ ಪಾಠದ ಜೊತೆಗೆ ಈ ರೀತಿಯ ಚಟುವಟಿಕೆಗಳನ್ನು ಮಾಡಿಸುತ್ತೆವೆ ಇವು ಮಕ್ಕಳ ಬೌದ್ಧಿಕ ಹಾಗೂ ದೈಹಿಕ ಬೆಳವಣಿಗೆಗೆ ಸಹಕಾರಿಯಾಗಿವೆ ಈ ದಿಶೆಯಲ್ಲಿ ನಮ್ಮ ಪ್ರಯತ್ನಕ್ಕೆ ಫಲ ಕೂಡ ಸಿಗುತ್ತಿದೆ ಮಕ್ಕಳು ಪಠ್ಯದ ಜೊತೆಗೆ ರಚನಾತ್ಮಕ ಚಟುವಟಿಕೆಗಳಲ್ಲಿಯು ಸಕ್ರಿಯವಾಗ ತೊಡಗಿಸಿಕೊಳ್ಳುತಿದ್ದಾರೆ ಎಂದರು. ಈ ಸಂದರ್ಭದಲ್ಲಿ ಪ್ರಮುಖರಾದ ಆನಂದರೆಡ್ಡಿ, ರಾಜಕುಮಾರ ಸೇರಿದಂತೆ ಇತರರಿದ್ದರು.

## ಪತ್ರಿಕಾ ಭವನದಲ್ಲಿ ಪದಗ್ರಹಣ, ಅಧಿಕಾರ ಹಸ್ತಾಂತರ ಸಮಾರಂಭ

ಮಲ್ಲಮ್ಮ ನುಡಿ ವಾರ್ತೆ ಲಿಂಗಸುಗೂರು : ಪಟ್ಟಣದ ಪತ್ರಿಕಾ ಭವನದಲ್ಲಿ 2025–28ನೇ ಅವಧಿಗೆ ಅಧಿಕಾರ ಹಂಚಿಕೆ ಮಾಡಿಕೊಂಡು ಪ್ರಥಮ ಅವಧಿಗೆ ಪತ್ರಕರ್ತರ ಸಂಘದ ನೂತನ ಅಧ್ಯಕ್ಷ ಶಿವರಾಜ ಕೆಂಭಾವಿ, ಪ್ರಧಾನ ಕಾರ್ಯದರ್ಶಿ ಗಂಗಾಧರ ನಾಯಕ ಸೇರಿ ಪದಾಧಿಕಾರಿಗಳ ಪದಗ್ರಹಣ ಹಾಗೂ ಅಧಿಕಾರ ಹಸ್ತಾಂತರ ಸಮಾರಂಭದಲ್ಲಿ ಮಾತನಾಡಿದ ಅವರು ವರದಿಗಾರರು ಸುದ್ದಿ ಕೊಡುವ ಧಾವಂತದಲ್ಲಿ ಯಾರದ್ದೋ ಪ್ರಚೋದನೆಗೆ ಒಳಗಾಗಬಾರದು. ಸುದ್ದಿಯ ಆಳಕ್ಕಿಳಿದು ವರದಿ ವಿಶ್ಲೇಷಣೆ ಮಾಡಬೇಕು. ಸಂಘಕ್ಕೆ ನೂತವಾಗಿ ಆಯ್ಕೆಯಾಗಿರುವ ಅಧ್ಯಕ್ಷ ಪ್ರಧಾನ ಕಾರ್ಯದರ್ಶಿಗಳು ಪದಾಧಿಕಾರಿಗಳ ಜೊತೆಗೆ ಹಿರಿಯ ಪತ್ರಕರ್ತರ ಸಲಹೆ, ಸೂಚನೆಗೂ ಆದ್ಯತೆ ನೀಡಬೇಕು. ಭವನದ ನಿರ್ವಹಣೆ, ಪತ್ರಕರ್ತರ ಶ್ರೇಯೋಭಿವೃದ್ಧಿಗೆ ಶ್ರಮಿಸುವ ಮೂಲಕ ಜಿಲ್ಲೆ ಹಾಗೂ ರಾಜ್ಯಕ್ಕೆ ಮಾದರಿಯಾಗಬೇಕು. ಎಂದು ಕರೆಕೊಟ್ಟರು. ಪತ್ರಕರ್ತನಾದವನಿಗೆ ಪ್ರಾಮಾಣಿಕತೆ, ವಿನಯ, ತಾಳ್ಮೆಗಳೇ ಬಂಡವಾಳವಾಗಿರಬೇಕು ಎಂದು ಹಿರಿಯ ಪತ್ರಕರ್ತ ಗುರುರಾಜ ಮುತಾಲಿಕ್ ಕಿವಿಮಾತು ಹೇಳಿದರು ಜಿಲ್ಲಾ ಕಾರ್ಯದರ್ಶಿ ರಾಘವೇಂದ್ರ ಗುಮಾಸ್ತೆ



ನೂತನ ಪದಾಧಿಕಾರಿಗಳಿಗೆ ಪ್ರಮಾಣ ವಚನ ವಾಚಿಸಿದರು. ನೂತನವಾಗಿ ನೇಮಕಗೊಂಡಿರುವ ಪದಾಧಿಕಾರಿಗಳಿಗೆ ಹಿರಿಯ ಪತ್ರಕರ್ತರಾದ ಎನ್.ಬಸವರಾಜ, ಮಹ್ಮದ್ ಖಾಜಾಹುಸೇನ್, ಶರಣಪ್ಪ ಆನೆಹೊಸೂರು, ಶರಣಯ್ಯ ಒಡೆ–ಯರ್ ಶುಭ ಕೋರಿದರು.

ನಿಕಟಪೂರ್ವ ಅಧ್ಯಕ್ಷ ಗುರುರಾಜ ಗೌಡೂರು ಮಾತನಾಡಿ, ಕಳೆದ ಮೂರು ವರ್ಷಗಳ ಅವಧಿಯಲ್ಲಿ ಪ್ರಾಮಾಣಿಕತೆಯಿಂದ ಸಂಘವನ್ನು ನಡೆಸಿಕೊಂಡು ಬಂದಿದ್ದೇವೆ. ಸಂಘದ ಭವನದಲ್ಲಿರುವ 70ಕ್ಕೂ ಹೆಚ್ಚು ವಸ್ತಗಳನ್ನು ಪಟ್ಟಿ ಮಾಡಿ ನೂತನ ಅಧ್ಯಕ್ಷ–ಪ್ರಧಾನ ಕಾರ್ಯದರ್ಶಿಗಳಿಗೆ ಹಸ್ತಾಂತರ ಮಾಡಲಾಗಿದೆ. ಮುಂದಿನ 18 ತಿಂಗಳ ಅವಧಿಯಲ್ಲಿ ಪತ್ರಕರ್ತರ ಶ್ರೇಯೋಭಿವೃದ್ಧಿಗೆ ಸಂಘದ ಒಳಿತಿಗೆ ಪದಾಧಿಕಾರಿಗಳು ಶ್ರಮಿಸಲಿ. ರಾಯಚೂರು ಜಿಲ್ಲೆಯಲ್ಲಿಯೇ ಅತಿ ಸೂಕ್ಷ್ಮ ಕೇಂದ್ರ ಎಂದು ಇಡೀ ಜಿಲ್ಲೆಯ ಗಮನ ಸೆಳೆದಿದ್ದ ಲಿಂಗಸುಗೂರಲ್ಲಿ ಪತ್ರಕರ್ತರ ಒಗ್ಗಟ್ಟು ಅಧಿಕಾರ ಹಂಚಿಕೆಯಿಂದ ಸುಖಾಂತ್ಯಗೊಂಡ ಚುನಾವಣೆ ಪ್ರಕ್ರಿಯೆ ಜಿಲ್ಲೆಗೆ ಮಾದರಿಯಾಗಿದೆ. ಹಿಗೇಯೇ ಪತ್ರಕರ್ತರು ಒಗ್ಗಟ್ಟಾಗಿ ಇರಬೇಕೆಂದು ಕೋರಿದರು. ಬಳಿಕ ನೂತನ ಬಾಡಿಯ ಪ್ರಥಮ ಸಾಮಾನ್ಯ ಸಭೆ ಜರುಗಿತು. ಲಿಂಗಸುಗೂರು, ಹಟ್ಟಿ, ಮುದಗಲ್ ಪತ್ರಕರ್ತರು ಸಭೆಯಲ್ಲಿ ಪಾಲ್ಗೊಂಡಿದ್ದರು.

## ಕುರಿ ಕಳ್ಳತನ ಮಾಡುವ ಜಾಲ ಪತ್ತೆ

ಮಲ್ಲಮ್ಮ ನುಡಿ ವಾರ್ತೆ



ಯಲಬುರ್ಗಾ: ತಾಲೂಕಿನ ತುಮ್ಮರಗುದ್ದಿಯಲ್ಲಿ ಡಿ. 17ರಂದು ಮಧ್ಯರಾತ್ರಿ ಒಂದು ಗಂಟೆಗೆ ಕುರಿ ಕಳ್ಳತನ ಮಾಡಲು ಕಳ್ಳರು ಗ್ರಾಮದ ಹೊರ ವಲಯದಲ್ಲಿ ಕುರಿ ಹಟ್ಟಿಯನ್ನು ಹಾಕಿಕೊಂಡು ಅಲ್ಲಿಯೇ ಮಲಗಿದ್ದರು, ಕಳ್ಳರು ಕುರಿಗಳ ಬಾಯಿ ಮುಚ್ಚಿ, ಕೈ ಕಾಲುಗಳನ್ನು ಕಟ್ಟುವ ಪ್ರಯತ್ನದಲ್ಲಿದ್ದಾಗ ಕುರಿಗಾರರ ನಾಯಿಗಳು ಒದರಿದಾಗ ಎಚ್ಚರಕೊಂಡ ಕುರಿಗಾರರು ಕಳ್ಳರ ಹಿಂದೆ ಬೆನ್ನತ್ತಿದಾಗ ಅವರು ಚಾಕು ಚೂರಿ ತೋರಿಸಿ ಓಡಿ ಹೋಗಿ ಪರಾರಿಯಾಗಿರುವ ಘಟನೆ ಜರುಗಿದೆ, ಆಗ ಕುರಿಗಾರರು 112 ನಂಬರ್ ಗೆ ಫೋನ್ ಮಾಡಿದಾಗ ಪೊಲೀಸ್ ಅಧಿಕಾರಿಗಳು ತಕ್ಷಣ ಬಂದು ಮಹಜರು ಮಾಡಿದ ನಂತರ ಬೋಲೋರ್ ಗಾಡಿ ವಾಹನ ಸಂ–ಖ್ಯೆ ಕೆ.ಎ.32 ಂಂ1309 ಇ ವಾಹನ ಬಿಟ್ಟು ಇದರಲ್ಲಿ ಮೊಬೈಲ್ ಸಹ ಬಿಟ್ಟು ಹೊಗಿರುವಾಗ, ಇದುವರೆಗೆ ಕಳ್ಳರನ್ನು ಹಿಡಿದಿರುವುದಿಲ್ಲ ಎಂದು ಶ್ರೀ ಬೀರಲಿಂಗೇಶ್ವರ ಕುರಿ ಮತ್ತು ಉಣ್ಣೆ ಉತ್ಪಾದಕರ ಸಂಘದವರು, ಹಾಗು ಕರವೇ ಸಂಘಟನೆ, ಹಾಗೂ ರೈತ ಸಂಘಟನೆ ಹಾಗೂ ವಿವಿಧ ಸಂಘಟನೆಯ ಪದಾಧಿಕಾರಿಗಳು ಸೇರಿಕೊಂಡು ಶ್ರೀ ಭಕ್ತಕನಕದಾಸ ವೃತ್ತದಿಂದ, ರಾಣಿ ಕಿತ್ತೂರ ಚನ್ನಮ್ಮ ವೃತ್ತದವರೆಗೆ ಪ್ರತಿಭಟನೆ ಜರುಗಿ ತಹಶೀಲ್ದಾರ, ಸಿ.ಪಿ.ಐ ಇವರಿಗೆ ಮನವಿ ಸಲ್ಲಿಸಿದರು. ಮನವಿಯಲ್ಲಿ ಕುರಿಗಾರರಿಗೆ ರಕ್ಷಣೆಗಾಗಿ ಬಂದುಕು ತರಬೇತಿ ನೀಡಿ, ಅವರಿಗೆ ಪರವಾಣಿಗೆ ನಿಡಬೇಕು, ಕುರಿ, ಕಳ್ಳತನ ಮಾಡುವ ಕಳ್ಳರನ್ನು ಬಂಧಿಸಬೇಕು, ಕುರಿ ಕಳೆದು ಕೊಂಡವರಿಗೆ ಪರಿಹಾರ ನೀಡಿ ನ್ಯಾಯ ವದಗಿಸಿ ಕೊಡಬೇಕು ಎಂದು ಪ್ರತಿಭಟನೆಯಲ್ಲಿ ತಿಳಿಸಿದರು. ಈ ವೇಳೆ ಶ್ರೀ ಬೀರಲಿಂಗೇಶ್ವರ ಕುರಿ ಮತ್ತು ಉಣ್ಣೆ ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಬಸವರಾಜ ಭಜಂತ್ರಿ, ಉಪಾಧ್ಯಕ್ಷ ಶಿವಪ್ಪ ದಂಡಿನ, ಕಾರ್ಯದರ್ಶಿ ದ್ಯಾಮಣ್ಣ ಪರಂಗಿ, ಹಾಗೂ ಕರ್ನಾಟಕ ರಕ್ಷಣ ವೇದಿಕೆ ತಾಲೂಕ ಅದ್ಯಕ್ಷ ರಾಜಶೇಖರ ಶ್ಯಾಗೋಟಿ, ಕರ್ನಾಟಕ ರಾಜ್ಯ ರೈತ ಸಂಘ ಹಾಗು ಹಸಿರು ಸೇನೆ (ವಾಸುದೇವ ಮೇಟಿ ಬಣ) ಸಂಘದ ಅಧ್ಯಕ್ಷ ಶರಣಬಸಪ್ಪ ದಾನಕೈ, ಮುಖಂಡರಾದ ಶೇಖರ ಗುರಾಣಿ, ಬಸವರಾಜ ಗುಳಗುಳಿ, ದೊಡ್ಡಯ್ಯ ಗುರುವಿನ, ಶಿವು ರಾಜೂರ ದೇವಪ್ಪ ಬನಪ್ಪನವರ, ದೇವಪ್ಪ ಪರಂಗಿ, ರೇವಣಪ್ಪ ಹಿರೇಕುರಬರ, ನೀಲನಗೌಡ ತಳವಗೇರಿ ಸೇರಿದಂತೆ ಇತರರು ಇದ್ದರು .

## ಪಿಎಸ್‌ಐ ಬಸಲಿಂಗಪ್ಪ ಜನ್ಮದಿನ ಆಚರಣೆ



ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ: ಪಟ್ಟಣದ ಪೊಲೀಸ್ ಠಾಣೆಯ ಆರಕ್ಷಕ ಉಪ ನಿರೀಕ್ಷಕರಾದ ಬಸಲಿಂಗಪ್ಪ ಎಂ. ಗೋಧಿಹಾಳ ರವರ ಜನ್ಮದಿನ ಪ್ರಯುಕ್ತ ಯುವ ಉದ್ಯಮಿ ನರಸಪ್ಪ ಎಂ. ನರನಾಳ, ರಾಜಕುಮಾರ ಆರ್. ಹಡಪದ ಜನ್ಮ ದಿನದ ಶುಭಾಶಯ ಕೋರುತ್ತಾ ಮಾತನಾಡಿದ ಅವರು, ದೇವರು ಅವರಿಗೆ ಸುಖ, ಶಾಂತಿ, ನೆಮ್ಮದಿ, ಆಯುಷ್ಯ, ಆರೋಗ್ಯ, ಸೇರಿದಂತೆ ಉನ್ನತ ಸ್ಥಾನಗಳು ದೊರಕಿ ಬರಲೆಂದು ಶುಭ ಕೋರಿದರು. ಈ ಸಂದರ್ಭದಲ್ಲಿ ಕೋಡಂಬಲ್ ಗ್ರಾಮ ಪಂಚಾಯತ್ ಉಪಾಧ್ಯಕ್ಷ ವಿಷ್ಣುವರ್ಧನ್ ಬುದ್ಧ, ಸಾಮಾಜಿಕ ಕಾರ್ಯಕರ್ತ ಭೀಮರೆಡ್ಡಿ ಸಿಂಧನಕೇರಾ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಗೋಡೆಗಳ ಮೇಲೆ ಚಿತ್ರಕಲಾ ಸ್ಪರ್ಧೆ ಫಲಿತಾಂಶ

ಮಲ್ಲಮ್ಮ ನುಡಿ ವಾರ್ತೆ ಕಾರವಾರ :ಕರಾವಳಿ ಉತ್ಸವ–2025 ರ ಪ್ರಯುಕ್ತ ಗೋಡೆಗಳ ಮೇಲೆ ಚಿತ್ರಕಲಾ ಸ್ಪರ್ಧೆಯನ್ನು ಡಿಸೇಂಬರ್ 20 ರಂದು ನಡೆಸಲಾಗಿದ್ದು, ಚಿತ್ರಕಲೆ ಸ್ಪರ್ಧೆಯಲ್ಲಿ 97 ಸ್ಪರ್ಧಾಳುಗಳು ಭಾಗವಹಿಸಿ, 41 ಚಿತ್ರಕಲೆಗಳನ್ನು ಪೂರ್ಯೆಸಿರುತ್ತಾರೆ. ಸ್ಪರ್ಧೆಯಲ್ಲಿ ವಿಷ್ಣುಎಮ್. ಗೌಡಾ (ಪ್ರಥಮ) ಮಂಗೇಶ ಅಗೇರ (ದ್ವಿತೀಯ) ನವೀನ ದಿವಾಕರ ಶೆಡಗೇರಿ (ತೃತೀಯ) ಸ್ಥಾನ ಪಡೆದಿದ್ದಾರೆ ಎಂದು ಅಧ್ಯಕ್ಷರು, ಗೋಡೆಗಳ ಚಿತ್ರೀಕರಣ ಸಮಿತಿ, ಕರಾವಳಿ ಉತ್ಸವ 2025 ಹಾಗೂ ಯೋಜನಾ ನಿರ್ದೇಶಕರು, ಡಿಯುಡಿಸಿ ಉತ್ತರಕನ್ನಡ ಕಾರವಾರ ತಿಳಿಸಿದ್ದಾರೆ.

## ಅಕ್ರಮ ದಂಧೆಗಳಿಗೆ ಕಡಿವಾಣ ಹಾಕಬೇಕು ಎಂದು ಒತ್ತಾಯಿಸಿ ಬಿಜೆಪಿ ಪ್ರತಿಭಟನೆ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ: ರಾಜ್ಯ ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿರುವ ದ್ವೇಷ ಭಾಷಣ ಕಾಯ್ದೆಗೆ ವಿರೋಧ ಹಾಗೂ ನಗರ ಸೇರಿದಂತೆ ಜಿಲ್ಲೆಯಾದ್ಯಂತ ನಡೆಯುತ್ತಿರುವ ಅಕ್ರಮ ದಂಧೆಗಳಿಗೆ ಕೂಡಲೇ ಕಡಿವಾಣ ಹಾಕಬೇಕು ಎಂದು ಒತ್ತಾಯಿಸಿ ಇಲ್ಲಿನ ಬಿಜೆಪಿ ಜಿಲ್ಲಾ ಸಮಿತಿ ಪದಾಧಿಕಾರಿಗಳು, ಕಾರ್ಯಕರ್ತರು ಸೋಮವಾರ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಸಿದರು. ನಗರದ ಹೃದಯಭಾಗ ರಾಯಲ್ ವೃತ್ತದಲ್ಲಿ ಜಮಾಯಿಸಿದ ನೂರಾರು ಕಾರ್ಯಕರ್ತರು ರಾಜ್ಯ ಸರ್ಕಾರದ ವಿರುದ್ಧ ನಾನಾ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ನಂತರ ಜಿಲ್ಲಾಧಿಕಾರಿ ಕಚೇರಿಗೆ ತೆರಳಿ ನಾನಾ ಬೇಡಿಕೆಗಳ ಮನವಿ ಪತ್ರ ಸಲ್ಲಿಸಿದರು. ಬಿಜೆಪಿ ಜಿಲ್ಲಾಧ್ಯಕ್ಷ ಅನಿಲ್ ಕುಮಾರ್ ಮೊಕ ಅವರು ಮಾತನಾಡಿ, ದ್ವೇಷ ಭಾಷಣ ಕಾಯ್ದೆ ಜಾರಿಗೊಳಿಸಲು ಮುಂದಾದ ರಾಜ್ಯ ಕಾಂಗ್ರೆಸ್ ಸರ್ಕಾರದ ಕ್ರಮ ಅತ್ಯಂತ ಖಂಡನೀಯ, ಹಿಂದೂ ವಿರೋಧಿ ಕಾಂಗ್ರೆಸ್ ಸರ್ಕಾರಕ್ಕೆ ರಾಜ್ಯದ ಜನರೇ ಬರುವ ದಿನಗಳಲ್ಲಿ ತಕ್ಕ ಪಾಠ ಕಲಿಸಲಿದ್ದಾರೆ ಎಂದು ವಾಗ್ದಾಳಿ ನಡೆಸಿದರು. ನಗರದಲ್ಲಿ ಹಾಗೂ ಜಿಲ್ಲೆಯಾದ್ಯಂತ ಅಕ್ರಮ ದಂಧೆಗಳು ಎಗ್ಗಿಲ್ಲದೆ ನಡೆಯುತ್ತಿದ್ದು, ಹೇಳೋರು ಕೇಳೋರು ಯಾರು ಇಲ್ಲದಂತಾಗಿದೆ. ಇಸ್ಪೀಟ್, ಜೂಜು, ಮಟಕಾ, ಗಾಂಜಾ ಮಾರಾಟ, ಅನ್ನಭಾಗ್ಯ ಅಕ್ಕಿ ಕಳ್ಳ ಸಾಗಣೆ ಸೇರಿದಂತೆ ಅನೇಕ ಅಕ್ರಮ





ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಸ್ತಿತ್ವಕ್ಕೆ ಬಂದ ಬಳಿಕ ಅಕ್ರಮ ದಂಧೆಗಳು ಸಾಮಾನ್ಯವಾಗಿವೆ. ಬಳ್ಳಾರಿಯಲ್ಲಿ ಜೂಜು, ಇಸ್ಪೀಟ್, ಮಟಕಾ, ಅಕ್ಕಿ ದಂಧೆ ಸೇರಿ ಅಕ್ರಮ ಚಟುವಟಿಕೆಗಳು ಸಾಮಾನ್ಯವಾಗಿವೆ. ಅಧಿಕಾರಿಗಳ ಗಮನಕ್ಕಿದ್ದರು ಮೌನವಾಗಿದ್ದಾರೆ.

**ಶ್ರೀನಿವಾಸ್ ಮೊತ್ಕರ್**
**ಮಹಾನಗರ ಪಾಲಿಕೆ ವಿರೋಧ ಪಕ್ಷದ ನಾಯಕರು ಬಳ್ಳಾರಿ.**

ದಂಧೆಗಳು ಬಳ್ಳಾರಿಯಲ್ಲಿ ಸಾಮಾನ್ಯವಾಗಿವೆ, ಕೂಡಲೇ ಇದಕ್ಕೆ ಕಡಿವಾಣ ಹಾಕಬೇಕು, ನಿರ್ಲಕ್ಷ್ಯವಹಿಸಿದರೆ ಪ್ರತಿಭಟನೆಯ ಸ್ವರೂಪ ಬದಲಾಗಲಿದೆ ಎಂದು ಎಚ್ಚರಿಸಿದರು. ಸಫಾಯಿಕರ್ಮಚಾರಿಗಳ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಎಚ್ ಹನುಮಂತಪ್ಪ ಅವರು ಮಾತನಾಡಿ, ಬಳ್ಳಾರಿಯಲ್ಲಿ ಅಕ್ರಮ ದಂಧೆಗಳು ಎಗ್ಗಿಲ್ಲದೆ ನಡೆಯುತ್ತಿದ್ದು, ಕೂಡಲೇ ಇದ–ಕ್ಕೆ ಕಡಿವಾಣ ಹಾಕಬೇಕು, ಡಿಸಿ ಹಾಗೂ ಎಸ್ಪಿ ಅವರು ಪಾಲಿಕೆ ಎಲ್ಲ ಸದಸ್ಯರು, ಸಂಘಟನೆ ಪದಾಧಿಕಾರಿಗಳು, ಪಕ್ಷದ ಪದಾಧಿಕಾರಿಗಳೊಂದಿಗೆ ಸಭೆ ಆಯೋಜಿಸಿ ಚರ್ಚಿಸಬೇಕು, ದಿನಾಂಕ ನಿಗದಿಪಡಿಸಿ ಎಂದು ಒತ್ತಾಯಿಸಿದರು. ಪಾಲಿಕೆ ಲೆಕ್ಕಪತ್ರ ಸ್ಥಾಯಿ ಸಮಿತಿ ಅಧ್ಯಕ್ಷ ಹನುಮಂತಪ್ಪ.ಕೆ.ಅವರು ಮಾತನಾಡಿ, ಬಳ್ಳಾರಿಯಲ್ಲಿ ಹಾಡಹಗಲೇ ಸರ್ಕಾರದ ಗೋದಾಮುಗಳಲ್ಲಿ ಸಂಗ್ರಹಿಸಿದ ಅಕ್ಕಿಯನ್ನು ಸಾಗಣೆ ಮಾಡುತ್ತಿದ್ದು, ಈ ಕುರಿತು ಅಧಿಕಾರಿಗಳ ಗಮನಸೆಳೆದರು ಇಲ್ಲಿವರೆಗೂ ಕ್ರಮವಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಸಿರುಗುಪ್ಪ ಕ್ಷೇತ್ರದ ಧರಪ್ಪ ನಾಯಕ್, ಬುಡಾ ಮಾಜಿ ಅಧ್ಯಕ್ಷ ಮಾರುತಿ ಪ್ರಸಾದ್, ಪಾಲಿಕೆ ಸದಸ್ಯರಾದ ಶ್ರೀನಿವಾಸ್ ಮೊತ್ಕರ್, ಚೇತನ ವೇಮಣ್ಣ, ಮುಖಂಡರಾದ ರಾಮಚಂದ್ರಪ್ಪ, ಸಿದ್ದೇಶ್ ಉಳೂರು, ಸೋಮಶೇಖರ್ ಸೇರಿದಂತೆ ಇತರರಿದ್ದರು.

## ಮಹಿಳೆ ಕಾಣೆ: ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ :



ಯಲಬುರ್ಗಾ ತಾಲೂಕಿನ ತುಮ್ಮರಗುದ್ದಿ ಗ್ರಾಮದ ಅಂದಮ್ಮ ಗಂಡ ಕೆರೆಬಸಪ್ಪ ಕಳಸಣ್ಣನವರ ಅವರ ಮಗಳಾದ 30 ವರ್ಷದ ನೇತ್ರಾವತಿ ಗಂಡ ಹನಮಂತಪ್ಪ ಕಿನ್ನಾಳ ಎಂಬ ಮಹಿಳೆ 2025ರ ಎಪ್ರಿಲ್ 21ರ ಬೆಳಿಗ್ಗೆ 5ಗಂಟೆಗೆ ಗಂಡನ ಊರಾದ ಕೋಮಲಾಪೂರದ ಮನೆಯಿಂದ ಮನೆ ಕೆಲಸಕ್ಕೆ ಹೋಗಿ ಬರುವುದಾಗಿ ಹೇಳಿ ಹೋಗಿ ಕಾಣೆಯಾಗಿದ್ದು, ಈವರೆಗೂ ಪತ್ತೆಯಾಗಿರುವುದಿಲ್ಲ. ಈ ಬಗ್ಗೆ ಕುಕನೂರು ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ:68/2025, ಕಲಂ ಮಹಿಳೆ ಕಾಣೆ ರೀತ್ಯ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿರುತ್ತದೆ. ಕಾಣೆಯಾದ ವ್ಯಕ್ತಿಯ ಚಹರೆ: ಕಾಣೆಯಾದ ಮಹಿಳೆಯು ಕೋಲು ಮುಖ, ಸಾದಗಪ್ಪು ಮೈ ಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು. ಕನ್ನಡ, ಭಾಷೆ ಮಾತನಾಡುತ್ತಾರೆ. ಮೇಲ್ಕಂಡ ಚಹರೆಯ ಮಹಿಳೆಯ ಬಗ್ಗೆ ಯಾರಿಗಾದರೂ ಮಾಹಿತಿ ಇದ್ದಲ್ಲಿ ಅಥವಾ ದೊರೆತಲ್ಲಿ ಕುಕನೂರು ಪೊಲೀಸ್ ಠಾಣೆ ಮೊ.ಸಂ: 9480803750, ಅಥವಾ ದೂ. ಸಂ:08534–230333 ಹಾಗೂ ಕೊಪ್ಪಳ ಎಸ್‌ಪಿ ಕಚೇರಿ ಸಂಖ್ಯೆ: 08539–230111 ಗೆ ಸಂಪರ್ಕಿಸಿ ಮಾಹಿತಿ ನೀಡಬೇಕು ಎಂದು ಕುಕನೂರು ಪೊಲೀಸ್ ಠಾಣೆಯು ಪ್ರಕಟಣೆಯಲ್ಲಿ ತಿಳಿಸಿದೆ.

## ಬಿ.ಎಡ್ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹ ಧನಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:

2025–26ನೇ ಸಾಲಿನ ಬಿ.ಎಡ್ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹ ಧನ ನೀಡಲು ಸೇವಾಸಿಂಧು ಪೋರ್ಟಲ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಅವರು ತಿಳಿಸಿದ್ದಾರೆ.

ಬಿ.ಎಡ್ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹ ಧನ ನೀಡಲು ಸೇವಾಸಿಂಧು ಪೋರ್ಟಲ್‌ನಲ್ಲಿ ಅರ್ಜಿ ಆಹ್ವಾನಿಸಿದೆ. ಈ ಕೆಳಕಂಡ ಅರ್ಹತೆ ಹೊಂದಿರುವವರು ಅರ್ಜಿಗಳನ್ನು ಭರ್ತಿಮಾಡಿ ಅಗತ್ಯ ದಾಖಲಾತಿಗಳೊಂದಿಗೆ ಜಿಲ್ಲಾ ಅಧಿಕಾರಿಗಳು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಯಾದಗಿರಿ ಇಲ್ಲಿಗೆ ಸಲ್ಲಿಸಬೇಕು.

ಷರತ್ತುಗಳು, ಅರ್ಹತೆ ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲೂಡಿ 279 ಎಂಡಿಎಸ್ 2018, ದಿನಾಂಕ 15.10.2018 ರಲ್ಲಿ ನೀಡಲಾಗಿರುವ ಮಾರ್ಗಸೂಚಿಯನ್ವಯ ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಬೇಕು. ಸರ್ಕಾರದ ಆದೇಶ ಸಂಖ್ಯೆ ಎಂಡಬ್ಲೂಡಿ 279 ಎಂಡಿಎಸ್ 2018, ದಿನಾಂಕ 15.10.2018ರ ಮಾರ್ಗಸೂಚಿಯಂತೆ ಗ್ರಾಮೀಣ ಮತ್ತು ನಗರ ವಿಭಾಗದಲ್ಲಿ ಆರ್ಥಿಕವಾಗಿ ಹಿಂದುಳಿದ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸವನ್ನು ಪ್ರೋತ್ಸಾಹಿಸಿ ಕಲಿಕಾ ಮತ್ತು ಭೋಧನಾ ಸಾಮಗ್ರಿಗಳನ್ನು ಖರೀದಿಸಲು ಆರ್ಥಿಕ ಸಹಾಯ ಮಾಡುವ ಹಿತ ದೃಷ್ಟಿಯಿಂದ National Council for Teacher Education ನಿಂದ ಮಾನ್ಯತೆ ಪಡೆದಿರುವ ಕೋರ್ಸ್ಗಳ ಸರ್ಕಾರಿ, ಅರೆ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಕಾಲೇಜುಗಳಲ್ಲಿ ಬಿ.ಎಡ್ ಕೋರ್ಸ್ಗಳಲ್ಲಿ ದಾಖಲಾತಿ ಹೊಂದಿ ವ್ಯಾಸಂಗ ಮಾಡುತ್ತಿರಬೇಕು.

ವಿದ್ಯಾರ್ಥಿಯು ಅಲ್ಪಸಂಖ್ಯಾತರ (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ, ಪಾರ್ಸಿ) ಸಮುದಾಯಕ್ಕೆ ಸೇರಿರಬೇಕು. ಅಭ್ಯರ್ಥಿಗಳು ಕರ್ನಾಟಕ ರಾಜ್ಯಕ್ಕೆ ಸೇರಿದವರಾಗಿರಬೇಕು. ಸದರಿ ಕೋಸ್‌ಗಳ ಅವಧಿಗೆ ತಕ್ಕಂತೆ ಪ್ರತಿ ವರ್ಷ 25,000 ರೂ.ಗಳ ದಂತೆ (ಗರಿಷ್ಠ 2 ವರ್ಷ) ಅನುದಾನವನ್ನು ನೀಡಲಾಗುವುದು. ಅಲ್ಪಸಂಖ್ಯಾತರ ಅಭ್ಯರ್ಥಿಗಳ ಪೋಷಕರ ವಾರ್ಷಿಕ ಗರಿಷ್ಠ ವರಮಾನ 6 ಲಕ್ಷ ರೂ. ಗಳ ಒಳಗಿರಬೇಕು.

ಅಭ್ಯರ್ಥಿಗಳನ್ನು ಅರ್ಹತೆ ಪರೀಕ್ಷೆ, ಹಿಂದಿನ ಸಾಲಿನ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ವಿದ್ಯಾರ್ಥಿಗಳು ಬಿ.ಎಡ್ ಕೋರ್ಸ್ಗಳಲ್ಲಿ ದಾಖಲಾಗಿರುವ ಹಾಗೂ ಶುಲ್ಕವನ್ನು ಭರಿಸಿರುವ ಬಗ್ಗೆ ಎಲ್ಲಾ ಅಧಿಕೃತ ದಾಖಲಾತಿಗಳನ್ನು ಸಲ್ಲಿಸಬೇಕು.

National Council for Teacher Education ನಿಂದ ಮಾನ್ಯತೆ ಪಡೆದಿರುವ ಸರ್ಕಾರಿ, ಅರೆ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಕಾಲೇಜುಗಳಲ್ಲಿ ಬಿ.ಎಡ್ ಕೋರ್ಸ್ಗಳಲ್ಲಿ ದಾಖಲಾತಿ ಹೊಂದಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಮಾತ್ರ ಅರ್ಹರಿರುತ್ತಾರೆ. ಸದರಿ ಕಾರ್ಯಕ್ರಮದಡಿ ಅರ್ಜಿಸಲ್ಲಿಸುವ ವಿದ್ಯಾರ್ಥಿಗಳು ಅರ್ಹತೆ ಪರೀಕ್ಷೆ, ಹಿಂದಿನ ಸಾಲಿನ ಪರೀಕ್ಷೆಯಲ್ಲಿ ಕನಿಷ್ಠ ಶೇ.50 ರಷ್ಟು ಅಂಕಗಳನ್ನು ಪಡೆದಿರಬೇಕು, ಉತ್ತೀರ್ಣರಾಗದ ಅಭ್ಯರ್ಥಿಗಳು ಪ್ರೋತ್ಸಾಹಧನ ಪಡೆಯಲು ಅರ್ಹರಾಗಿರುವುದಿಲ್ಲ. ಮೊದಲನೇ ವರ್ಷದಲ್ಲಿ ಪ್ರೋತ್ಸಾಹಧನ ಪಡೆದಿರುವ ಅಭ್ಯರ್ಥಿಗಳು ಎರಡನೇ ವರ್ಷಕ್ಕೆ ಪ್ರೋತ್ಸಾಹಧನ ಪಡೆಯಲು ಪ್ರತ್ಯೇಕ ಅರ್ಜಿಸಲ್ಲಿಸಬೇಕು.

ಪ್ರತಿ ಜಿಲ್ಲೆಗೆ ಬಿಡುಗಡೆ ಮಾಡಿರುವ ಅನುದಾನದಲ್ಲಿ ಕನಿಷ್ಠ ಶೇ.50 ರಷ್ಟು ಬಾಲಕಿಯರಿಗೆ ಮೀಸಲಿರಿಸಿದೆ. ಸುಳ್ಳು ಮಾಹಿತಿ, ದಾಖಲಾತಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ ನೀಡಿ ಪ್ರೋತ್ಸಾಹಧನ ಪಡೆದಿದ್ದಲ್ಲಿ ಅಂತಹ ಅಭ್ಯರ್ಥಿಗಳಿಗೆ ನೀಡಲಾದ ಪ್ರೋತ್ಸಾಹಧನ ಮೊತ್ತವನ್ನು ವಸೂಲಿ ಮಾಡಿ ಸರ್ಕಾರಕ್ಕೆ ಹಿಂದಿರುಗಿಸಲಾಗುವುದು, ಎಲ್ಲಾ ಅರ್ಜಿಗಳನ್ನು ಕಡ್ಡಾಯವಾಗಿ ಸೇವಾಸಿಂಧು ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಸಲ್ಲಿಸಬೇಕು. ವಿದ್ಯಾರ್ಥಿಯು ತನ್ನ ಬ್ಯಾಂಕ್ ಖಾತೆಯ ಜೊತೆ ಆಧಾರ್ ಸೀಡಿಂಗ್ (ಖಜಜಜಬಟಿರ) ಮಾಡುವುದು ಕಡ್ಡಾಯವಾಗಿರುತ್ತದೆ.

ವಿದ್ಯಾರ್ಥಿಯು ತನ್ನ ಬ್ಯಾಂಕ್ ಖಾತೆಗೆ Account Limit ಸೆಟ್ ಮಾಡಿಕೊಂಡಿದ್ದರೆ, Account Limit ವಿಸ್ತರಿಸಿಕೊಳ್ಳುವುದು ಅಥವಾ ಅದನ್ನು ತೆರೆವು ಮಾಡಿಕೊಳ್ಳುವುದು. ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ನೇರವಾಗಿ ಹಣ ಸಂದಾಯ ಯೋಜನೆ ಡಿಬಿಟಿ ಮುಖಾಂತರ ಹಣ ವರ್ಗವಣೆ ಮಾಡಲಾಗುವುದು. ವಿಶೇಷ ಪ್ರೋತ್ಸಾಹಧನಕ್ಕಾಗಿ ವಿದ್ಯಾರ್ಥಿಗಳು ಅರ್ಜಿಸಲ್ಲಿಸಲು ಅರ್ಹತೆ, ವಿಧಾನ ಹಾಗೂ ಇನ್ನಿತರ ಸೂಚನೆಗಳ ಮಾಹಿತಿಗಾಗಿ ಇಲಾಖೆಯ ವೆಬ್‌ಸೈಟ್ www.dom.karnataka.gov.in ನಲ್ಲಿ ಪಡೆದುಕೊಳ್ಳಬೇಕು. ಅರ್ಜಿಗಳನ್ನು ಕಡ್ಡಾಯವಾಗಿ ಸೇವಾಸಿಂಧು ಆನ್‌ಲೈನ್ sevasindhu.karnataka.gov.in ನಲ್ಲಿ 2025ರ ಡಿಸೆಂಬರ್ 31ರ ಒಳಗೆ ಅರ್ಜಿಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾಡಳಿತ ಭವನ, ಮಿನಿ ವಿಧಾನಸೌಧ, ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಕೊಠಡಿ ಸಂಖ್ಯೆ ಸಿ–7, ಸಿ ಬ್ಲಾಕ್ ಮೊದಲನೇ ಮಹಡಿ, ಯಾದಗಿರಿ 585202, ದೂ.ಸಂ. 08473253235, ಇಲಾಖಾ ಸಹಾಯವಾಣಿ ಸಂ.8277799990ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪೋಲಿಯೊ ಹನಿ ಹಾಕುವುದರ ಮೂಲಕ ಅಭಿಯಾನಕ್ಕೆ ಪುರಸಭಾ ಅಧ್ಯಕ್ಷ ಶೇಖರ್ ಚಾಲನೆ



**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:** ಕುರುಗೋಡು ಪಟ್ಟಣದಲ್ಲಿ 8ನೇಯ ಅಂಗನವಾಡಿ ಕೇಂದ್ರ ಶಾಲೆಯಲ್ಲಿ ಹಾಗೂ ಜಿಲ್ಲಾ ಆಸ್ಪತ್ರೆಯಲ್ಲಿ ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ ಭಾಗಿಯಾದ ಪುರಸಭೆ ಅಧ್ಯಕ್ಷ ಶೇಖರ್, ವಾರ್ಡ್ ಸದಸ್ಯೆ ಮಕ್ಕಳಿಗೆ ಪೋಲಿಯೋ ಹನಿ ಹಾಕುವುದರ ಮೂಲಕ ಪೋಲಿಯೋ ದಿನಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಅಂಗನವಾಡಿ ಕೇಂದ್ರದ ಶಿಕ್ಷಕಿ ಸಿ. ನೀಲಮ್ಮ ಹಾಗೂ ಜಿಲ್ಲಾ ಆಸ್ಪತ್ರೆಯ ಸಿಬ್ಬಂದಿ ಹಾಗೂ ಇನ್ನೂಮುಂತಾದವರು ಕಾರ್ಯಕ್ರಮದಲ್ಲಿ ಭಾಗಿಯಾಗಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ಪಂಚ ಗ್ಯಾರಂಟಿ ಯೋಜನೆಗಳ ಜಾರಿಯಿಂದ ರಾಜ್ಯದ ತಲಾದಾಯ ಹೆಚ್ಚಳ



**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:** ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದ ಸರ್ಕಾರ ಜಾರಿಗೊಳಿಸಿದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದಿಂದ ರಾಜ್ಯದ ತಲಾದಾಯ ಹೆಚ್ಚಳವಾಗಿದೆ ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಕೆ.ಇ ಚಿದಾನಂದಪ್ಪ ಅವರು ಹೇಳಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಸರ್ಕಾರದ ವಿವಿಧ ಯೋಜನೆಗಳು ಮತ್ತು ಪಂಚ ಗ್ಯಾರಂಟಿ ಯೋಜನೆಗಳ ಕುರಿತು ಅರಿವು ಮೂಡಿಸುವ ಜಾನಪದ ಸಂಗೀತ, ಬೀದಿ ನಾಟಕ ಕಾರ್ಯಕ್ರಮಕ್ಕೆ ಜಿಪಂ ಆವರಣದಲ್ಲಿ ಸೋಮವಾರ ಚಾಲನೆ ನೀಡಿ ಅವರು ಮಾತನಾಡಿದರು.

ಚುನಾವಣಾ ಪ್ರಣಾಳಿಕೆಯಲ್ಲಿ ಘೋಷಿಸಿದಂತೆ ನಮ್ಮ ರಾಜ್ಯ ಸರ್ಕಾರ, ಪಂಚ ಗ್ಯಾರಂಟಿ ಯೋಜನೆಗಳನ್ನು ಪ್ರಾಮಾಣಿಕವಾಗಿ ಅನುಷ್ಠಾನಗೊಳಿಸಿದೆ. ಇವು ಬಡ, ಶೋಷಿತ, ಹಿಂದುಳಿದ ವರ್ಗದ ಜನರ ಜೀವನ ಸುಧಾರಣೆಗೆ ಪೂರಕವಾಗಿವೆ. ರಾಜ್ಯದಲ್ಲಿ ಪಂಚ ಗ್ಯಾರಂಟಿ ಯೋಜನೆಗಳು ಜನರಲ್ಲಿ ಉತ್ತಮ ಪ್ರತಿಕ್ರಿಯೆ ಪಡೆದಿವೆ ಎಂದು ಅಭಿಮತ ವ್ಯಕ್ತಪಡಿಸಿದರು.

ಶಕ್ತಿ ಯೋಜನೆಯಿಂದ ಮಹಿಳಾ ಪ್ರಯಾಣಿಕರಿಗೆ ಶಕ್ತಿ ತುಂಬಲಾಗಿದೆ. ಅನ್ನಭಾಗ್ಯದಿಂದ ಹಸಿವು ನೀಗಿಸಲಾಗುತ್ತಿದೆ. ಗೃಹಜ್ಯೋತಿ ಮೂಲಕ ಕತ್ತಲೆ ಮನೆಗಳಿಗೆ ಬೆಳಕು ನೀಡಲಾಗಿದೆ. ಗೃಹಲಕ್ಷ್ಮಿಯಿಂದ ಮನೆ ಯಜಮಾನಿಯರಿಗೆ ಸ್ವಾವಲಂಬಿ ಜೀವನ ನಡೆಸಲು ಅನುಕೂಲವಾಗುತ್ತಿದೆ. ಅದೇ ರೀತಿಯಾಗಿ ಯುವನಿಧಿಯಿಂದ ನಿರುದ್ಯೋಗ ಯುವಕ-ಯುವತಿಯರಿಗೆ ಸಹಾಯಧನ ಒದಗಿಸಲಾಗುತ್ತಿದೆ ಎಂದರು. ಬಳ್ಳಾರಿ ಜಿಲ್ಲೆಯಲ್ಲೂ ಪಂಚ ಗ್ಯಾರಂಟಿ ಯೋಜನೆಗಳು ಶೇ.98ರಷ್ಟು ಅನುಷ್ಠಾನಗೊಳಿಸಿದ್ದು, ಶೇ.100 ಕ್ಕೆ ನೂರರಷ್ಟು ಪ್ರಗತಿ ಸಾಧಿಸಲಾಗುವುದು ಎಂದರಲ್ಲದೇ, ಜಿಲ್ಲೆಯಲ್ಲಿ ಯಾವುದೇ ಫಲಾನುಭವಿಗಳು ಗ್ಯಾರಂಟಿ ಯೋಜನೆಗಳಿಂದ ವಂಚಿತರಾಗಿದ್ದಲ್ಲಿ, ಆಯಾ ತಾಲ್ಲೂಕುಗಳ ಅಧ್ಯಕ್ಷರ ಕಚೇರಿಗೆ ಭೇಟಿ ನೀಡಿ, ಅರ್ಜಿ ಸಲ್ಲಿಸಿ ಸೌಲಭ್ಯ ಪಡೆದುಕೊಳ್ಳಬಹುದು. ಈ ನಿಟ್ಟಿನಲ್ಲಿ ಆಯ್ದ ತಾಲೂಕುಗಳಲ್ಲಿ ಪಂಚ ಗ್ಯಾರಂಟಿ ಯೋಜನೆಗಳು ಮತ್ತು ಸರ್ಕಾರದ ವಿವಿಧ ಯೋಜನೆಗಳ ಕುರಿತು ಅರಿವು ಮೂಡಿಸಲು ಬೀದಿ ನಾಟಕ, ಜಾನಪದ ಸಂಗೀತ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗಿದೆ ಎಂದು ತಿಳಿಸಿದರು. ಅಕ್ಷಯ ಕಲಾ ಟ್ರಸ್ಟ್‌ನ ಅಧ್ಯಕ್ಷ ಯರಗುಡಿ ಸುಂಕಪ್ಪ ಮತ್ತು ತಂಡದವರಿಂದ ಗ್ಯಾರಂಟಿ ಯೋಜನೆಗಳ ಕುರಿತ ಜಾನಪದ ಸಂಗೀತ ಪ್ರಸ್ತುತಪಡಿಸಿದರು. ಧಾತ್ರಿ ರಂಗ ಸಂಸ್ಥೆಯ ಅಧ್ಯಕ್ಷ ಸಿರಿಗೇರಿ ಮಂಜು ತಂಡದವರಿಂದ ಗ್ಯಾರಂಟಿ ಯೋಜನೆಗಳ ಕುರಿತ ಬೀದಿ ನಾಟಕ ಪ್ರದರ್ಶಿಸಿದರು.

ಈ ಸಂದರ್ಭದಲ್ಲಿ ಬಳ್ಳಾರಿ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಗೋನಾಳ್ ಎಂ.ನಾಗಭೂಷಣ ಗೌಡ, ಕುರುಗೋಡು ತಾಲ್ಲೂಕು ಅಧ್ಯಕ್ಷ ಜಿ.ಬಸವನಗೌಡ, ಸಂಡೂರು ತಾಲ್ಲೂಕು ಅಧ್ಯಕ್ಷ ನೂರುದ್ದೀನ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವಾರ್ತಾ ಸಹಾಯಕ ವಿ.ಸಿ.ಗುರುರಾಜ ಸೇರಿದಂತೆ ವಾರ್ತಾ ಇಲಾಖೆಯ ಸಿಬ್ಬಂದಿ, ಜಿಪಂ ಸಿಬ್ಬಂದಿ ಹಾಗೂ ಇತರರು ಇದ್ದರು.

# 5ವರ್ಷದೊಳಗಿನ ಮಕ್ಕಳಿಗೆ ಪಲ್ಸ ಪೋಲಿಯೋ ಲಸಿಕಾ ಅಭಿಯಾನ



**ಮಲ್ಲಮ್ಮ ನುಡಿ ವಾರ್ತೆ**

**ಮುದಗಲ್:** ಡಿಸೆಂಬರ 21ರಿಂದ 24ರ ವರಗೆ ಜಿರೊ ದಿಂದ ಐದು ವರ್ಷದೊಳಗಿನ ಮಕ್ಕಳಿಗೆ ಪಲ್ಸ ಪೋಲಿಯೋ ಲಸಿಕೆ ಅಭಿಯಾನ ಕಾರ್ಯಕ್ರಮ ರವಿವಾರ ಪಟ್ಟಣದ ಕಿಲ್ಲಾ ಅಂಗನಾಡಿ ಕೇಂದ್ರ ಹಾಗೂ ಪಿಕಳಿಹಾಳ ಗ್ರಾ,ಮದ ಅಂಗನಾಡಿ ಕೇಂದ್ರದಲ್ಲಿ ಮೆದಕಿನಾಳ ಪ್ರಾಥಮಿಕ ಕೇಂದ್ರ ಡಾ. ಮಹೇಂದ್ರಗೌಡ ಪಾಟೀಲ್ ನೇತ್ರತ್ವದಲ್ಲಿ ಜರುಗಿತು.

ರಾಷ್ಟ್ರೀಯ ಪಲ್ಸ ಪೋಲಿಯೋ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಪೋಲಿಯೋ ಮುಕ್ತರನ್ನಾಗಿಸಲು ಸಾರ್ವಜನಿಕರು ಐದು ವರ್ಷದೊಳಗಿರುವ ಮಕ್ಕಳಿಗೆ ತಪ್ಪದೆ ಲಸಿಕೆ ಹಾಕಿಸಬೇಕು.

ಮಕ್ಕಳಿಗೆ ಎರಡು ಹನಿ ಪೋಲಿಯೊ ಲಸಿಕೆ ಹಾಕಿಸುವ ಮೂಲಕ ಪೋಲಿಯೋ ಮುಕ್ತರನ್ನಾಗಿಸಬಹುದು. ಹಾಗೂ ಇಲ್ಲದ ವದಂತಿಗಳಗೆ ಕಿವಿಗೂಡದೆ ಮಕ್ಕಳಿಗೆ ಲಸಿಕೆ ಹಾಕಿಸಲು ಎಲ್ಲರೂ ಸಹಕರಿಸಬೇಕು. ಕಾಯಿಲೆಯನ್ನು ಸಂಪೂರ್ವವಾಗಿ ಕಾಯಿಲೆಯನ್ನು ನಿರ್ಮೂಲನೆ ಮಾಡುವುದು ಇದರ ಉದ್ದೇಶವಾಗಿದೆ ಎಂದು ತಿಳಿಸಿದರು.

ಆರೋಗ್ಯ ನಿರೀಕ್ಷಣಾಧಿಕಾರಿ ಕಿರಣ ಕುಮಾರ ಆದಿಮನಿ, ಸಮುದಾಯ ಆರೋಗ್ಯಧಿಕಾರಿ ಅಶೋಕ, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು ಇದ್ದರು.

# ಪೋಲಿಯೋ ಲಸಿಕೆಗೆ ಚಾಲನೆ ನೀಡಿದ ಪ.ಪಂ ಅಧ್ಯಕ್ಷೆ ಲಲಿತಮ್ಮ ಯಡಿಯಾಪುರ



**ಮಲ್ಲಮ್ಮ ನುಡಿ ವಾರ್ತೆ**

**ಕುಕನೂರ :** ಪಟ್ಟಣದ 8ನೇ ವಾರ್ಡಿನ ಅಂಗನವಾಡಿ ಕೇಂದ್ರದಲ್ಲಿ ಪಟ್ಟಣ ಪಂಚಾಯಿತಿ ಅಧ್ಯಕ್ಷ ಲಲಿತಮ್ಮ ಯಡಿಯಾಪುರ ಅವರು ಮಗುವಿಗೆ ಪೋಲಿಯೋ ಹನಿ ಹಾಕುವುದರ ಮೂಲಕ ಚಾಲನೆ ನೀಡಿದರು,

ನಂತರ ಪಟ್ಟಣ ಪಂಚಾಯಿತಿ ಅಧ್ಯಕ್ಷ ಲಲಿತಮ್ಮ ಯಡಿಯಾಪುರ ಮಾತನಾಡಿ, ಪೋಲಿಯೊ ಮೈಲೈಟಿಸ್ ವೈರಸ್‌ನಿಂದ ಪೋಲಿಯೊ ಬರಲಿದ್ದು ಮಕ್ಕಳಿಗೆ ಲಸಿಕೆ ಹಾಕಿಸುವ ಮೂಲಕ ಸಂಭಾವ್ಯ ಅಂಗವಿಕಲತೆ ತಡೆಗಟ್ಟಬಹುದು, ಪೋಲಿಯೊ ಕಾಯಿಲೆಯು ಕಲುಷಿತ ನೀರು ಮತ್ತು ಆಹಾರದಿಂದಲೂ ಹರಡುತ್ತದೆ ಎಂದು ಮಾಹಿತಿ ನೀಡಿದರು. 2011ರಲ್ಲಿ ದೇಶದಲ್ಲಿ ಕೊನೆಯದಾಗಿ ಪೋಲಿಯೊ ಪ್ರಕರಣ ವರದಿಯಾಗಿದ್ದು ನಂತರ ಯಾವುದೇ ಪ್ರಕರಣಗಳು ಪತ್ತೆಯಾಗಿಲ್ಲ. 2014ರಲ್ಲಿ ವಿಶ್ವ ಆರೋಗ್ಯ ಸಂಸ್ಥೆ ಭಾರತವನ್ನು 'ಪೋಲಿಯೊ ಮುಕ್ತ ದೇಶ' ಎಂದು ಘೋಷಿಸಿದೆ. ಆದರೂ ನೆರೆಯ ರಾಷ್ಟ್ರಗಳಾದ ಪಾಕಿಸ್ತಾನ ಮತ್ತು ಅಫ್ಘಾನಿಸ್ಥಾನದಲ್ಲಿ ಕೆಲವು ಪೋಲಿಯೊ ಪ್ರಕರಣಗಳು ವರದಿಯಾಗುತ್ತಿದ್ದು, ಮುಂಜಾಗ್ರತಾ ಕ್ರಮವಾಗಿ ಭಾರತದಲ್ಲಿ ಪಲ್ಸ್ ಪೋಲಿಯೊ ಕಾರ್ಯಕ್ರಮ ಮುಂದುವರಿಸಲಾಗಿದೆ. ಪೋಲಿಯೊ ನಿರ್ಮೂಲನೆಗೆ ಎಲ್ಲರೂ ಕೈಜೋಡಿಸಬೇಕು ಎಂದು ಅವರು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಆರೋಗ್ಯ ಇಲಾಖೆಯ ಶ್ವೇತ ವನ್ನಳ್ಳಿ, ಆಶಾ ಕಾರ್ಯಕರ್ತೆ ಶಂಕ್ರಮ್ಮ ಹಳ್ಳಿಕೇರಿ, ಅಂಗನವಾಡಿ ಸಹಾಯಕಿ ಶರಿಪಾ ಬೇಗಂ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಪೋಲಿಯೋ ಕಾರ್ಯಕ್ರಮಕ್ಕೆ ಎಸಿ ಗುರುನಾಥ ದಡ್ಡೆ ಚಾಲನೆ

**ಮಲ್ಲಮ್ಮ ನುಡಿ ವಾರ್ತೆ**

**ತಾಳಿಕೋಟಿ:** ಡಿಸೆಂಬರ್ 21ರಿಂದ 24ರ ವರೆಗೆ ಪಟ್ಟಣದಲ್ಲಿ ನಡೆಯಲಿರುವ ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕೆ ವಿಜಯಪುರ ಉಪ ವಿಭಾಗಾಧಿಕಾರಿ ಗುರುನಾಥ ದಡ್ಡೆ ಆಶ್ರಯ ನಗರದಲ್ಲಿ ರವಿವಾರ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು ಮೈಲೆಟಿಸ್ ವೈರಸ್ ನಿಂದ ಪೋಲಿಯೋ ಬರಲಿದ್ದು 5 ವರ್ಷದ ಒಳಗಿನ ಮಕ್ಕಳಿಗೆ ಕಡ್ಡಾಯವಾಗಿ ಲಸಿಕೆ ಹಾಕಿಸುವ ಮೂಲಕ ಇದರಿಂದಾಗುವ ಸಂಭಾವ್ಯ ಅಂಗವಿಕಲತೆಯನ್ನು ತಡೆಗಟ್ಟಬಹುದಾಗಿದೆ. 2014ರಲ್ಲಿಯೇ ವಿಶ್ವ ಆರೋಗ್ಯ ಸಂಸ್ಥೆ ಭಾರತವನ್ನು ಪೋಲಿಯೋ ಮುಕ್ತ ದೇಶವೆಂದು ಘೋಷಿಸಿದೆ ಆದರೂ ಮುಂಜಾಗ್ರತಾ ಕ್ರಮವಾಗಿ ದೇಶದಲ್ಲಿ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ನಡೆಸಲಾಗುತ್ತಿದೆ ಎಂದರು. ತಹಸಿಲ್ದಾರ್ ಡಾ.ವಿನಯಾ ಹೂಗಾರ ಮಾತನಾಡಿ ಪಟ್ಟಣದಲ್ಲಿ ಡಿಸೆಂಬರ್ 21ರಿಂದ 24ರ ವರೆಗೆ



ಪೋಲಿಯೋ ಕಾರ್ಯಕ್ರಮ ನಡೆಯಲಿದ್ದು ಹುಟ್ಟಿದ ಮಗುವಿನಿಂದ ಐದು ವರ್ಷದೊಳಗಿನ ಮಕ್ಕಳಿಗೆ ಹೆತ್ತವರು ಕಡ್ಡಾಯವಾಗಿ ಪೋಲಿಯೋ ಲಸಿಕೆಯನ್ನು ಹಾಕಿಸಬೇಕು ಈ ಕುರಿತು ಯಾವುದೇ ರೀತಿಯ ನಿರ್ಲಕ್ಷೆ ತೋರಬಾರದು ಎಂದರು. ಈ ಸಮಯದಲ್ಲಿ ಪುರಸಭೆ ಮುಖ್ಯಾಧಿಕಾರಿ ವಸಂತ ಪವಾರ,ಹಿರಿಯ ಆರೋಗ್ಯಾಧಿಕಾರಿ ಫಿರೋಜ್ ಮುಲ್ಲಾ, ಪುರಸಭೆ ಕಚೇರಿ ವ್ಯವಸ್ಥಾಪಕ ಎಸ್.ಎಸ್.ಇಂಜಿಗನೇರಿ, ಪಿಎಚ್ ಸಿಓ ಮಧು ಟಕ್ಕಳಕಿ, ಆಶಾ ಕಾರ್ಯಕರ್ತೆಯರಾದ ಪದ್ಮಾ ನಾಡಕರ್ಣಿ, ಹೀರಾಬಾಯಿ ಗಾಯಕವಾಡ ಮತ್ತಿತರರು ಇದ್ದರು.

# ಪಾರಮ್ಮ ಘಂಟೆ ನಿಧನ

**ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:** ಪಟ್ಟಣದ ನಿವಾಸಿ, ನಿವೃತ ಗಣಿತ ಶಿಕ್ಷಕ ಶಿವಕುಮಾರ ಘಂಟೆ ರವರ ತಾಯಿ ಪಾರಮ್ಮಾ ಶಂಕ್ರೆಪ್ಪ ಘಂಟೆ (93) ಸೋಮವಾರ ನಿಧನರಾಗಿದ್ದಾರೆ. ಮೃತರು 4 ಜನ ಗಂಡು ಮಕ್ಕಳು ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯ ಕ್ರಿಯೆ ಭತಾಂಬ್ರಾ ಗ್ರಾಮದ ದರ್ಗಾ ಹತ್ತಿರದ ಅವರ ಸ್ವಂತ ಹೊಲದಲ್ಲಿ ಮಂಗಳವಾರ ಮಧ್ಯಾಹ್ನ 12.30 ಗಂಟೆಗೆ ನೆರವೇರಲಿದೆ ಎಂದು ಅವರ ಕುಟುಂಬ ಮೂಲಗಳು ತಿಳಿಸಿವೆ. ಮೃತರ ನಿಧನಕ್ಕೆ ಹಿರೇಮಠ ಸಂಸ್ಥಾನದ ಹಿರಿಯ ಸ್ವಾಮೀಜಿ ಶ್ರೀ ಬಸವಲಿಂಗ ಪಟ್ಟದೇವರು, ಹಿರೇಮಠದ ಪೀಠಾಧಿಪತಿ ಶ್ರೀ ಗುರುಬಸವ ಪಟ್ಟದೇವರು ಸಂತಾಪ ಸೂಚಿಸಿದ್ದಾರೆ.



**ಕಮಲನಗರ ತಾಲೂಕಿನ ಡಿಗ್ಗಿ ಗ್ರಾಮದ 97 ವರ್ಷದ ಹಿರಿಯ ಜೀವಿ ಶರಣಪ್ಪ ತಂದೆ ಶಿವಲಿಂಗಪ್ಪ ರಾಂಪುರೆ ಅವರು ರವಿವಾರ ಮುಂಜಾನೆ ಮಲ್ಲಮ್ಮ ನುಡಿ ಪತ್ರಿಕೆ ಓದುತಿರುವ ದ್ರಶ್ಯ... (ಮಲ್ಲಮ್ಮ ನುಡಿ ಚಿತ್ರ )**

# ತಾಲೂಕ ಪತ್ರಕರ್ತರ ಧ್ವನಿ ಸಂಘಕ್ಕೆ ಆಯ್ಕೆ



**ಮಲ್ಲಮ್ಮ ನುಡಿ ವಾರ್ತೆ**

**ಕುಕನೂರು:** ಕರ್ನಾಟಕ ಕಾರ್ಯನಿರತ ಪತ್ರಕರ್ತ ಧ್ವನಿ ಸಂಘದ ಕುಕನೂರು ತಾಲ್ಲೂಕು ಘಟಕದ ನೂತನ ಉಪಾಧ್ಯಕ್ಷರಾಗಿ ಮುರಾರಿ ಭಜಂತ್ರಿ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ಬಸವರಾಜ ಕೊನಾರಿ ಅವರನ್ನು ಸರ್ವನುಮತದಿಂದ ಆಯ್ಕೆ ಮಾಡಲಾಗಿದೆ. ಭಾನುವಾರ ನಡೆದ ಸಂಘದ ವಿಶೇಷ ಸಭೆಯಲ್ಲಿ ಈ ಆಯ್ಕೆ ಪ್ರಕ್ರಿಯೆ ನಡೆಯಿತು.

ತಾಲ್ಲೂಕು ಗೌರವ ಅಧ್ಯಕ್ಷ ಮಹೇಶ್ ಕಲ್ಮಠ, ಜಿಲ್ಲಾ ಅಧ್ಯಕ್ಷ ಸುನಿಲ್ ಕುಮಾರ್ ಮಠದ ಜಿಲ್ಲಾ ಸಹ ಕಾರ್ಯದರ್ಶಿ ವೀರಯ್ಯ ವಿ ಹಿರೇಮಠ ಹಾಗೂ ತಾಲ್ಲೂಕು ಘಟಕದ ಅಧ್ಯಕ್ಷ ಚಂದ್ರ ಭಾನಾಪುರ ಅವರ ಉಪಸ್ಥಿತಿಯಲ್ಲಿ ಸಭೆ ನಡೆಯಿತು.

ಸಭೆಯಲ್ಲಿ ನಡೆದ ಚರ್ಚೆಯ ಬಳಿಕ ಹಾಜರಿದ್ದ ಎಲ್ಲ ಸದಸ್ಯರು ಸರ್ವಾನುಮತದಿಂದ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಿದರು. ಆಯ್ಕೆಯಾದ ಪದಾಧಿಕಾರಿಗಳಿಗೆ ಸಭೆಯಲ್ಲಿ ಎಲ್ಲರೂ ಶುಭಾಶಯಗಳನ್ನು ತಿಳಿಸಿ ಸಂಘಕ್ಕೆ ಬರಮಾಡಿಕೊಂಡರು.

ಈ ಸಂದರ್ಭದಲ್ಲಿ ಪತ್ರಕರ್ತ ಧ್ವನಿ ಸಂಘದ ಪದಾಧಿಕಾರಿಗಳಾದ ವೀರಯ್ಯ ಕುರ್ತಕೋಟಿ, ವಿಶ್ವನಾಥ ಪಟ್ಟಣಶೆಟ್ಟಿ, ಭೀಮಾಶಂಕರ್ ಪಾಣೇಗಾಂವ, ಮಲ್ಲಯ್ಯ ಹಿರೇಮಠ, ಮುತ್ತು ತೊಂಟಾದರ್ಯಮಠ ಅಲ್ಲಬೇಗಂ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕೆ ಚಾಲನೆ



**ಮಲ್ಲಮ್ಮ ನುಡಿ ವಾರ್ತೆ**

**ಕಾರವಾರ:** ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಅಂಗವಾಗಿ ಭಾನುವಾರ ಜಿಲ್ಲಾ ಆಸ್ಪತ್ರೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಕರ್ನಾಟಕ ಮಾರ್ಕೇಟಿಂಗ್ ಕನ್ಸಲ್ಟೆಂಟ್ ಅಂಡ್ ಏಜೆನ್ಸಿಸ್ ಅಧ್ಯಕ್ಷ ಹಾಗೂ ಶಾಸಕ ಸತೀಶ ಕೆ. ಸೈಲ್ ಮಕ್ಕಳಿಗೆ ಲಸಿಕೆ ಹಾಕುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು, ಜಿಲ್ಲೆಯಲ್ಲಿ 5 ವರ್ಷದೊಳಗಿನ 1,04,581 ಮಕ್ಕಳಿಗೆ ಪಲ್ಸ್ ಪೋಲಿಯೋ ಲಸಿಕೆ ಹಾಕುವ ಗುರಿ ಹೊಂದಲಾಗಿದ್ದು, ಇದಕ್ಕಾಗಿ ಜಿಲ್ಲೆಯಾದ್ಯಂತ 878 ಬೂತ್‌ಗಳನ್ನು ತೆರೆಯಲಾಗಿದೆ. 33 ಟ್ರಾನ್ಸಿಸ್ಟ್ ತಂಡ, 9 ಸಂಚಾರಿ ಲಸಿಕಾ ತಂಡಗಳ ವ್ಯವಸ್ಥೆ ಮಾಡಲಾಗಿದೆ. 3591 ಲಸಿಕೆ ಹಾಕುವವರು ಹಾಗೂ 200 ಮೇಲ್ವಿಚಾರಕರನ್ನು ನೇಮಿಸಲಾಗಿದೆ ಎಂದರು.

ಭಾರತ ದೇಶ ಪೋಲಿಯೋ ಮುಕ್ತವಾಗಿದ್ದು, ಆದರೂ ಸಹ ಪೋಷಕರು ತಮ್ಮ 5 ವರ್ಷದೊಳಗಿನ ಮಕ್ಕಳಿಗೆ ಮುನ್ನೆಚ್ಚರಿಕೆವಾಗಿ ಪಲ್ಸ್ ಪೋಲಿಯೋ ಲಸಿಕೆಯನ್ನು ಹಾಕಿಸುವಂತೆ ಹಾಗೂ ಪೋಲಿಯೋ ಅಭಿಯಾನಕ್ಕೆ ಎಲ್ಲರ ಸಹಕಾರ ನೀಡಬೇಕು ಎಂದರು.

ವಿಧಾನ ಪರಿಷತ್ ಶಾಸಕ ಗಣಪತಿ ಉಳ್ವೇಕರ ಮಾತನಾಡಿ, 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಕಡ್ಡಾಯವಾಗಿ ಪೋಲಿಯೋ ಲಸಿಕೆಯನ್ನು ಹಾಕಿಸುವುದು ಪೋಷಕರ ಕರ್ತವ್ಯವಾಗಿದೆ ಎಂದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ದಿಲೀಷ್ ಶಶಿ ಮಾತನಾಡಿ ಪಲ್ಸ್ ಪೋಲಿಯೋ ಅಭಿಯಾನ ಜಿಲ್ಲೆಯಾದ್ಯಂತ ನಡೆ-ಯುತ್ತಿದ್ದು, ಈ ಅಭಿಯಾನಕ್ಕೆ ಸಮುದಾಯದ ಸಹಭಾಗಿತ್ವ ಮುಖ್ಯವಾಗಿದೆ ಹಾಗಾಗಿ ಎಲ್ಲರ ಸಹಕಾರ ಅಗತ್ಯ ಎಂದರು.

ಕಾರ್ಯಕ್ರಮದಲ್ಲಿ ಕಾರವಾರ ವೈದ್ಯಕೀಯ ವಿಜ್ಞಾನ ಸಂಸ್ಥೆಯ ನಿರ್ದೇಶಕಿ ಡಾ.ಪೂರ್ಣಿಮಾ, ವೈದ್ಯಕೀಯ ಅಧೀಕ್ಷಕ ಡಾ.ನರೇಶ ಪಾವಸ್ಕರ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಗಣೇಶ, ಕಮ್ಯೂನಿಟಿ ಮೆಡಿಸಿನ್ ವಿಭಾಗದ ಮುಖ್ಯಸ್ಥ ಡಾ.ಹೇಮಗಿರಿ, ಮಕ್ಕಳ ವಿಭಾಗದ ಮುಖ್ಯಸ್ಥ ಡಾ.ವಿಶ್ವನಾಥ ಮಾಚಕ್ಕನವರ, ಮಾನಸಿಕ ಆರೋಗ್ಯ ವಿಭಾಗದ ಮುಖ್ಯಸ್ಥ ಡಾ.ವಿಜಯರಾಜ್, ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಡಾ.ನಟರಾಜ, ರೆಡ್‌ಕ್ರಾಸ್ ಸಂಸ್ಥೆಯ ಅಧ್ಯಕ್ಷ ವಿ.ಎಂ. ಹೆಗಡೆ, ರೋಟರಿ ಸಂಸ್ಥೆಯ ಅಧ್ಯಕ್ಷ ಡಾ.ಅರ್ಜುನ ಉಪಾಧ್ಯಾಯ ಮತ್ತಿತರರು ಇದ್ದರು.

# ರಾಜ್ಯಪಾಲ ಗೆಹ್ಲೋಟ್ ಬಳ್ಳಾರಿ ಜಿಲ್ಲಾ ಪ್ರವಾಸ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ರಾಜ್ಯದ ರಾಜ್ಯಪಾಲರಾದ ಥಾವರ್‌ಚಂದ್ ಗೆಹ್ಲೋಟ್ ಅವರು ಡಿಸೆಂಬರ್ 24 ರಂದು ಬಳ್ಳಾರಿ ಜಿಲ್ಲೆಯಲ್ಲಿ ಒಂದು ದಿನದ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ.

ಡಿ.24 ರಂದು ಬೆಳಿಗ್ಗೆ ಬೆಂಗಳೂರಿನ ಹೆಚ್‌ಎಎಲ್‌ನ ಏರ್‌ಪೋರ್ಟ್ ನಿಂದ ವಿಶೇಷ ವಿಮಾನ ಮೂಲಕ ಹೊರಟು, ಬೆಳಿಗ್ಗೆ 11.45 ಕ್ಕೆ ಬಳ್ಳಾರಿಯ ಕಿಷ್ಕಿಂದ ವಿಶ್ವವಿದ್ಯಾಲಯದ ಎಲಿಪ್ಯಾಡ್ ಗೆ ತಲುಪಿ, ಕಿಷ್ಕಿಂದ ವಿಶ್ವವಿದ್ಯಾಲಯದ ಕುಲಪತಿಗಳ ಕಚೇರಿಗೆ ಆಗಮಿಸುವರು. ನಂತರ ಮಧ್ಯಾಹ್ನ 12.30 ಗಂಟೆಗೆ ಸಿರುಗುಪ್ಪ ರಸ್ತೆ ಮಾರ್ಗದ ಸಿಂಧಿಗೇರಿ ಗ್ರಾಮದ ಬಳಿಯ ಮೌಂಟ್ ಕ್ಯಾಂಪಸ್ ನ ಕಿಷ್ಕಿಂದ ವಿಶ್ವವಿದ್ಯಾಲಯದ ಪ್ರಥಮ ವರ್ಷದ ಘಟಿಕೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಬಳಿಕ ಅಲ್ಲಿಂದ ಮಧ್ಯಾಹ್ನ 02.30 ಗಂಟೆಗೆ ಹೊರಟು, ವಿಶೇಷ ವಿಮಾನದ ಮೂಲಕ ಬೆಂಗಳೂರಿನ ಲೋಕಭವನಕ್ಕೆ ಪ್ರಯಾಣಿಸುವರು ಎಂದು ಪ್ರಕಟಣೆ ತಿಳಿಸಿದೆ.

# ಬೀದಿಬದಿ ವ್ಯಾಪಾರಿಗಳಿಗೆ ಅರಿವು ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲಾ ಕೌಶಲಾಭಿವೃದ್ಧಿ, ಉದ್ಯಮಿಶೀಲತೆ ಮತ್ತು ಜೀವನೋಪಾಯ ಇಲಾಖೆ, ಜಿಲ್ಲಾ ನಗರಾಭಿವೃದ್ಧಿ ಕೋಶ ಮತ್ತು ಭಾಗ್ಯನಗರ ಪಟ್ಟಣ ಪಂಚಾಯಿತಿ ಸಹಯೋಗದಲ್ಲಿ ಬುಧವಾರ ಭಾಗ್ಯನಗರ ಪಟ್ಟಣ ಪಂಚಾಯಿತ ವ್ಯಾಪ್ತಿಯಲ್ಲಿ ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನ ಹಾಗೂ ಪ್ರಧಾನ ಮಂತ್ರಿ ಸ್ವ ನಿಧಿ ಯೋಜನೆ ಅಡಿಯಲ್ಲಿ ಬೀದಿಬದಿ ವ್ಯಾಪಾರಿಗಳಿಗೆ ಕಿರು ಸಾಲ ಸೌಲಭ್ಯ, ಪ್ರಧಾನ ಮಂತ್ರಿ ಜೀವನ ಜ್ಯೋತಿ ಭೀಮಾ ಯೋಜನೆ, ಪ್ರಧಾನಮಂತ್ರಿ ಸುರಕ್ಷಾ ಭೀಮಾ ಯೋಜನೆ, ಅಟಲ್ ಪೆನ್ಷನ್ ಯೋಜನೆಗಳ ಸೌಲಭ್ಯಗಳ ಕುರಿತು ಅರಿವು ಕಾರ್ಯಕ್ರಮ ನಡೆಯಿತು. ಕೌಶಲ್ಯ ಅಭಿವೃದ್ಧಿ ಇಲಾಖೆಯ ನಲ್ಮ್ ಅಭಿಯಾನ ವ್ಯವಸ್ಥಾಪಕ ಅಹಮದ್ ಅವರು ಮಾತನಾಡಿ, ಬೀದಿಬದಿ ವ್ಯಾಪಾರಿಗಳಿಗೆ ಕಿರು ಸಾಲ ಸೌಲಭ್ಯ, ಪ್ರಧಾನ ಮಂತ್ರಿ ಜೀವನ ಜ್ಯೋತಿ ಭೀಮಾ ಯೋಜನೆ, ಪ್ರಧಾನಮಂತ್ರಿ ಸುರಕ್ಷಾ ಭೀಮಾ ಯೋಜನೆ, ಅಟಲ್ ಪೆನ್ಷನ್ ಯೋಜನೆಯಂತಹ ಕಾರ್ಯಕ್ರಮಗಳಡಿ ಸೌಲಭ್ಯಗಳಿದ್ದು, ಅರ್ಹ ಬೀದಿಬದಿ ವ್ಯಾಪಾರಿಗಳು ಅವುಗಳನ್ನು ಸದ್ಬಳಕೆ ಮಾಡಿಕೊಂಡು ಜೀವನ ಆರ್ಥಿಕ ಮಟ್ಟವನ್ನು ಸುಧಾರಿಸಿಕೊಳ್ಳಬೇಕು. ಈ ಎಲ್ಲಾ ಸೌಲಭ್ಯ ಪಡೆದುಕೊಂಡು ನೀವೆಲ್ಲರೂ ಸಮಾಜದಲ್ಲಿ ಮುಖ್ಯವಾಹಿನಿಗೆ ಬರುತ್ತಾ ಬೇರೆಯವರಿಗೆ ಮಾದರಿಯಾಗಬೇಕೆಂದರು. ಲೀಡ್ ಬ್ಯಾಂಕ್ ವ್ಯವಸ್ಥಾಪಕ ಮಾರುತಿ ಅವರು ಬೀದಿಬದಿ ವ್ಯಾಪಾರಿಗಳಿಗೆ ಕಿರು ಸಾಲ ಸೌಲಭ್ಯ, ಪ್ರಧಾನ ಮಂತ್ರಿ ಜೀವನ ಜ್ಯೋತಿ ಭೀಮಾ ಯೋಜನೆ, ಪ್ರಧಾನಮಂತ್ರಿ ಸುರಕ್ಷಾ ಭೀಮಾ ಯೋಜನೆ, ಅಟಲ್ ಪೆನ್ಷನ್ ಯೋಜನೆಗಳಿಗೆ ಸಂಬಂಧಿಸಿದಂತೆ ಬ್ಯಾಂಕ್ ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಿದರು. ಭಾಗ್ಯನಗರ ಪಟ್ಟಣ ಪಂಚಾಯತ ಹಂಗಾಮಿ ಅಧ್ಯಕ್ಷರಾದ ಹೊನ್ನೂರಸಾಬ್ ಬೈರಾಪುರ ಅವರು ಕಾರ್ಯಕ್ರಮದ ಅಧ್ಯಕ್ಷ ವಹಿಸಿದ್ದರು. ಪ.ಪಂ ಮುಖ್ಯಾಧಿಕಾರಿ ಸುರೇಶ ಬಬಲಾದಿ ಅವರು ಪ್ರಸ್ತಾವಿಕವಾಗಿ ಮಾತನಾಡಿದರು.

# ಸಾರ್ವಜನಿಕರ ಸಮಸ್ಯೆ ಆಲಿಸಿ ಸ್ಪಂದಿಸಿದ ಶಾಸಕ ನಾಡಗೌಡ



**ಮಲ್ಲಮ್ಮ ನುಡಿ ವಾರ್ತೆ ತಾಳಿಕೋಟಿ:** ವಾರ್ಡ್ ಗಳಲ್ಲಿ ಸುಸಜ್ಜಿತವಾದ ರಸ್ತೆ, ಚರಂಡಿ, ಸಮರ್ಪಕವಾದ ಕುಡಿಯುವ ನೀರಿನ ಸೌಲಭ್ಯ, ಪಡಿತರ ಪೂರೈಕೆ ಸರಿಯಾಗಿಲ್ಲ, ಅಂಗನವಾಡಿ ಕೇಂದ್ರದ ಆಹಾರ ಪದಾರ್ಥಗಳು ಸರಿಯಾಗಿ ಸಿಗುತ್ತಿಲ್ಲ, ಸರ್ಕಾರಿ ಶಾಲೆಗೆ ಕಾಂಪೌಂಡ್ ಇಲ್ಲದೆ ಇರುವುದರಿಂದ ಕಾನೂನುಬಾಹಿರ ಚಟುವಟಿಕೆಗಳು, ಘನ ತ್ಯಾಜ್ಯ ವಸ್ತು ವಿಲೇವಾರಿಯಲ್ಲಿ ನಿರ್ಲಕ್ಷೆ, ಬಡಾವಣೆಯಲ್ಲಿರುವ ಉದ್ಯಾನವನದ ಸ್ವಚ್ಛತೆ ಹೀಗೆ ಹತ್ತು ಹಲವು ಸಮಸ್ಯೆಗಳನ್ನು ಇಲ್ಲಿಯ ಬಡಾವಣೆ ಜನರು ಮುಂದಿಟ್ಟಿದ್ದಾರೆ ಅವುಗಳನ್ನು ಆದಷ್ಟು ಬೇಗ ಪರಿಹರಿಸಬೇಕು ಪಟ್ಟಣದ ಜನತೆಗೆ ಮೂಲಭೂತ ಸೌಕರ್ಯಗಳನ್ನು ನೀಡುವಲ್ಲಿ ಯಾವುದೇ ರೀತಿಯ ನಿರ್ಲಕ್ಷೆಯನ್ನು ನಾನು ಸಹಿಸುವುದಿಲ್ಲ ಎಂದು ಶಾಸಕ ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷ ಸಿ.ಎಸ್.ನಾಡಗೌಡ ಅಪ್ಪಾಜಿ ಅಧಿಕಾರಿಗಳಿಗೆ ತಿಳಿಸಿದರು. ರವಿವಾರ ಪಟ್ಟಣದ ಆಶ್ರಯ ನಗರದ ಸರ್ಕಾರಿ ಶಾಲೆ ಆವರಣದಲ್ಲಿ ಪುರಸಭೆ ಕಾರ್ಯಾಲಯ ತಾಳಿಕೋಟಿ ವತಿಯಿಂದ ಹಮ್ಮಿಕೊಂಡ ವಾರ್ಡ್ ಮಟ್ಟದ ಸಾರ್ವಜನಿಕರ ಕುಂದು ಕೊರತೆಗಳ ಸಭೆಯಲ್ಲಿ ಅವರು ಮಾತನಾಡಿದರು. ಆಶ್ರಯ ನಗರವು ಹೆಚ್ಚು ಜನಸಂಖ್ಯೆಯನ್ನು ಹೊಂದಿದ್ದು ಬಡವರೆ ಹೆಚ್ಚಾಗಿರುವುದರಿಂದ ಇಲ್ಲಿ ಸಮರ್ಪಕವಾದ ಕುಡಿಯುವ ನೀರಿನ ವ್ಯವಸ್ಥೆ ಇಲ್ಲ ಐದಾರು ದಿನಗಳಿಗೊಮ್ಮೆ ನೀರು ಪೂರೈಕೆ ಆಗುತ್ತಿರುವುದರಿಂದ ತುಂಬಾ ತೊಂದರೆ ಆಗುತ್ತದೆ ಎಂದು ಬಡಾವಣೆ ನಿವಾಸಿಗಳು ತಮ್ಮ ಅಳಲು ತಿಳಿಸಿದಾಗ ಶಾಸಕರು ಪುರಸಭೆ ಮುಖ್ಯಾಧಿಕಾರಿಗೆ ಈ ಕುರಿತು ಸೂಚನೆ ನೀಡಿ ಕನಿಷ್ಠ ಎರಡು ಅಥವಾ ಮೂರು ದಿನಗಳಿಗೊಮ್ಮೆ ಒಂದರಿಂದ ಒಂದುವರೆ ತಾಸಿನವರೆಗೆ ನೀರು ಪೂರೈಕೆ ಆಗುವಂತೆ ನೋಡಿಕೊಳ್ಳಲು ಸೂಚಿಸಿದರು. ಅದರಂತೆ ಅಂಗನವಾಡಿ ಹಾಗೂ ಪಡಿತರ ಕೇಂದ್ರದ ಅವ್ಯವಸ್ಥೆ ಸರಿಪಡಿಸಲು ತಹಸಿಲ್ದಾರ್ ಅವರಿಗೆ ಸೂಚನೆ ನೀಡಿದರು. ಆದಷ್ಟು ಬೇಗ ಸ್ವಚ್ಛಗೊಳಿಸಿ ಸುಂದರವಾಗಿಡಲು ಹಾಗೂ ಬಡಾವಣೆ ನಿವಾಸಿಗಳು ಸಹ ತಮ್ಮ ಮನೆಗಳ ಮುಂದೆ ಗಿಡಗಳನ್ನು ನೆಡೆಸಲು ತಿಳಿಹೇಳಿದರು. ಕೆಲ ಮಹಿಳೆಯರು ನಮಗೆ ಮನೆಗಳನ್ನು ನೀಡುವುದಾಗಿ 50,000 ಪಡೆದುಕೊಂಡಿದ್ದು ಇಲ್ಲಿವರೆಗೆ ಮನೆಗಳನ್ನು ಕೊಟ್ಟಿಲ್ಲ ನಾವು ಬಡವರು ಹೆಚ್ಚು ಮತ ಕಟ್ಟಿ ಮನೆಗಳನ್ನು ಪಡೆದುಕೊಳ್ಳಲು ಸಾಧ್ಯವಾಗುವುದಿಲ್ಲ ಎಂದರು ಇದಕ್ಕೆ ಉತ್ತರಿಸಿದ ಶಾಸಕರು ಇದು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಹಭಾಗಿತ್ವದ ಯೋಜನೆಯಾಗಿದೆ ನನಗೆ ಏನು ಮಾಡಲು ಬರುವುದಿಲ್ಲ ಯಾರಿಗೆ ಮನೆಗಳು ಬೇಡವೋ ಅವರು ಬಿಡಬಹುದಾಗಿದೆ ಎಂದರು. ಸರ್ಕಾರಿ ಶಾಲೆ ಕಾಂಪೌಂಡ್ ನಿರ್ಮಾಣವನ್ನು ಅನುದಾನ ಬಿಡುಗಡೆಗೊಳಿಸಿಕೊಂಡು ಮಾಡಲಾಗುವುದು ಎಂದರು. ನಿಮ್ಮೆಲ್ಲ ಸಮಸ್ಯೆಗಳನ್ನು ಪರಿಹರಿಸಲು ಅಧಿಕಾರಿಗಳಿಗೆ ಸೂಚನೆ ನೀಡುತ್ತೇನೆ ಇದಕ್ಕೆ ನಿಮ್ಮೆಲ್ಲರ ಸಹಕಾರ ಅವರಿಗೆ ಬೇಕು ಎಂದರು. ವಿಜಯಪುರ ಉಪ ವಿಭಾಗಾಧಿಕಾರಿ ಹಾಗೂ ಪುರಸಭೆ ಆಡಳಿತಾಧಿಕಾರಿ ಗುರುನಾಥ ದಡ್ಡೆ, ತಹಸಿಲ್ದಾರ್ ಡಾ. ವಿನಯಾ ಹೂಗಾರ, ಮುಖ್ಯಾಧಿಕಾರಿ ವಸಂತ ಪವಾರ, ಸಿ.ಎಸ್ಸಿ ಆಡಳಿತ ವೈದ್ಯಧಿಕಾರಿ ಡಾ.ಶ್ರೀಶೈಲ್ ಹುಕ್ಕೇರಿ, ಗ್ಯಾರೆಂಟಿ ಸಮಿತಿ ಅಧ್ಯಕ್ಷ ಸಂಗಮೇಶ ದೇಸಾಯಿ, ಪಿಎ ಜ್ಯೋತಿ ಘೋತ್, ಪುರಸಭೆ ಮಾಜಿ ಅಧ್ಯ-ಕ್ಷೆ ನೀಲಮ್ಮಗೌಡತಿ ಪಾಟೀಲ, ಮುಖಂಡರಾದ ವಿ.ಸಿ.ಹಿರೇಮಠ, ಸಿದ್ದನಗೌಡ ಪಾಟೀಲ ನಾವದಗಿ, ಪ್ರಭುಗೌಡ ಮದರಕಲ್ಲ,ಸಂಗನಗೌಡ ಅಸ್ಕಿ,ಬಸನಗೌಡ ಜೈನಾಪೂರ, ಮಹೆಬೂಬ ಕೆಂಭಾವಿ, ಕಾಶಿನಾಥ ದೇಸಾಯಿ, ಆಸಿಫ್ ಕೆಂಬಾವಿ, ಗೋಪಾಲ ಕಟ್ಟಿಮನಿ, ಬಸ್ಸು ಮಾದರ, ಪುರಸಭೆ ಹಾಗೂ ಕಂದಾಯ ಇಲಾಖೆ ಸಿಬ್ಬಂದಿಗಳು ಮತ್ತು ನಿವಾಸಿಗಳು ಇದ್ದರು.

## ಕಂಚಿನ ಪ್ರತಿಮೆ ಅನಾವರಣ



**ಹುಣಸೂರು:** ತಾಲೂಕಿನ ಗಾವಡಗೆರೆ ಹೋಬಳಿ ಶಿರನಹಳ್ಳಿ ಗ್ರಾಮದಲ್ಲಿ ಸಂಗೊಳ್ಳಿ ರಾಯಣ್ಣ ಅವರ ಕಂಚಿನ ಪ್ರತಿಮೆ ಅನಾವರಣ ಮಾಜಿ ಶಾಸಕ ಎಚ್ ಪಿ ಮಂಜುನಾಥ್ ಮಾಡಿದರು ನಂತರ ಕಾರ್ಯಕ್ರಮದಲ್ಲಿ ಮಾತನಾಡಿ ತಾಲೂಕಿನ ಯುವಕರು ಸಂಪೂರ್ಣವಾಗಿ ಶ ಶಿಕ್ಷಣವಂತರಾಗಿರಿ. ಜೀವನದಲ್ಲಿ ಮುಂದಿನ ಭವಿಷ್ಯಕ್ಕೆ ಜೀವನದ ಆಲೋಚನೆ ಮಾಡಬೇಕು ನಾನು ಶಾಸಕರಾಗಿದ್ದಾಗ ಸಮಯದಲ್ಲಿ ಶಾಸಕರ ಕೊಠಡಿಯನ್ನು ವಿದ್ಯಾಭ್ಯಾಸಕ್ಕೆ ನೀಡಿದ್ದೆ ಅದು ನನಗೆ ಹೆಮ್ಮೆಯ ವಿಚಾರ ಎಂದರು. ಈ ಸಂದರ್ಭದಲ್ಲಿ ಗೌಡಗೆರೆ ಮಠದ ನಟರಾಜ್ ಸ್ವಾಮೀಜಿಗಳು ಮಾದಳ್ಳಿ ಉಕ್ಕಿನ ಕಂತೆ ಮಠದ ಸಾಂಬಾಸದ ಶಿವ ಸ್ವಾಮೀಜಿಗಳು ಸಂಗೊಳ್ಳಿ ರಾಯಣ್ಣ ಯುವ ಗರ್ಜನೆ ರಾಜ್ಯ ಅಧ್ಯಕ್ಷ ರಾಜಶೇಖರ್, ಕಾವೇರಿ ಸ್ಪೆಷಲಿಸ್ಟ್ ಆಸ್ಪತ್ರೆಯ ವ್ಯವಸ್ಥಾಪಕರಾದ ಡಾ. ಲೋಹಿತ್, ರಾಜ್ಯ ಅಹಿಂದ ಅಧ್ಯಕ್ಷರಾದ ಶಿವ ಶಂಕರ್, ಜಿಲ್ಲಾ ಕುರುಬ ಸಮುದಾಯದ ಉಪಾಧ್ಯಕ್ಷರಾದ ಬಸವರಾಜ ಗೌಡ, ಮಾಜಿ ಜಿಪಂ ಸದಸ್ಯರಾದ ಅಮಿತ್ ದೇವರೆಟ್ಟಿ, ಸುರೇಂದ್ರ ಇನ್ನಿತರ ಹಾಜರಿದ್ದರು.




**ಹಾರಕಬಾವಿ:** ಡಾ॥ ಮಹಲಿಂಗಪ್ಪರವರಿಗೆ ಡಾ॥ ಬಿ.ಆರ್.ಅಂಬೇಡ್ಕರ್ ಫಿಲಾಸಫಿ ಅವಾರ್ಡ್–ವಿಜಯನಗರ ಜಿಲ್ಲೆ ಕೂಡ್ಲಿಗಿ: ತಾಲೂಕಿನ ಹಾರಕಬಾವಿ ಗ್ರಾಮದ ದಲಿತ ಹಿರಿಯರು ಹಾಗೂ ನಿವೃತ್ತ ಉಪಪ್ರಚಾರ್ಯರು. ರಂಗ ಕಲವಿದರಾದ ಡಾ॥ ಮಹಲಿಂಗಪ್ಪರವರಿಗೆ, ನವದೆಹಲಿಯಲ್ಲಿ ನಡೆದ ದಲಿತ ಸಾಹಿತ್ಯ ಅಕಾಡಮಿ ವತಿಯಿಂದ. ವಿವಿದ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಗೈದವರಿಗೆ ಗೌರವ ಪೂರ್ವಕವಾಗಿ ಕೊಡಮಾಡಲ್ಪಡುವ , ಡಾ॥ ಬಿ.ಆರ್.ಅಂಬೇಡ್ಕರ್ ಫಿಲಾಸಫಿ ಅವಾರ್ಡ್ ನೀಡಿ ಗೌರವಿಸಲಾಗಿದೆ. ಡಾ॥ ಮಹಲಿಂಗಪ್ಪರವರು ರಂಗಕಲಾ ಕ್ಷೇತ್ರದಲ್ಲಿ ಅವಿರತ ಸೇವೆ ಗೈದಿರುವುದಕ್ಕಾಗಿ, ಅವರಿಗೆ ನವದೆಹಲಿಯ ದಲಿತ ಸಾಹಿತ್ಯ ಪರಿಷತ್ ಅವರನ್ನು ಪ್ರಶಸ್ಥಿ ನೀಡಿ ಗೌರವಿಸಿದೆ. ಪ್ರಶಸ್ಥಿಗೆ ಭಾಜನರಾದ ಅವರನ್ನು ಕೂಡ್ಲಿಗಿ ಪಟ್ಟಣ ಸೇರಿದಂತೆ ತಾಲೂಕಿನ ವಿವಿದೆಡೆಯ ಗಣ್ಯರು, ಜನಪ್ರತಿನಿಧಿಗಳು ವಿವಿದ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಅಭಿನಂದಿಸಿದ್ದಾರೆ.



ಸಿಂಧನೂರು ಕೋರ್ಟ್ ಆವರಣದಲ್ಲಿ ಹಿರಿಯ ವಕೀಲರಾದ ಎಂ.ಕಾಳಂಗಪ್ಪ ಸರ ನಮ್ಮ ಪತ್ರಿಕೆಯನ್ನು ಓದುತ್ತಿರುವ ದೃಶ್ಯ.



ಮಲ್ಲಮ್ಮ ನುಡಿ ಕನ್ನಡ ದಿನಪತ್ರಿಕೆಗೆ ಮಸ್ಕಿ ಶಾಲಾ ಮಕ್ಕಳಿಂದ ಶುಭ ಹಾರೈಕೆ.



ಮಸ್ಕಿ ಮೆದಿಕಿನಾಳ ಗ್ರಾಮದಲ್ಲಿ ನಮ್ಮ ಪತ್ರಿಕೆ ಓದುತ್ತಿರುವುದು.

# ಭೋಗಣ್ಣನ ದೇವಸ್ಥಾನ ಮೂಲ ಸ್ವರೂಪಕ್ಕೆ ತರುವ ಕೆಲಸ

## ಭೋಗಣ್ಣ ಬಸವಾದಿ ಪ್ರಮಥರ ಹಿರಿಯ ಸಮಕಾಲಿನ ಶರಣ: ಹನುಮಾಕ್ಷಿ ಗೋಗಿ

• ಮಲ್ಲಮ್ಮ ನುಡಿ ವಾರ್ತೆ ಕೆಂಭಾವಿ

ಸುಮಾರು 1040 ನೇ ಇಸವಿಯಲ್ಲಿನ ಶಾಸನ ಇಲ್ಲಿನ ರೇವಣಸಿದ್ದೇಶ್ವರ ದೇವಸ್ಥಾನದಲ್ಲಿ ಕಾಣಬಹುದಾಗಿದೆ. ಕೆಂಭಾವಿ ಎಂದರೇನೆ ಸಮಸಮಾಜದ ಕನಸು ಕಂಡ ಶರಣ ಭೋಗಣ್ಣ ಮತ್ತು ರಾಜಾ ಚಂದಿಮರಸನ ನೆನಪಾಗುತ್ತದೆ ಎಂದು ಹಿರಿಯ ಸಂಶೋಧಕಿ ಹನುಮಾಕ್ಷಿ ಗೋಗಿ ಹೆಳಿದರು.

ಪಟ್ಟಣದ ಭೋಗೇಶ್ವರ ದೇವಸ್ಥಾನಕ್ಕೆ ಪ್ರಾಚ್ಯವಸ್ತು ಸಂಶೋಧನಾ ಇಲಾಖೆಯ ನಿವೃತ್ತ ಮುಖ್ಯಸ್ಥರಾದ ಎಸ.ವಿ ವೆಂಕಟೇಶಯ್ಯ ನವರು ಹಾಗೂ ಸಂಶೋದಕಿ ಡಾ. ಕಾಶಿಬಾಯಿ ಭೋಗಶಟ್ಟಿ ರವರ ಸಮೇತ ಅವರ ತಂಡ ಸೋಮವಾರ ಭೇಟಿ ನಿಡಿದ ಸಂದರ್ಭದಲ್ಲಿ ಮಾತನಾಡಿದ ಅವರು, ಭೋಗಣ್ಣ ಬಸವಾದಿ ಪ್ರಮಥರ ಹಿರಿಯ ಸಮಕಾಲಿನವರಾಗಿದ್ದರು. ಆ ಕಾಲದಲ್ಲಿ ಭೋಗಣ್ಣ ಲಿಂಗಭೇದ ರಹಿತ, ಜಾತಿಭೇದ ರಹಿತ ಸಮಾಜವನ್ನು ನಿರ್ಮಾಣ ಮಾಡಲು ಹೋರಾಡಿದ ಮಹಾನ್ ಶರಣ ಎಂಬುವುದಾಗಿ ಐತಿಹಾಸಿಕವಾಗಿ ಕಾಣಬಹುದಾಗಿದೆ. ಕೆಂಭಾವಿ ಬೋಗಣ್ಣವರ ಹೆಸರು ಈ ಭೋಗೇಶ್ವರ ದೇವಾಸ್ಥಾನದಿಂದ ಬಂತೋ ಅಥವಾ ಭೋಗಣ್ಣನವರ ನಂತರ ದೇವಸ್ಥಾನ ರಚನೆಯಾತೊ ಮತ್ತು ಆತನ ವಚನಗಳ ಕುರಿತು ಸಂಶೋಧನೆಗಳು ನಡೆಯಬೇಕಾಗಿದೆ ಎಂಬ ಅಭಿಪ್ರಾಯ ಪಟ್ಟ ಅವರು ಭೋಗಣ್ಣನ ದೇವಸ್ಥಾನ ಅತ್ಯಂತ ಪ್ರಾಚೀನವಾದದ್ದು ಮತ್ತು ವಿಶಿಷ್ಠವಾದದ್ದಾಗಿದೆ ಎಂದು ತಿಳಿಸಿದರು.

> **ಕೆಂಭಾವಿ ಭೋಗಣ್ಣನ ಕಾಲಮಾನ ಸುಮಾರು ಕ್ರಿ.ಶ. 1014 ರಿಂದ 1070 ಎಂದು ಅಂದಾಜಿಸಬಹುದಾಗಿದೆ. ಉಜ್ಜಯನಿಯಲ್ಲಿ ಭೋಗಾವತಿಪುರ ಇದೆ. ತೆಲಂಗಾಣ ಪ್ರದೇಶದಲ್ಲಿ ಉಜ್ಜಲ್ಲಿಯಲ್ಲಿಯ ಭೋಗಾವತಿ ಪುರದ ಗ್ರಾಮ ದೇವತೆ ಕೂಡ ಭೋಗೇಶ್ವರನಾಗಿದ್ದಾನೆ. ಕೆಂಭಾವಿ ಭೋಗಣ್ಣ ಘನ ವಿದ್ವಾಂಸನಾಗಿದ್ದನು, ಭೋಗಣ್ಣನ ಕುರಿತು ಮರಡಿಪುರ ಶಾಸನ, ಕುಣೆಲಮ್ ಗೆರೆ ಶಾಸನದಲ್ಲಿ ಉಲ್ಲೇಖ ಕಾಣಬಹುದಾಗಿದೆ ಭೋಗಣ್ಣನ 22 ಬೆಡಗಿನ ವಚನಗಳು ಸಿಕ್ಕಿವೆ, ಅನೇಕ ಶರಣರು ಕೆಂಭಾವಿ ಭೋಗಣ್ಣನ ಕುರಿತು ಕೊಂಡಾಡಿದ್ದು ನೋಡಬಹುದುದು. ಇಲ್ಲಿನ ದೇವಸ್ಥಾನ ಉತ್ಖನನ ಮಾಡುವುದು ಅವಶ್ಯವಿದೆ.**
>
> –ಡಾ. ಕಾಶಿಭಾಯಿ ಭೋಗಶೆಟ್ಟಿ
> ಸಂಶೋಧಕ ಸಾಹಿತಿಗಳು



ಪ್ರಾಚ್ಯವಸ್ತು ಸಂಶೋಧನಾ ಇಲಾಖೆಯ ನಿವೃತ್ತ ಮುಖ್ಯಸ್ಥರಾದ ಎಸ.ವಿ ವೆಂಕಟೇಶಯ್ಯ ನವರು ಮಾತನಾಡಿ, ಕಲ್ಯಾಣಿ ಚಾಲುಕ್ಯರ ಕಾಲದ ದೇವಸ್ಥಾನ ಇದಾಗಿದೆ, 11 ನೇ ಶತಮಾನದಲ್ಲಿ ನಿರ್ಮಾಣವಾದ ಭೋಗಣ್ಣನ ದೇವಸ್ಥಾನ ಮೂಲ ಸ್ವರೂಪಕ್ಕೆ ತರುವ ಕೆಲಸವಾಗಬೇಕಾಗಿದೆ. ದೇವಸ್ಥಾನದ ಸುತ್ತುಲೂ ಇರುವ ಕಲ್ಯಾಣಿಯ ಹೂಳು ತೆಗೆದಾದಗ ಸಾಕಷ್ಟು ಕುರುಹುಗಳು ಸಿಗಬಹುದು, ಅವುಗಳನ್ನ ಆಧಾರವಾಗಿಟ್ಟುಕೊಂಡು ನಿರ್ಮಾಣ ಕಾರ್ಯ ಆಗಬೇಕು. ಸೌಂಧರ್ಯಕರಣ ಮಾಡಿದರೆ ಬಹು ದೊಡ್ಡ ಪ್ರವಾಸಿ ತಾಣ ವಾಗುವುದರಲ್ಲಿ ಯಾವುದೇ ಸಂಶಯವಿಲ್ಲ. ಭೋಗೇಶ್ವರ ದೇವಸ್ಥಾನದ ವಿನ್ಯಾಸ ಎಲ್ಲಿಯೂ ನೋಡಲು ಸಿಗದ ವಿಶಿಷ್ಟ ವಿನ್ಯಾಸವಿದೆ. ಅಭಿವೃದ್ಧಿ ಪಡಿಸಿದಾಗ ನಮ್ಮ ಪರಂಪರೆ ಬಗ್ಗೆ ಜಾಗೃತಿಯಾಗುತ್ತದೆ, ನಮ್ಮ ಪಾರಂಪರಿಕ ಸಂಸ್ಕೃತಿಯನ್ನು ಉಳಿಸಿಕೊಳ್ಳಬಹುದು ಎಂದ ಅವರು ಮುದನೂರು ಮತ್ತು ಏವೂರ ಸೇರಿದಂತೆ ಈ ತಾಣಗಳ ಅಭಿವೃದ್ಧಿಯಿಂದ ಈ ಭಾಗದಲ್ಲಿ ಒಂದು ಟೂರಿಜಂ ಸರ್ಕ್ಯೂಟ್ ಆಗಿ ನೋಡಬಹುದು ಎಂದು ಅಭಿಪ್ರಾಯ ಪಟ್ಟರು.

ಈ ಸಂದರ್ಭದಲ್ಲಿ ಪಟ್ಟಣದ ಪ್ರಮುಖರಾದ ಸುಮಿತ್ರಪ್ಪ ಸಾಹು ಅಂಗಡಿ, ಶಾಂತರಡ್ಡಿ ಚೌದ್ರಿ ಮುದನೂರ, ಡಾ. ಬೋಗಪ್ಪ ಅಸ್ಕಿ, ರಾಜಶೇಖರ ಸ್ವಾಮಿ ಹಿರೇಮಠ, ಮೋಹನರಡ್ಡಿ ಡಿಗ್ಗಾವಿ, ಚನ್ನಯ್ಯ ಸ್ವಾಮಿ ಚಿಕ್ಕಮಠ, ಪುರಸಭೆ ಸದಸ್ಯ ಶರಣಪ್ಪ ಯಾಳಗಿ, ಸಂಗಣ್ಣ ಸಾಹು ತುಂಬಗಿ, ಮಲ್ಲಿಕಾರ್ಜುನ ಅಂಗಡಿ, ಗುರುಬಸಪ್ಪ ಕುಂಬಾರ, ವೀರಣ್ಣ ಕಲಕೇರಿ, ಸೋಮನಗೌಡ ಪರಸನಳ್ಳಿ, ದೇವು ಹಡಪದ, ಗುರುರಾಜ ಅಂಗಡಿ, ಸೋಮು ಕುಂಬಾರ, ರೇವಣಸಿದ್ದ ಸೇರಿದಂತೆ ಹಲವರಿದ್ದರು.

# ಪಿ.ಕೆ.ಎಸ್.ಸಿ ತಂಡಕ್ಕೆ ಭರ್ಜರಿ ಗೆಲವು

• ಮಲ್ಲಮ್ಮ ನುಡಿ ವಾರ್ತೆ ಬೀದರ

ದಿನಾಂಕ 21–12–2025 ರಂದು ಬೆಳಗ್ಗೆ 10.30 ಗಂಟೆಗೆ ಬೀದರ ತಾಲೂಕಿನ ಯಾಕತಪುರ ಗ್ರಾಮದಲ್ಲಿ ನಾಗಪ್ಪ ಸಾಮಾಜಿಕ ಮತ್ತು ಸಾಂಸ್ಕೃತಿಕ ಸೇವಾ ಸಂಸ್ಥೆಯಿಂದ ಗ್ರಾಮೀಣ ಕ್ರೀಡಾಕೂಟ ಮತ್ತು ಕ್ರಿಕೆಟ್ ಪಂದ್ಯಾವಳಿಗೆ ನಾಗೂರಾ ಗ್ರಾಮ ಪಂಚಾಯತ ಅಧ್ಯಕ್ಷರಾದ ಶ್ರೀಮತಿ ಫುಲಮ್ಮಾ ಅವರು ಬ್ಯಾಟ್ ಮಾಡುವುದರ ಮೂಲಕ ಚಾಲನೆ ನೀಡಿದರು.

ಈ ಕ್ರಿಕೆಟ್ ಪಂದ್ಯಾವಳಿಯಲ್ಲಿ ಪಿ.ಕೆ.ಎಸ್.ಸಿ ತಂಡವು ಮೊದಲು ಬ್ಯಾಟ್ ಆಯ್ದುಕೊಂಡು ನಿಗದಿತ 10 ಓವರ್‌ಗಳಲ್ಲಿ 4 ವಿಕೆಟ್ ಕಳೆದುಕೊಂಡು 60 ರನ್ನಗಳು ಭಾರಿಸಿದರು ನಂತರ ಬ್ಯಾಟ ಮಾಡಿದ ಕೆಪಿ.ಎಸ್.ಸಿ ತಂಡವು ನಿಗದಿತ 10 ಓವರಗಳಲ್ಲಿ 5 ವಿಕೆಟ್ ಕಳೆದುಕೊಂಡು 43 ರನ್ ಭಾರಿಸುವುದರ ಮೂಲಕ ಸೋಲುನ್ನುಭವಿಸಿತು.

ಮ್ಯಾನ್ಯಾಫಿದಿ ಸಿರಿಸ್ ರೋಬಿನ್ ಹಲಗೆ



,ಮ್ಯಾನಫಿದಿ ಮ್ಯಾಚ್ ರಾಜಕುಮಾರ ಪಾಟೀಲ, ತನ್ನದಾಗಿಸಿಕೊಂಡರು ಈ ಪಂದ್ಯದಲ್ಲಿ ಗೆದ್ದ ತಂಡಕ್ಕೆ ಯಾಕತಾಪೂರ ಪಿ.ಕೆ.ಎಸ್. ಅಧ್ಯಕ್ಷರಾದ ಸೈಯದ್ ಅಹ್ಮದ್ ಮುದ್ದೆಯವರು ಟ್ರೊಫಿ ವಿತರಿಸಿದರು. ಈ ಸಂದರ್ಭದಲ್ಲಿ ನಾಗೂರಾ ಪಂಚಾಯತ ಉಪಾಧ್ಯಕ್ಷರಾದ ನರಸಪ್ಪಾ ಜಾನಕೆ, ಯಾಕತಪೂರ ಗ್ರಾ.ಪಂ.ಸದಸ್ಯರಾದ ಸಂಜುಕುಮಾರ ಕುತಾಬಾದ, ಪಂಡಾರಿ ವರ್ಮಾ, ಗ್ರಾಮದ ಮುಖಂಡರಾದ ಸಂಜುಕುಮಾರ ಕೋಲಿ, ಗುಂಡಪ್ಪಾ ಮಾಳಗೆ, ಮಂಚೆಂದ್ರ ಕೋಟೆ, ಶಮಿಯೋದ್ದಿನ್ , ಶಿವಕುಮಾರ ಬುಧೇರಾ, ಕಾಂತು ಮಾಳಗೆ, ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಬಿಜೆಪಿ ಮುಕ್ತ ಬಬಲೇಶ್ವರ ಮತಕ್ಷೇತ್ರ

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

ಬಬಲೇಶ್ವರ ಮತಕ್ಷೇತ್ರ ಬಿಜೆಪಿ ಮುಕ್ತವಾಗುತ್ತಿದೆ ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಹೇಳಿದ್ದಾರೆ. ಇಂದು ಸೋಮವಾರ ನಗರದ ಸಚಿವರ ಗೃಹ ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಕನಮಡಿ ಗ್ರಾಮದ ಬಿಜೆಪಿ ಮುಖಂಡ ಪ್ರಶಾಂತ ಸುಭಾಸಗೌಡ ಪಾಟೀಲ ಮತ್ತು ಅವರ ಬೆಂಬಲಿಗರನ್ನು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆ ಮಾಡಿಕೊಂಡು ಅವರು ಮಾತನಾಡಿದರು. ಬಬಲೇಶ್ವರ ಮತಕ್ಷೇತ್ರದಲ್ಲಿ ಬಿಜೆಪಿಯ ಅರ್ಧದಷ್ಟು ನಾಯಕರು ಮತ್ತು ಕಾರ್ಯಕರ್ತರು ಕಾಂಗ್ರೆಸ್ ಸೇರಲಿದ್ದಾರೆ. ಆರು ಬ್ಯಾಚ್ ಗಳಲ್ಲಿ ಈಗ ಒಂದು ಬ್ಯಾಚ್ ಕಾಂಗ್ರೆಸ್ಸಿಗೆ ಸೇರ್ಪಡೆಯಾಗಿದೆ. ಕನಮಡಿಯ ಸುಭಾಸಗೌಡ ಪಾಟೀಲ ಅವರ ಪುತ್ರ ಪ್ರಶಾಂತ ಸುಭಾಸಗೌಡ ಪಾಟೀಲ ಅವರು ಕಾಂಗ್ರೆಸ್ ಸೇರ್ಪಡೆಯಾಗಿ ಮರಳಿ ಮನೆಗೆ ಬಂದಿದ್ದಾರೆ. ಅವರಿಗೆ ಸ್ವಾಗತ ಕೋರುತ್ತೇನೆ. ಕನಮಡಿ ಗೌಡರ ಮನೆತನದ ಸಂಬಂಧಿಕರು ಜಿಲ್ಲಾದ್ಯಂತ



ಇದ್ದಾರೆ. ಅವರಿಂದ ಪಕ್ಷಕ್ಕೆ ಅನುಕೂಲವಾಗಲಿದೆ ಎಂದು ಸಚಿವರು ತಿಳಿಸಿದರು.

ಬಿಜೆಪಿ ತೊರೆದು ಕಾಂಗ್ರೆಸ್ ಸೇರ್ಪಡೆಯಾದ ಕನಮಡಿ ಮುಖಂಡ ಪ್ರಶಾಂತ ಸುಭಾಸಗೌಡ ಪಾಟೀಲ ಮಾತನಾಡಿ, ಅಕ್ಟೋಬರ್ ನಲ್ಲಿ ಯುನಿಯನ್ ಚುನಾವಣೆಯಲ್ಲಿ ನನ್ನನ್ನು ಬಬಲೇಶ್ವರ ಬಿಜೆಪಿ ಮುಖಂಡ ಮೊದಲು ಕಣಕ್ಕಿಳಿಸಿ ತರ ನಾಮಪತ್ರ ವಾಪಸ್ ಪಡೆಯಲು ಹೇಳಿದ್ದರು. ಆದರೆ, ಪ್ರತಿಷ್ಠೆಯ ಪ್ರಶ್ನೆಯಾದ ಹಿನ್ನೆಲೆ ಕಣದಲ್ಲಿ ಉಳಿದಿದ್ದೆ ಎಂದು ತಿಳಿಸಿದರು.

ಈ ವೇಳೆ, ಜಿಲ್ಲಾ ಕಾಂಗ್ರೆಸ್ ಮುಖಂಡರಾದ ಅಬ್ದುಲ ಹಮೀದ್ ಮುಶ್ರಿಫ್, ಡಾ. ಗಂಗಾಧರ ಸಂಬಣ್ಣಿ ಮುಂತಾದವರು ಉಪಸ್ಥಿತರಿದ್ದರು.

# ಕಾರ್ಖಾನೆಗಳ ಸುತ್ತಲಿನ ಹಳ್ಳಿಗಳಲ್ಲಿ ಅಪೌಷ್ಟಿಕತೆ ಕಾಡುತ್ತಿದೆ: ರುಕ್ಸಾನಾ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಇಲ್ಲಿನ ನಗರಸಭೆ ಮುಂದೆ ನಡೆದಿರುವ ಕಾರ್ಖಾನೆಗಳ ವಿರೋಧಿ 53ನೇ ದಿನದ ಅನರ್ಧಿಷ್ಟ ಧರಣಿಗೆ ಅಪೌಷ್ಟಿಕತೆ ಹೋಗಲಾಡಿಸಲು ಜಾಗೃತಿ ಮೂಡಿಸುತ್ತಿರುವ ಜಾಗೃತಿ ಸಂಸ್ಥೆ ಬೆಂಬಲಿಸಿತು. ಸಂಸ್ಥೆಯ ಪ್ರಮುಖರಾದ ರುಕ್ಸಾನಾ ಕುರುಬನವರ ಮಾತನಾಡಿ, ನಮ್ಮ ಸಂಸ್ಥೆ ತಾಲೂಕಿನ ಅಪೌಷ್ಟಿಕತೆ ಹೋಗಲಾಡಿಸಲು ಜಾಗೃತಿ ನೀಡುವ ಕೆಲಸ ಮಾಡುತ್ತಿದೆ. ಬಹಳಷ್ಟು ಕರ್ಖಾನೆಗಳು ಸುತ್ತುವರಿದ ಹಳ್ಳಿಯ ಜನರನ್ನು ಭೇಟಿ ಮಾಡಿದಾಗ ಅವರು ನಮಗೆ ಮೊದಲು ದೂರುವುದು ಕರ್ಖಾನೆಗಳನ್ನು. ಆ ಕರ್ಖಾನೆಗಳು ಮೊದಲು ದೂಳು, ಬೂದಿ, ಹೊಗೆ ಬಿಡುವುದನ್ನು ನಿಲ್ಲಿಸಬೆಕು. ಇಲ್ಲದಿದ್ದರೆ ನಾವು ಕೆಮ್ಮು, ದಮ್ಮು, ಟಿ.ಬಿ, ಅಸ್ತಮಾ, ಎದೆನೋವು, ಸುಸ್ತು, ಮೈಕೆರೆತ, ಕ್ಯಾನ್ಸರ್, ಪರ್ಶವಾಯು ರೋಗದಿಂದ ಸಾಯುತ್ತಿದ್ದೇವೆ. ನಾವು ಬದುಕಿದರಷ್ಟೇ ನೀವು ಹೇಳುವ ಪೌಷ್ಟಿಕತೆ ನಮಗೆ ತಿಳಿಯುತ್ತದೆ ಎನ್ನುತ್ತಾರೆ.



ಒಂರ್ಥದಲ್ಲಿ ಇಲ್ಲಿನ ಜನರು ಹೇಳುವ ಮಾತು ಎಷ್ಟೊಂದು ಗಂಭೀರವಾಗಿದೆ. ಇವರು ಬೆಳೆಯುವ ಫಸಲು ಗುಣಮಟ್ಟದ ಕೊರತೆಯಿಂದ ಕಳಪೆ ಆಹಾರ ತಯಾರಾಗಿ, ಈ ಆಹಾರ ಜನ ತಿಂದು ಮತ್ತಷ್ಟು ಅಪೌಷ್ಟಿಕತೆಯಿಂದ ನರಳುತ್ತಿದ್ದಾರೆ.

ನಾವು ಇದನ್ನು ಹೇಳಿದರೆ ನಮಗೆ ಮೊದಲು ಜೀವ ಉಳಿಸಿ ಎಂದು ದೂಳು ಬಾಧಿತ ಹಳ್ಳಿಗಳ ಜನ ಅಂಗಲಾಚಿ ಬೇಡಿಕೊಳ್ಳುತ್ತಾರೆ, ಇವರು ಆರೋಗ್ಯ ಮತ್ತು ಜೀವ ಉಳಿಸಿಕೊಳ್ಳಲು ನಡೆಸಿದ ಬದುಕಿನ ಹೋರಾಟ ನಿರಂತರವಾಗಿ ನಡೆಯುತ್ತಿದೆ ಎಂದಾಗ ಮೊದಲು ನಾವು ಮೊದಲು ಜವಾಬ್ದಾರಿ ತೆಗೆದುಕೊಳ್ಳುತ್ತೇವೆ ಎಂದರು. ಹೋರಾಟ ಮಾಡಲು ಸಹ ಭಯ ಇದ್ದಂತೆ ಕಾಣುತ್ತದೆ ಎಂದರು.

ಇಂದಿನ ಧರಣಿಗೆ ಕೊಪ್ಪಳ ನಗರಸಭೆ ಮಾಜಿ ಆಯುಕ್ತ ಬಿ. ರಾಮಚಂದ್ರ ಬೆಂಗಳೂರು ಇವರು ಮಾತನಾಡಿ, ಈ ಹೋರಾಟ ಅತ್ಯಂತ ಜನರಪರ ಕಾಳಜಿಯ ಹೋರಾಟವಾಗಿದೆ.

ನಾನು ಇಲ್ಲಿ ನಗರಸಭೆಯಲ್ಲಿ ಸೇವೆ ಸಲ್ಲಿಸಿದ್ದು, ಅಪಾರ ಪ್ರೀತಿ ಕೊಟ್ಟ ಜಾಗವಾಗಿದೆ. ಈ ಹೋರಾಟದಲ್ಲಿ ಕರೆದಾಗ ನಾನು ಬಂದು ಬೆಂಬಲ ಕೊಡುತ್ತೇನೆ ಎಂದು ಹೇಳಿದರು.

ಧರಣಿ ನೇತೃತ್ವವನ್ನು ಪ್ರಧಾನ ಸಂಚಾಲಕ ಅಲ್ಲಮಪ್ರಭು ಬೆಟ್ಟದೂರು, ಸಂಚಾಲಕ ಮಲ್ಲಿಕರ್ಜುನ ಬಿ. ಗೋನಾಳ, ಪುಷ್ಪಲತಾ ಏಳುಭಾವಿ, ಶಾಂತಯ್ಯ ಅಂಗಡಿ, ಶಂಭುಲಿಂಗಪ್ಪ ಹರಗೇರಿ, ರವಿ ಕಾಂತನವರ, ಹನುಮಂತಪ್ಪ ಗೊಂದಿ, ಎಸ್.ಬಿ.ರಾಜೂರು, ಎಸ್. ಮಹಾದೇವಪ್ಪ ಮಾವಿನಮಡು, ಯಮನೂರಪ್ಪ ಹಾಲಳ್ಳಿ ಬಸಾಪುರ, ಈಶ್ವರ ಹತ್ತಿ ವಹಿಸಿದ್ದರು. ಹೋರಾಟದಲ್ಲಿ ಜಾಗೃತಿ ಸಂಸ್ಥೆಯ ಮೈತ್ರಾ ಜೆ, ಪೂಜಾ ದನಕನದೊಡ್ಡಿ, ಯಂಕಪ್ಪ ಜ್ಯೋಗಿ, ಭೀಮಪ್ಪ ಯಲಬರ್ಗಾ, ಈರಯ್ಯ ಸ್ವಾಮಿ, ಮಂಜುನಾಥ ಕವಲೂರು, ಗಂಗಾಧರ ಭಾನಾಪುರ, ಗೌಸಮೋಹಿದ್ದೀನ್ ಠ್ದಾರ್, ಬಿ.ಜಿ.ಕರಿಗಾರ, ಮಾನವ ಬಂಧುತ್ವ ವೇದಿಕೆಯ ಕುಕನೂರು ಸಂಚಾಲಕ ಈಶಪ್ಪ ದೊಡ್ಡಮನಿ ಪಾಲ್ಗೊಂಡರು.

# ಅಸ್ಪೃಶ್ಯತೆ ನಿಷೇಧಿಸಿ ದೇವಾಲಯ ಪ್ರವೇಶಕ್ಕೆ ಒತ್ತಾಯ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಡಿ. 22–ರಾಜ್ಯ ಸರ್ಕಾರ ಭಾರತ ಸಂವಿಧಾನದ ಅನುಚ್ಛೇದ 17 ವನ್ನು ಸಂಪೂರ್ಣವಾಗಿ ಜಾರಿ ಮಾಡುವ ಮೂಲಕ ಅನುಸೂಚಿತ ಜಾತಿಗೆ ಅಂಟಿಕೊಂಡಿರುವ ಸಾಮಾಜಿಕ ಕಳಂಕವಾದ ಆಸ್ಪೃಶ್ಯತೆಯನ್ನು ನಿಷೇಧ ಮಾಡಿ ಅನುಸೂಚಿತ ಜಾತಿಯವರಿಗೆ ಹಳ್ಳಿಯಲ್ಲಿರುವ ಗ್ರಾಮ ದೇವರಗ್ರಾಮ ದೇವತೆಯ ದೇವಾಲಯಕ್ಕೆ ಪ್ರವೇಶ ಕಲ್ಪಿಸಬೇಕೆಂದು ಡಾ.ಅಂಬೇಡ್ಕರ್ ಪರಿಶಿಷ್ಟ ಜಾತಿಗಳ ಒಕ್ಕೂಟ–ಕರ್ನಾಟಕದ ರಾಜ್ಯಾಧ್ಯಕ್ಷ ಮಹೇಂದ್ರ ಕುಮಾರ್ ಮಿತ್ರ ಒತ್ತಾಯಿಸಿದರು.

ನಗರದ ಪತ್ರಿಕಾಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ದೇವಾಲಯಕ್ಕೆ ಪ್ರವೇಶ ನೀಡದೇ ಹೋದರೆ ಗಣರಾಜ್ಯೋತ್ಸವ ದಿನವನ್ನು ಆಚರಣೆ ಮಾಡುವುದರಲ್ಲಿ ಅರ್ಥವಿಲ್ಲವೆಂದರು.

ದಿನಾಂಕ 25.09.1932 ರಂದು ಡಾ. ಅಂಬೇಡ್ಕರ್, ಹಿಂದೂ ಮಹಾಸಭಾ ಮತ್ತು ಕಾಂಗ್ರೆಸ್ ಪಕ್ಷ ಮಧ್ಯೆ ಜರುಗಿದ ಪೂನಾ ಒಪ್ಪಂದ ಪ್ರಕಾರ ಆಸ್ಪೃಶ್ಯತೆಯನ್ನು ನಿಷೇಧವಾಗಬೇಕೆಂದರು. ಅನುಸೂಚಿತ ಜಾತಿಗೆ ಅಂಟಿಕೊಂಡಿರುವ ಸಾಮಾಜಿಕ ಕಳಂಕವನ್ನು [ಆಸ್ಪೃಶ್ಯತೆ) ನಿಷೇಧ ಮಾಡುವ ಮೂಲಕ ಕರ್ನಾಟಕ ಕರ್ನಾಟಕ ಸರ್ಕಾರದಲ್ಲಿ ಪ್ರಮುಖ ಖಾತೆ ಹೊಂದಿರುವ ಗೃಹ ಹಾಗೂ ಸಮಾಜ ಕಲ್ಯಾಣ ಸಚಿವರು ಅಸ್ಪೃಶ್ಯತೆಯನ್ನು



ನಿಷೇಧ ಮಾಡಲು ಮುಂದಾಗಬೇಕು ಇಲ್ಲದಿದ್ದರೆ ಸರ್ಕಾರದಲ್ಲಿರುವ ಗೃಹ ಹಾಗೂ ಸಮಾಜ ಕಲ್ಯಾಣ ಸಚಿವರು ತಮ್ಮ ರಾಜಿನಾಮೆಯನ್ನು ರಾಜ್ಯಪಾಲರಿಗೆ ಕೂಡಲೆ ಸಲ್ಲಿಸಬೇಕೆಂದು ಒತ್ತಾಯಿಸಿದರು.,

ರಾಯಚೂರು ತಾಲೂಕಿನ ಗಾರಲದಿನ್ನಿ ಗ್ರಾಮದಲ್ಲಿ ವಾಸಿಸುವ ಪ್ರತಿಯೊಬ್ಬರಿಗೂ ಗ್ರಾಮದ ದೇವಾಲಯಕ್ಕೆ ಪ್ರವೇಶವಿದೆ. ಇದು ದೇಶಕ್ಕೆ ಮಾದರಿ. ಆರ್.ಎಸ್.ಎಸ್. ನವರು ದೇಶ ಮತ್ತು ಧರ್ಮದ ಬಗ್ಗೆ ಆಸಕ್ತಿ ಹೊಂದಿದವರು ದೇವಾಲಯದ ಪ್ರವೇಶ ಕುರಿತು ಗಾರಲದಿನ್ನಿ ಗ್ರಾಮದಿಂದ ಪಾಠ ಕಲಿಯಬೇಕೆಂದು ಹೇಳುದರು.

ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯವು ನಾಗರಿಕ ಹಕ್ಕುಗಳ ಸಂರಕ್ಷಾಣ ಕಾಯ್ದೆ ಮತ್ತು ದೌರ್ಜನ್ಯ ತಡೆ ಕಾಯ್ದೆಯಡಿ ದಾಖಲಾದ ಪ್ರಕರಣಗಳನ್ನು ಮೇಲ್ವಿಚಾರಣೆ ಹಾಗೂ ತನಿಖೆ ಮಾಡುತ್ತದೆ ಮತ್ತು ಅನುಸೂಚಿತ ಜಾತಿಗಳು/ಅನುಸೂಚಿತ ಬುಡಕಟ್ಟುಗಳ ವಿಸ್ತರಿಸಲಾದ ಹಕ್ಕುಗಳು ಮತ್ತು ಪ್ರಯೋಜನಗಳ ಕಾವಲುಪಡೆಯಾಗಿದೆ. ರಾಯಚೂರು ಜಿಲ್ಲೆಯಲ್ಲಿ ದಾಖಲಾಗಿರುವ ಸುಳ್ಳು ಪರಿಶಿಷ್ಟ ಜಾತಿ/ಸುಳ್ಳು ಪರಿಶಿಷ್ಟ ಪಂಗಡ ಪ್ರಕರಣಗಳನ್ನು ನಾಗರೀಕ ಹಕ್ಕು ಜಾರಿ ನಿರ್ದೇಶನಾಲಯ ತನಿಖೆ ಮಾಡುತ್ತಿದೆ. ನಾಗರೀಕ ಹಕ್ಕು ಜಾರಿ ನಿರ್ದೇಶನಾಲಯವು ಸುಳ್ಳು ಪರಿಶಿಷ್ಟ ಜಾತಿ/ಸುಳ್ಳು ಪರಿಶಿಷ್ಟ ಪಂಗಡ ಪ್ರಕರಣಗಳ ಕುರಿತು ದೋಷರೊಪಣ ಪಟ್ಟಿಯನ್ನು ಆಟ್ರಿಸಿಟಿ ನ್ಯಾಯಾಲಯಕ್ಕೆ ಸಲ್ಲಿಸುವಾಗ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ (ದೌರ್ಜನ್ಯ ಪ್ರತಿಬಂಧ) ನಿಯಮಗಳು 1995 ದಲ್ಲಿರುವ ನಿಯಮ 7 (1) ರನ್ನು ಉಲ್ಲಂಘನೆ ಮಾಡುತ್ತಿದೆ. ನಿಯಮ 7 ರ ಪ್ರಕಾರ ಎಸ್.ಪಿ/ಎ. ಎಸ್.ಪಿ/ಡಿ.ಎಸ್.ಪಿ ತನಿಖಾಧಿಕಾರಿ ಇರತಕ್ಕದ್ದು. ಆದರೆ ನಮ್ಮ ರಾಯಚೂರು ಜಿಲ್ಲೆಯಲ್ಲಿ ಸುಳ್ಳು ಪರಿಶಿಷ್ಟ ಜಾತಿ/ಸುಳ್ಳು ಪರಿಶಿಷ್ಟ ಪಂಗಡ ಪ್ರಕರಣಗಳ ತನಿಖೆಯು ಸರ್ಕಲ್ ಇನ್ಸಪೆಕ್ಟರ್ (ಪಿ.ಐ) ರವರಿಂದ ಮಾಡಲಾಗುತ್ತಿದೆ. ಇದು ಕಾನೂನಿನ ಪ್ರಕಾರ ತಪ್ಪು ಮತ್ತು ಇಂತಹ ಪ್ರಕರಣಗಳು ನ್ಯಾಯಾಲಯಗಳಲ್ಲಿ ಬಿದ್ದು ಹೊಗುತ್ತವೆ. ರಾಯಚೂರು ಜಿಲ್ಲೆಯಲ್ಲಿ ಸುಳ್ಳು ಪರಿಶಿಷ್ಟ ಜಾತಿ/ಸುಳ್ಳು ಪರಿಶಿಷ್ಟ ಪಂಗಡ ಪ್ರಕರಣಗಳನ್ನು ತನಿಖೆ ಮಾಡಲು ಎಸ್. ಪಿ. ಕಛೇರಿಯನ್ನು ಸ್ಥಾಪಿಸಬೇಕು ಮತ್ತು ನಮ್ಮ ಜಿಲ್ಲೆಯಲ್ಲಿ ಕನಿಷ್ಟ 02 ರಿಂದ 03 ಡಿ.ಎಸ್.ಪಿ ರವರನ್ನು ನೇಮಕ ಮಾಡಬೇಕೆಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಮೇಘನಾಥ, ವಾಲ್ಮೀಕಿ ಸಮಾಜದ ಮುಖಂಡರು, ಅಂಜಿನೇಯ, ಮಾದಿಗ ಸಮಾಜದ ಮುಖಂಡರು, ವನರಸಿಂಹಲು ಪೋತಗಲ್ ಮಾದಿಗ ಸಮಾಜದ ಮುಖಂಡರು ಉಪಸ್ಥಿತರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.
PRGI NO. 120927
(RNINO:KARKAN/2011/48371)